RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 70 ಪುಟ: 06 ಶುಕ್ರವಾರ 07-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



ಬೆಂಗಾಲಿಯಾಗಿ ಬದಲಾದ ನಮ್ರತಾ

ದೇಶದ್ರೋಹದ ಆರೋಪ; ನಟ ಮೆಹರ್ ಶಾನ್ ಬಂಧನ

ಪರಭಾಷೆಯ ಸಿನಿ ರಂಗದಲ್ಲಿ ರುಕ್ಮಿಣಿ ಮೋಡಿ ↘ ಪುಟ 6

# ಸಿದ್ದು-ಬಿಎಸ್‌ವೈಗೆ ನಿರಾಳ

## ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ, ಪೋಕ್ಸೋ ಪ್ರಕರಣದಲ್ಲಿ ಯಡಿಯೂರಪ್ಪ ಇಬ್ಬರಿಗೂ ರಿಲೀಫ್

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬದ ವಿರುದ್ಧ ಮುಡಾ ನಿವೇಶನ ಹಂಚಿಕೆ ಪ್ರಕರಣದ ತನಿಖೆ ಸಿಬಿಐಗೆ ವಹಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿ ಹಾಗೂ ಪೋಕ್ಸೋ ಪ್ರಕರಣ ರದ್ದು ಪಡಿಸುಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್..ಯಡಿಯೂರಪ್ಪ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆಯಲ್ಲಿ ಹಾಲಿ ಮತ್ತು ಮಾಜಿ ಸಿಎಂಗಳಿಬ್ಬರಿಗೂ ಬಿಗ್ ರಿಲೀಫ್ ಸಿಕ್ಕಿದೆ.

ಕರ್ನಾಟಕ ಹೈಕೋರ್ಟ್‌ನ ಧಾರವಾಡ ಪೀಠದ ನ್ಯಾಯಮೂರ್ತಿ ನಾಗಪ್ರಸನ್ನ ಅವರು ಎರಡೂ ಪ್ರಕರಣಗಳ ಆದೇಶವನ್ನು ಇಂದು ಪ್ರಕಟಿಸಿದ್ದು, ಹಾಲಿ ಮತ್ತು ಸಿಎಂಗಳಿಗೆ ನಿರಾಳತೆ ದೊರಕಿದೆ.

ಮುಡಾ ನಿವೇಶನ ಹಂಚಿಕೆ ಅಕ್ರಮ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಹೈಕೋರ್ಟ್‌ನ ಮೆಟ್ಟಿಲೇರಿದ್ದು, ಈ ಅರ್ಜಿ ವಜಾಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ಆಲಿಸಿದ ಧಾರವಾಡ



ಹೈಕೋರ್ಟ್ ಪೀಠ ಈ ಆದೇಶ ನೀಡಿದೆ. ಮುಡಾ ಪ್ರಕರಣ ಸಂಬಂಧ ಲೋಕಾಯುಕ್ತ ತಂಡವೂ ಸಂಪೂರ್ಣ ವರದಿ ಸಿದ್ಧಪಡಿಸಿ, ಇದರಲ್ಲಿ ಮುಖ್ಯಮಂತ್ರಿ ಅವರ ಪಾತ್ರ ಏನೂ ಇಲ್ಲ ಎಂಬುದನ್ನು ನ್ಯಾಯಾಲಯಕ್ಕೆ ಲೋಕಾಯುಕ್ತ ತಿಳಿಸಿತ್ತು. ಇದನ್ನು ಆಲಿಸಿದ ನ್ಯಾ. ನಾಗಪಪ್ರಸನ್ನ ಅವರ ಪೀಠ ಲೋಕಾಯುಕ್ತ ಪೊಲೀಸರ ತನಿಖೆ ಅಸಮರ್ಪಕ ಎನ್ನುವುದಕ್ಕೆ ಕಾರಣಗಳಿಲ್ಲ, ಲೋಕಾಯುಕ್ತ ತನಿಖೆ ತಾರತಮ್ಯಪೂರಿತ ಎಂಬುದಕ್ಕೆ ಆಧಾರಗಳಿಲ್ಲ. ಲೋಕಾಯುಕ್ತ ಸ್ವತಂತ್ರ ತನಿಖಾ ಸಂಸ್ಥೆಯಾಗಿದೆ ಎಂದು ನ್ಯಾ.ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ಆದೇಶ ಪ್ರಕರಣವನ್ನು

ಸಿಬಿಐಗೆ ನೀಡಲು ನಿರಾಕರಿಸಿ ಆದೇಶ ಹೊರಡಿಸಿದೆ.

ಇನ್ನೂ ಬಂಧನದ ಭೀತಿ ಎದುರಿಸುತ್ತಿದ್ದ ಬಿಎಸ್‌ಯಡಿಯೂರಪ್ಪ ಅವರ ವಿರುದ್ಧದ ಪೋಕ್ಸೋ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ದೊರೆತಿದೆ. ಪೋಕ್ಸೋ ಪ್ರಕರಣ ರದ್ದುಪಡಿಸುವಂತೆ ಯಡಿಯೂರಪ್ಪ ಅವರು ಸಲ್ಲಿಸಿರುವ ಅರ್ಜಿ ಕುರಿತ ವಿಚಾರಣೆಯನ್ನು ಜ.17ರಂದು ಪೂರ್ಣಗೊಳಿಸಿ ಕಾಯ್ದಿರಿಸಿರುವ ತೀರ್ಪನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠ ಇಂದು ಪ್ರಕಟಿಸಿದೆ.ಪುಟ 2

## ಕಾನೂನು ಹೋರಾಟ ಮುಂದುವರೆಸುತ್ತೇನೆ



**ಬೆಂಗಳೂರು:** ಅರ್ಜಿ ವಜಾಗೊಂಡಿರುವುದು ಬೇಸರ ತಂದಿದೆ. ಆದರೆ ಇಲ್ಲಿಗೆ ನನ್ನ ಹೋರಾಟವನ್ನು ನಿಲ್ಲಿಸುವುದಿಲ್ಲ. ಈ ಸಂಬಂಧ ಸರ್ವೋಚ್ಚ ನ್ಯಾಯಾಲಯದ ಮೊರೆ ಹೋಗತ್ತೇನೆ. ಕಾನೂನು ಹೋರಾಟ ಮುಂದುವರೆಸುತ್ತೇನೆ ಎಂದು ಸ್ನೇಹಮಯಿ ಕೃಷ್ಣ ಹೇಳಿದ್ದಾರೆ. ಉಚ್ಚ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಮೇಲ್ಮನವಿ .ಪುಟ 2



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ನಿವಾಸದಲ್ಲಿ ಎರಡನೇ ದಿನದ ಇಲಾಖಾವಾರು ಬಜೆಟ್ ಪೂರ್ವ ಸಭೆಗಳನ್ನು ಆರಂಭಿಸಿದ್ದು ಮೊದಲಿಗೆ ಸಮಾಜ ಕಲ್ಯಾಣ ಇಲಾಖೆಯ ಜೊತೆ ಸಭೆ ನಡೆಸಿದರು.

## ನ್ಯಾಯಾಲಯದ ತೀರ್ಪು ನಿರೀಕ್ಷೆ ಇತ್ತು


**ಬೆಂಗಳೂರು:** ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆ ಅಗತ್ಯವಿಲ್ಲ ಎಂದು ನ್ಯಾಯಾಲಯ ನೀಡಿರುವ ತೀರ್ಪನ್ನು ನಿರೀಕ್ಷೆ ಮಾಡಿದ್ದೆವು. ಈ ಪ್ರಕರಣದಲ್ಲಿ ಸಿಬಿಐ ತನಿಖೆಗೆ ಕೊಡುವ ಅಂಶಗಳು ಇಲ್ಲ ಎಂಬುದು ತಮ್ಮ ಗಮನದಲ್ಲಿತ್ತು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧದ ಮುಡಾ ಪ್ರಕರಣದ ಬಗ್ಗೆ ಸಿಬಿಐ ತನಿಖೆಯನ್ನು ತಿರಸ್ಕರಿಸಿರುವ ರಾಜ್ಯ ಹೈಕೋರ್ಟ್ ತೀರ್ಪಿನ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಲೋಕಾಯುಕ್ತ ಸಂಸ್ಥೆಯ ಬಗ್ಗೆ ನಮಗೆ ನಂಬಿಕೆ ಇರಬೇಕು. ಅದರಂತೆ ನ್ಯಾಯಾಲಯ ಲೋಕಾಯುಕ್ತ ಸಂಸ್ಥೆ ಮೇಲೆ ವಿಶ್ವಾಸವಿಟ್ಟು ಸಿಬಿಐ ತನಿಖೆಗೆ ಪುಟ 2

## ಸಿದ್ದರಾಮಯ್ಯನವರನ್ನು ಆರೋಪಮುಕ್ತರನ್ನಾಗಿ ಮಾಡಿಲ್ಲ

**ಬೆಂಗಳೂರು:** ಮೈಸೂರಿನ ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿರಪರಾಧಿ ಎಂಬುದಾಗಿ ಹೈಕೋರ್ಟ್ ಹೇಳಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ.



ಇಂದು ಮಾಧ್ಯಮದವರ ಜೊತೆ ಮಾತನಾಡಿದ ಅವರು, ಮೈಸೂರಿನ ಮುಡಾ ಹಗರಣದಲ್ಲಿ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ರಾಜ್ಯ ಹೈಕೋರ್ಟಿನಲ್ಲಿ ಸಂಪೂರ್ಣ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಕೋರಿದ್ದರು. ಆ ಅರ್ಜಿಯನ್ನು ರಾಜ್ಯ ಹೈಕೋರ್ಟ್ ತಿರಸ್ಕರಿಸಿದೆ. ಅದರ ಅರ್ಥ ಸಿಎಂ ಸಿದ್ದರಾಮಯ್ಯನವರು ನಿರಪರಾಧಿ ಎಂದು ಹೈಕೋರ್ಟ್ ಹೇಳಿಲ್ಲ ಎಂದು ವಿವರಿಸಿದರು.

ಸಿದ್ದರಾಮಯ್ಯನವರನ್ನು ಆರೋಪಮುಕ್ತರನ್ನಾಗಿ ಹೈಕೋರ್ಟ್ ಮಾಡಿಲ್ಲ. ಸಿಬಿಐ ತನಿಖೆಗೆ ಕೊಡುವುದಿಲ್ಲ ಎಂಬ ತೀರ್ಪನ್ನು ರಾಜ್ಯ ಹೈಕೋರ್ಟ್ ಹೇಳಿದೆ ಎಂದು ತಿಳಿಸಿದರು. ಇದರಿಂದ ಮೈಸೂರಿನ ಮುಡಾ ಹಗರಣದ ವಿಷಯದಲ್ಲಿ ಸಿಎಂ ಕುಟುಂಬ ಒಳಗೊಂಡ ಕುರಿತ ಬಿಜೆಪಿ ಹೋರಾಟ ಮತ್ತು ಪಾದಯಾತ್ರೆಗೆ ಹಿನ್ನಡೆ ಆಗಿಲ್ಲ ಎಂದು ಅವರು ನುಡಿದರು.

ಲೋಕಾಯುಕ್ತ ಮತ್ತು ಇ.ಡಿ. ತನಿಖೆ ನಡೆಯುತ್ತಿದೆ. ಮುಂದೇನಾಗುತ್ತದೆ ಕಾದು ನೋಡೋಣ ಎಂದು ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ರಾಜ್ಯ ಹೈಕೋರ್ಟ್ ತನ್ನ ತೀರ್ಪಿನಲ್ಲಿ ಸಿಎಂ ಕುಟುಂಬ ನಿರಪರಾಧಿಗಳೆಂದು ಹೇಳಿದೆಯೇ ಎಂದೂ ಅವರು ಪ್ರಶ್ನಿಸಿದರು. ಪುಟ 2

## 5 ವರ್ಷಗಳ ಬಳಿಕ ರೆಪೋ ದರ ಇಳಿಕೆ

**ನವದೆಹಲಿ:** ಐದು ವರ್ಷಗಳ ಬಳಿಕ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ರೆಪೋ ದರವನ್ನ ಇಳಿಕೆ ಮಾಡಿದೆ.

ಶೇ. 6.50ರಷ್ಟಿದ್ದ ಬಡ್ಡಿದರವನ್ನು ಶೇ. 6.25ಕ್ಕೆ ಇಳಿಸುವುದಾಗಿ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಘೋಷಣೆ ಮಾಡಿದ್ದಾರೆ. ಭಾರತೀಯ ರಿಸರ್ವ್ ಬ್ಯಾಂಕ್‌ನ ಮಾನಿಟರಿ ಪಾಲಿಸಿ ಕಮಿಟಿ ರೆಪೋದರವನ್ನು 0.25 ಪ್ರತಿಶತದಷ್ಟು ಇಳಿಕೆ ಮಾಡುವ ನಿರ್ಧಾರ ಕೈಗೊಂಡಿದೆ. ಮೊನ್ನೆಯಿಂದ ನಡೆದಿದ್ದ ಎಂಪಿಸಿ ಸಭೆಯ ಬಳಿಕ ಪುಟ 2

## ಕುಂಭಮೇಳ: ಸೆಕ್ಟರ್ 18ರಲ್ಲಿ ಬೆಂಕಿ ಅವಘಡ

**ಪ್ರಯಾಗ್ ರಾಜ್:** ಉತ್ತರ ಪ್ರದೇಶದ ಪ್ರಯಾಗ್ ರಾಜ್ ನಲ್ಲಿ ನಡೆಯುತ್ತಿರುವ ಮಹಾಕುಂಭ ನಗರದ ಸೆಕ್ಟರ್ 18 ರ ಶಿಬಿರದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು ಜನರಲ್ಲಿ ಆತಂಕ ಎದುರಾಗಿದೆ. ಬೆಂಕಿ ಕಾಣಿಸಿಕೊಂಡ ತಕ್ಷಣ ಅಗ್ನಿ ಶಾಮಕ ಸಿಬ್ಬಂಧಿ ಆಗಮಿಸಿ ಬೆಂಕಿ ನಂದಿಸಿದ್ದು ಯಾವುದೇ ಸಾವುನೋವುಗಳು ವರದಿಯಾಗಿಲ್ಲ ಎಂದು ಅಗ್ನಿಶಾಮಕ ಅಧಿಕಾರಿಗಳು ತಿಳಿಸಿದ್ದಾರೆ. ಪುಟ 2

## ಅಪಘಾತ: ನಾಲ್ವರು ಸಾವು

**ಮಧ್ಯಪ್ರದೇಶ:** ಸರಣಿ ರಸ್ತೆ ಅಪಘಾತದಲ್ಲಿ ನಾಲ್ವರು ಸಾವನ್ನಪ್ಪಿದ್ದು, 10 ಜನರು ಗಾಯಗೊಂಡಿರುವ ಘಟನೆ ಮಾನ್ಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಗುರುವಾರ ತಡರಾತ್ರಿ ಸಂಭವಿಸಿದೆ. ಪುಟ 2

## ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆಗೆ ಅಂಕಿತ ಹಾಕದ ರಾಜ್ಯಪಾಲರು!

**ಬೆಂಗಳೂರು:** ರಾಜ್ಯದಲ್ಲಿ ಪ್ರತಿನಿತ್ಯ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಿರುಕುಳ ದಿಂದಾಗಿ ಗ್ರಾಮೀಣ ಜನರು ಸಾವಿಗೆ ಶರಣಾಗುತ್ತಿರುವ ಬೆನ್ನಲ್ಲಿಯೇ ರಾಜ್ಯ ಸರ್ಕಾರದಿಂದ ಇದಕ್ಕೆ ಕಡಿವಾಣ ಹಾಕು ವುದಕ್ಕೆ ಸುಗ್ರೀವಾಜ್ಞೆಯನ್ನು ಹೊರಡಿಸಿ ರಾಜ್ಯಪಾಲರ ಅಂಕಿತಕ್ಕೆ ಕಳುಹಿಸಲಾಗಿತ್ತು. ಆದರೆ ಇದೀಗ ರಾಜ್ಯಪಾಲರು ಹಲವು ಸ್ಪಷ್ಟನೆಯನ್ನು ಕೇಳಿ ರಾಜ್ಯ ಸರ್ಕಾರದ ಸುಗ್ರೀವಾಜ್ಞೆಗೆ ಅಂಕಿತವನ್ನು ಹಾಕದೇ ವಾಪಸ್ ಕಳುಹಿಸಿದ್ದಾರೆ.

'ಸರ್ಕಾರದ ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆಗೆ ರಾಜ್ಯಪಾಲರು ತಣ್ಣೀರೆ ರಚಿದ್ದಾರೆ. ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ಸುಗ್ರೀವಾಜ್ಞೆಗೆ ಅಂಕಿತ ಹಾಕದೇ ವಾಪಸ್ ಕಳುಹಿಸಿದ್ದಾರೆ. ಸುಗ್ರೀವಾಜ್ಞೆ ಮೂಲಕ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಬ್ರೇಕ್ ಹಾಕಲು ಮುಂದಾಗಿತ್ತು. ಇದೀಗ ರಾಜ್ಯಪಾಲರು ಹಲವು ಸ್ಪಷ್ಟನೆ ಕೇಳಿ ಸುಗ್ರೀವಾಜ್ಞೆ ವಾಪಸ್ ಕಳಿಸಿದ್ದಾರೆ. ರಾಜ್ಯಪಾಲರಿಂದ ಹಲವು ಸ್ಪಷ್ಟನೆ ಕೇಳಿ ಸರ್ಕಾರಕ್ಕೆ ಸುಗ್ರೀವಾಜ್ಞೆ ವಾಪಸ್



ಕಳಿಸಲಾಗಿದ್ದು, ಎಲ್ಲ ಸ್ಪಷ್ಟನೆಯನ್ನು ಕೊಟ್ಟ ನಂತರ ರಾಜ್ಯಪಾಲರು ಅಂಕಿತ ಹಾಕಲಿದ್ದಾರೆಯೇ ಎಂಬುದನ್ನು ಕಾದುನೋಡಬೇಕಿದೆ.

ಸುಗ್ರೀವಾಜ್ಞೆಯಲ್ಲಿ ಸಾಲ ಪಡೆದವರ ರಕ್ಷಣೆಗೆ ಮಾತ್ರವೇ ಹರಿಸಿದೆ. ಸಹಜ ನ್ಯಾಯದ ಅಡಿಯಲ್ಲಿ ಸಾಲ ಕೊಟ್ಟವರಿಗೆ ರಕ್ಷಣೆ ಕಾಣಿಸುತ್ತಿಲ್ಲ. ಸುದೀರ್ಘ ಅವಧಿಯಲ್ಲಿ ಇದು ಮಾರಕವಾಗಲಿದೆ. ಮೈಕ್ರೋಫೈನಾನ್ಸ್ ಸಂಸ್ಥೆಗಳು 3 ಲಕ್ಷ ರೂ.ಗಿಂತ ಜಾಸ್ತಿ ಸಾಲ ಕೊಡುವುದಿಲ್ಲ. ನೀವು 5 ಲಕ್ಷ ದಂಡ ಹೇಗೆ ಹಾಕುತ್ತೀರಾ? ಎಂದು ಪ್ರಶ್ನೆ ಮಾಡಿದ್ದಾರೆ. ಸಾಲ ಪಡೆಯುವವನ ಬಳಿ ಏನೂ ಪುಟ 2

ದಾಖಲೆ ತಗೆದುಕೊಳ್ಳಬಾರದು ಎಂದು ಹೇಳಿದ್ದೀರಾ? ಆದರೆ, ಇದು ಸರ್ಕಾರಿ ಸಂಸ್ಥೆಗಳ ಸಾಲದ ವೇಳೆ ಅನುಸರಿಸಬೇಕಾದ ಪರಿಸ್ಥಿತಿ ಎದುರಾಗಬಹುದು ಎಂದು ರಾಜ್ಯಪಾಲರು ಪ್ರಶ್ನೆ ಮಾಡಿದ್ದಾರೆ.

ಇನ್ನು ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಗೆ ಶಿಕ್ಷೆ ಪ್ರಮಾಣ 10 ವರ್ಷ ವಿಧಿಸಲಾಗಿದೆ. ಈ ಶಿಕ್ಷೆ ಪ್ರಮಾಣದಲ್ಲಿ ಯಾವುದೇ ಲಾಜಿಕ್ ಇಲ್ಲ. ಪ್ರಾಮಾಣಿಕವಾಗಿ ಸಾಲ ಕೊಟ್ಟವರಿಗೂ ಇದು ಎಫೆಕ್ಟ್ ಆಗಲಿದೆ. ಪ್ರಾಮಾಣಿಕವಾಗಿ ಸಾಲ ಮರುಪಾವತಿ ಮಾಡುವವರಿಗೂ ಸಮಸ್ಯೆ ಆಗಲಿದೆ. ಬಜೆಟ್ ಅಧಿವೇಶನದ ಹತ್ತಿರವಾಗ್ತಿರುವಾಗ ಸದನದಲ್ಲಿ ಸಾದಕಬಾಧಕ ಚರ್ಚಿಸಿ. ಈಗ ಪುಟ 2

## ಸತ್ಯಮೇವ ಜಯತೆ

**ಕಲಬುರಗಿ:** ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಹೈಕೋರ್ಟ್ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಸಿಬಿಐ ತನಿಖೆಯ ಅವಶ್ಯಕತೆ ಇಲ್ಲ ಎಂದು ನೀಡಿರುವ ತೀರ್ಪಿಗೆ ರಾಜ್ಯದ ಅರಣ್ಯ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ 'ಸತ್ಯಮೇವ ಜಯತೇ' ಎಂದು ವ್ಯಾಖ್ಯಾನಿಸಿದರು.

ಕಲಬುರಗಿ ನಗರದ ಶಹಾ ಬಜಾರ್ ಚವದಾಪುರಿ ಹಿರೇ ಮಠದಿಂದ ಶ್ರೀ ಶರಣಬಸವೇಶ್ವರ ದೇವಾಲಯ ಆವರಣದಲ್ಲಿ ಹಮ್ಮಿಕೊಂಡಿರುವ ಶಿವ ಶಕ್ತಿ ಸಂಗಮ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವುದಕ್ಕೂ ಮುನ್ನ ಸುದ್ದಿಗಾರರಿಂದಿಗೆ ಮಾತನಾಡಿದ ಅವರು, ಉಚ್ಚ ನ್ಯಾಯಾಲಯದ ತೀರ್ಪು ಸ್ವಾಗತಿಸುವುದಾಗಿ ಹೇಳಿದರು.




ವಿರೋಧ ಪಕ್ಷಗಳು ದುರುದ್ದೇಶದಿಂದ ಆಡಳಿತ ಪಕ್ಷವನ್ನು ಬುಡಮೇಲು ಮಾಡಲು ಮುಂದಾಗಿದ್ದವು. ಹೊಟ್ಟೆಕಿಚ್ಚಿನಿಂದ ಮಾಡಿದ ವಿರೋಧ ಪಕ್ಷಗಳ ಆರೋಪದಲ್ಲಿ ಹುರುಳಿಲ್ಲ ಎಂಬುದು ಇದರಿಂದ ಸಾಬೀತಾಗುತ್ತದೆ ಎಂದರು. ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾತ್ರ ಯಾವುದೇ ರೀತಿಯಲ್ಲಿ ಇಲ್ಲ ಎಂದು ಮೊದಲಿನಿಂದಲೂ ಹೇಳುತ್ತಲೇ ಬಂದಿದ್ದೇವೆ. ಇಲ್ಲಿಯವರೆಗೆ ಅವರ ಪಾತ್ರವಿದೆ ಎಂಬುದಕ್ಕೆ ಏನಾದರೂ ಸಾಕ್ಷಿ ಇದೆಯೇ ಎಂದು ಅವರು ಪ್ರಶ್ನಿಸಿದರು.

ಇದೇವೇಳೆ, ಪೋಕ್ಸೊ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಬಂಧಿಸದಂತೆ ಕೋರ್ಟ್ ನಿರ್ದೇಶನ ನೀಡಿರುವ ಕುರಿತು ಸುದ್ದಿಗಾರರ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿದ ಸಚಿವ ಖಂಡ್ರೆ, 'ಆ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ' ಎಂದು ಸ್ಪಷ್ಟಪಡಿಸಿದರು. ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಒಡೆತನದ ಸಿದ್ದಸಿರಿ ಕಾರ್ಖಾನೆ ಪುಟ 2

## ದೇಶ, ಧರ್ಮ ಯಾವುದೇ ಆದರೂ ಮಾನವೀಯತೆ ಮುಖ್ಯ

**ಕನಕಪುರ:** ದೇಶ, ಧರ್ಮ ಯಾವುದೇ ಆಗಿರಲಿ ಮಾನವೀಯತೆ ಮುಖ್ಯ. ಸರಪಳಿ ಕಟ್ಟಿ ನಡೆಸಿಕೊಳ್ಳುವುದು ಸರಿಯಲ್ಲ. ಇದು ಖಂಡನೀಯ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಕನಕಪುರದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದ ಅವರು, ಅಕ್ರಮವಾಗಿ ನೆಲೆಸಿದ್ದಾರೆ ಎಂದು ಕೆಲವು ಭಾರತೀಯರನ್ನು ಅಮೆರಿಕ ಸರ್ಕಾರ ಕೈ ಕಾಲಿಗೆ ಕಬ್ಬಿಣದ ಸರಪಳಿ ಕಟ್ಟಿ ಭಾರತಕ್ಕೆ ವಾಪಸ್ ಕಳಿಸಿರುವ ಬಗ್ಗೆ ಕೇಳಿದಾಗ, "ಈ ಹಿಂದೆ ಕೂಲಿ ಕಾರ್ಮಿಕರಿಗೆ ಸರಪಳಿ ಹಾಕಿ ಕಟ್ಟುತ್ತಿದ್ದದ್ದನ್ನು ನಾವು ನೋಡಿದ್ದೇವೆ. ಅದನ್ನು ತಪ್ಪಿಸಲು ಸರ್ಕಾರ ಕಾನೂನು ತಂದು ಶಿಕ್ಷೆ ನೀಡಿದೆ. ಆದರೆ



ಮುಂದುವರಿದ, ಜಾಗೃತಿ ಇರುವ ದೇಶಗಳಲ್ಲಿ ಈ ರೀತಿ ನಡೆದಿರುವುದು ಖಂಡನೀಯ" ಎಂದರು.

"ಅಕ್ರಮವಾಗಿ ಅವರ ದೇಶದಲ್ಲಿ ನೆಲೆಸಿದ್ದರೆ, ಅದಕ್ಕೆ ಯಾವ ಶಿಕ್ಷೆ ನೀಡಬೇಕೋ ನೀಡಲಿ. ಅದನ್ನು ಬಿಟ್ಟು, ಈ ರೀತಿ ಖೈದಿಗಳಿಗೆ ಹಾಕಿದಂತೆ ಸರಪಳಿ ಹಾಕಿರುವುದನ್ನು ಯಾರಿಂದಲೂ ಒಪ್ಪಲು ಸಾಧ್ಯವಿಲ್ಲ. ಇದು ಮಾನವ ಕುಲಕ್ಕೆ ಅಗೌರವ" ಎಂದು ಕಿಡಿಕಾರಿದರು.

ಗ್ಯಾರಂಟಿ ಹೊರೆ ಮಧ್ಯೆ ಬಜೆಟ್ ಮಂಡನೆಗೆ ಸಿದ್ಧತೆ ನಡೆಯುತ್ತಿದೆ ಎಂದು ಕೇಳಿದಾಗ, "ಗ್ಯಾರಂಟಿ ಯೋಜನೆಗಳು ಆರ್ಥಿಕ ಹೊರೆ ಎಂದು ಹೇಳಿದ್ದು ಯಾರು? ಇದು ಜನರ ಬದುಕಿಗೆ ಸರ್ಕಾರ ಕೊಟ್ಟಿರುವ ಶಕ್ತಿ. ಜನರ ಆರ್ಥಿಕ ಪುಟ 2

ಮೊದಲ ಪುಟದಿಂದ

## ಸಿದ್ದು–ಬಿಎಸ್‌ವೈಗೆ ನಿರಾಳ

ಪ್ರಕರಣದ ಕುರಿತು ಸದಾಶಿವನಗರ ಠಾಣಾ ಪೊಲೀಸರು 2024ರ ಮಾ. 14ರಂದು ಯಡಿಯೂರಪ್ಪ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ಅದನ್ನು ರದ್ದುಪಡಿಸಲು ಕೋರಿ ಯಡಿಯೂರಪ್ಪ ಅವರು 2024ರ ಜೂ.13ರಂದು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಆ ಅರ್ಜಿಯನ್ನು ಜೂ.14ರಂದು ವಿಚಾರಣೆ ನಡೆಸಿದ್ದ ಹೈಕೋರ್ಟ್, ಪ್ರಕರಣದ ತನಿಖೆಗೆ ತಡೆ ನೀಡಲು ನಿರಾಕರಿಸಿತ್ತಾದರೂ ಯಡಿಯೂರಪ್ಪ ಅವರನ್ನು ಬಂಧಿಸದಂತೆ ಸಿಐಡಿ ತನಿಖಾಧಿಕಾರಿಗಳಿಗೆ ಸೂಚಿಸಿತ್ತು. ನಂತರ ಪ್ರಕರಣದ ಕುರಿತು ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ಖುದ್ದು ಹಾಜರಾಗುವುದರಿಂದ ಯಡಿಯೂರಪ್ಪ ಅವರಿಗೆ ವಿನಾಯಿತಿ ನೀಡಿ, 2024ರ ಜು.12ರಂದು ಹೈಕೋರ್ಟ್ ಮತ್ತೊಂದು ಆದೇಶ ಮಾಡಿತ್ತು. ಅಂತಿಮವಾಗಿ 2025ರ ಜ.17ರಂದು ಅರ್ಜಿ ವಿಚಾರಣೆ ಪೂರ್ಣಗೊಳಿಸಿ ತೀರ್ಪು ಕಾಯ್ದಿರಿಸಿತ್ತು.

## ಸೆಕ್ಟರ್ 18ರಲ್ಲಿ ಬೆಂಕಿ ಅವಘಡ

ಖಾಕ್ ಚೌಕ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಯೋಗೇಶ್ ಚತು ರ್ವೇದಿ ಮಾತನಾಡಿ, “ಹಳೆಯ ಜಿಟಿ ರಸ್ತೆಯ ತುಳಸಿ ಚೌರಾಹಾ ಬಳಿಯ ಶಿಬಿರದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಅಗ್ನಿಶಾಮಕ ದಳದವರು ಬೆಂಕಿಯನ್ನು ಬಹುತೇಕ ನಿಯಂತ್ರಣಕ್ಕೆ ತರುವಲ್ಲಿ ಯಶಸ್ವಿಯಾಗಿದ್ದಾರೆ ಎಂದಿದ್ದಾರೆ

ಮಹಾಕುಂಭ ನಗರದಲ್ಲಿ ಬೆಂಕಿ ಕಾಣಿಸಿಕೊಂಡಿದೆ ಪರಿಸ್ಥಿತಿಯನ್ನು ನಿಯಂತ್ರಿಸಲು ಅಗ್ನಿಶಾಮಕ ದಳದವರು ಕೆಲಸ ಮಾಡುತ್ತಿದ್ದಾರೆ ಮತ್ತು ಇಲ್ಲಿಯವರೆಗೆ ಯಾವುದೇ ಸಾವುನೋವುಗಳು ಸಂಭವಿಸಿಲ್ಲ ಎಂದು ಹೇಳಿದ್ದಾರೆ ಕಳೆದ ತಿಂಗಳು ಇದೇ ರೀತಿಯ ಘಟನೆ ನಡೆದಿದ್ದು, ಸಿಲಿಂಡರ್ ಸ್ಫೋಟದಿಂದಾಗಿ ಮಹಾ ಕುಂಭಮೇಳದಲ್ಲಿ ದೊಡ್ಡ ಬೆಂಕಿ ಕಾಣಿಸಿಕೊಂಡು ಒಬ್ಬ ವ್ಯಕ್ತಿ ಗಾಯಗೊಂಡರು ಮತ್ತು ಸೆಕ್ಟರ್ 19ರಲ್ಲಿ 18 ಟೆಂಟ್‌ಗಳು ಸುಟ್ಟುಹೋಗಿದ್ದವು. 15 ಅಗ್ನಿಶಾಮಕ ದಳದವರು ಒಂದು ಗಂಟೆಯೊಳಗೆ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೌನಿ ಅಮಾವಾಸ್ಯೆಗೆ ಮುಂಚಿತವಾಗಿ ಸಿದ್ಧತೆಗಳನ್ನು ಪರಿಶೀಲಿಸಲು ಪ್ರಯಾಗರಾಜ್‌ನಲ್ಲಿದ್ದ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಸ್ಥಳಕ್ಕೆ ಆಗಮಿಸಿ, ಭವಿಷ್ಯದಲ್ಲಿ ಅಂತಹ ಯಾವುದೇ ಘಟನೆ ನಡೆಯದಂತೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರು ಗಾಯಗೊಂಡ ಹಲವರಿಗೆ ಪ್ರಥಮ ಚಿಕಿತ್ಸೆ ಪಡೆದ ನಂತರ, ಜಸ್ಪ್ರೀತ್ ಅವರನ್ನು ಪ್ರಯಾಗರಾಜ್‌ನ ಸ್ವರೂಪ್‌ರಾಣಿ ವೈದ್ಯಕೀಯ ಕಾಲೇಜಿಗೆ ಸ್ಥಳಾಂತರಿಸಲಾಯಿತು ಗಾಯಾಳುಗಳ ಸ್ಥಿತಿ ಅಪಾಯದಿಂದ ಪಾರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ

## ಹೋರಾಟ ಮುಂದುವರೆಸುತ್ತೇನೆ

ಸಲ್ಲಿಸುತ್ತೇನೆ. ಈ ಸಂಬಂಧ ವಕೀಲರೊಂದಿಗೆ ಚರ್ಚಿಸಲಿದ್ದೇನೆ. ಅರ್ಜಿ ತಿರಸ್ಕಾರದ ಅಂಶಗಳನ್ನು ಪರಾಮರ್ಶಿಸಿ ಪೂರಕ ಅಂಶಗಳನ್ನು ಸಂಗ್ರಹಿಸಿ ಅರ್ಜಿ ಹಾಕುತ್ತೇನೆ ಎಂದು ತಿಳಿಸಿದರು. ಲೋಕಾಯುಕ್ತ ಸಂಸ್ಥೆಯೂ ಸರಿಯಾದ ರೀತಿಯಲ್ಲಿ ತನಿಖೆ ನಡೆಸಿಲ್ಲ. ಏಕಪಕ್ಷೀಯವಾಗಿ ಸಂಸ್ಥೆ ವರದಿ ಸಿದ್ಧಪಡಿಸಿದೆ. ಮುಡಾ ಪ್ರಕರಣದ ಸತ್ಯಸತ್ಯಾತೆಗಳು ಹೊರಬರಬೇಕಿದ್ದರೆ, ಸ್ವತಂತ್ರ ತನಿಖಾ ಸಂಸ್ಥೆಯ ತನಿಖೆಗೆ ನೀಡಲೇ ಬೇಕು ಎಂದು ಅವರು ಒತ್ತಾಯಿಸಿದರು.ಇಲ್ಲಿ ನಾವು ಸಿದ್ದರಾಮಯ್ಯ ಅವರ ವಿರುದ್ಧವಷ್ಟೇ ತನಿಖೆಗೆ ಆಗ್ರಹಿಸುತ್ತಿಲ್ಲ, ನಾವು ಅರ್ಜಿಯಲ್ಲಿ 50:50 ನಿವೇಶನ ಹಂಚಿಕೆ ಸಂಬಂಧ ದೂರು ದಾಖಲಿಸಿದ್ದು, ನಿಷ್ಪಕ್ಷಪಾತ ತನಿಖೆಗೆ ಒತ್ತಾಯಿಸುತ್ತಿದ್ದೇವೆ ಎಂದು ನುಡಿದರು.

ಒಂದು ಯುದ್ಧದಲ್ಲಿ ಹೇಗೆ ಸೋಲು–ಗೆಲುವು ಇರುತ್ತದೆಯೋ ಹಾಗೆ ಈ ಪ್ರಕರಣದಲ್ಲಿ ಹಿನ್ನಡೆ ಕಂಡಿರಬಹುದು. ಆದರೆ ಇದನ್ನು ಇಲ್ಲಿಗೆ ಬಿಡುವುದಿಲ್ಲ. ಸರಿಯಾದ ತೀರ್ಪು ಸಿಗುವವರೆಗೂ ನಾನು ಕಾನೂನು ಹೋರಾಟ ನಡೆಸುತ್ತೇನೆ ಎಂದು ಹೇಳಿದರು.

## ನಾಲ್ವರು ಸಾವು

ಮೃತರಲ್ಲಿ ಇಬ್ಬರು ಕರ್ನಾಟಕ ಮೂಲದ ಮಹಿಳೆಯರು ಎಂದು ಪುಟ 2 ವರದಿಯಾಗಿದ್ದು, ಮಾನ್ಪುರದ ಭೈರವ ಘಾಟ್‌ನಲ್ಲಿ ಟೆಂಪೋ ಟ್ರಾವೆಲರ್ ಹಿಂಬದಿಯಿಂದ ಲಾರಿಗೆ ಡಿಕ್ಕಿ ಹೊಡೆದಿದ್ದು, ಟೆಂಪೋ ಟ್ರಾವೆಲರ್‌ನಲ್ಲಿದ್ದ ಕರ್ನಾಟಕದ ನಿವಾಸಿಗಳಿಬ್ಬರು ಸಾವನ್ನಪ್ಪಿದ್ದಾರೆ ಎಂದು ತಿಳಿದು ಬಂದಿದೆ.

ಪೊಲೀಸರ ಪ್ರಕಾರ, ಘಟನೆಯಲ್ಲಿ ಟ್ರಾವೆಲರ್‌ನಲ್ಲಿ ಪ್ರಯಾಣಿಸುತ್ತಿದ್ದ ಇಬ್ಬರು ಪ್ರಯಾಣಿಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇದೇ ಸಂದರ್ಭದಲ್ಲಿ, ಆ ಮಾರ್ಗವಾಗಿ ಹೋಗುತ್ತಿದ್ದ ಬೈಕ್‌ಗೂ ಕೂಡ ಡಿಕ್ಕಿಯಾಗಿದ್ದು, ಅದರಲ್ಲಿ ಪ್ರಯಾಣಿಸುತ್ತಿದ್ದ ಮಧ್ಯಪ್ರದೇಶ ಮೂಲದ ಇಬ್ಬರು ಸವಾರರು ಸಹ ಮೃತರಾಗಿದ್ದಾರೆ. ಅಲ್ಲದೇ, ಟೆಂಪೋ ಟ್ರಾವೆಲರ್‌ನಲ್ಲಿದ್ದ ಪುರುಷರು, ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ 10 ಜನರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮೃತಪಟ್ಟ ಕರ್ನಾಟಕ ಮೂಲದ ಇಬ್ಬರ ಗುರುತು ಇನ್ನೂ ಪತ್ತೆಯಾಗಿಲ್ಲ.

ಘಟನೆ ಮಾಹಿತಿ ತಿಳಿದು ಮಾನ್ಪುರ ಠಾಣೆ ಪೊಲೀಸರು ಸ್ಥಳಕ್ಕೆ ತಲುಪಿ ಗಾಯಾಳುಗಳನ್ನು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಿದ್ದಾರೆ. ಅಪಘಾತದ ರಭಸಕ್ಕೆ ವಾಹನಗಳು ನಜ್ಜುಗುಜ್ಜಾಗಿದ್ದು, ಕೆಲ ಮೃತದೇಹಗಳೂ ಕೂಡ ಛಿದ್ರಗೊಂಡಿದ್ದವು. ವಾಹನದಲ್ಲಿದ್ದ ವಸ್ತುಗಳೆಲ್ಲ ರಸ್ತೆಯಲ್ಲಿ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ಗಾಯಾಳುಗಳು ಇಂದೋರ್‌ನ ಎಂವೈ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮಾನ್ಪುರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ದುರ್ಘಟನೆ ಬಗ್ಗೆ ಮಾಹಿತಿ ನೀಡಿದ ಮಾನ್ಪುರ ಪೊಲೀಸ್ ಠಾಣೆ ಎಎಸ್‌ಐ ರವಿ, "ಟ್ರಾವೆಲರ್ ಮತ್ತು ಲಾರಿ ನಡುವೆ ಡಿಕ್ಕಿ ಸಂಭವಿಸುವ ಮೊದಲು, ಬೈಕ್‌ಗೂ ಕೂಡ ಟ್ರಾವೆಲರ್ ಡಿಕ್ಕಿ ಹೊಡೆದಿದೆ. ಬೈಕ್‌ನಲ್ಲಿದ್ದ ಮಧ್ಯಪ್ರದೇಶದ ಸೆಂಧ್ವಾ ನಿವಾಸಿ ಶುಭಂ ಮತ್ತು ಧರ್ಮಪುರಿ ನಿವಾಸಿ ಹಿಮಾಂಶು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಟ್ರಾವೆಲರ್‌ನಲ್ಲಿ ಪ್ರಯಾಣಿಸುತ್ತಿದ್ದ ಇಬ್ಬರು ಮಹಿಳೆಯರು ಮೃತರಾಗಿದ್ದಾರೆ. ಅವರ ಗುರುತು ಪತ್ತೆ ಮಾಡಲು ಪ್ರಯತ್ನಿಸಲಾಗುತ್ತಿದೆ" ಎಂದು ತಿಳಿಸಿದ್ದಾರೆ.

## ಆರೋಪಮುಕ್ತರನ್ನಾಗಿ ಮಾಡಿಲ್ಲ

ಮುಡಾ ಹಗರಣದಲ್ಲಿ ಸಿಎಂ ಕುಟುಂಬ ಭಾಗಿ ಆಗಿರುವುದು ಮತ್ತು ಸಾವಿರಾರು ಕೋಟಿ ರೂಪಾಯಿ ಲೂಟಿ ಆದುದನ್ನು ತಿಳಿಸಿ ನಾವು ಹೋರಾಟ ಮಾಡಿದ್ದೆವು. ನಮ್ಮ ಆರೋಪಕ್ಕೆ ಇವತ್ತಿಗೂ ನಾವು ಬದ್ಧರಾಗಿದ್ದೇವೆ ಎಂದು ಇನ್ನೊಂದು ಪ್ರಶ್ನೆಗೆ ಉತ್ತರ ಕೊಟ್ಟರು.

ಲೋಕಾಯುಕ್ತ ತನಿಖೆ, ಅವರ ವರದಿ ಬಂದ ಬಳಿಕ ನಾವು ಮಾತನಾಡುತ್ತೇವೆ ಎಂದ ಅವರು, ಇವತ್ತಿನ ಹೈಕೋರ್ಟಿನ ತೀರ್ಪಿನಲ್ಲಿ ಮುಖ್ಯಮಂತ್ರಿಗಳು, ಅವರ ಕುಟುಂಬ ನಿರಪರಾಧಿ ಎಂದು ಹೇಳಿಲ್ಲ ಎಂದು ಪುನರುಚ್ಚರಿಸಿದರು. ಲೋಕಾಯುಕ್ತದ ವರದಿಯನ್ನು ಕಾದು ನೋಡೋಣ ಎಂದು ಹೇಳಿದರು. ಯಡಿಯೂರಪ್ಪ ಅವರ ವಿರುದ್ಧ ಇದ್ದ ಪೋಕ್ಸೊ ಕೇಸಿನಲ್ಲಿ ಕೆಳಹಂತದ ಕೋರ್ಟಿನ ಸಮನ್ಸ್ ಅನ್ನು ರಾಜ್ಯ ಹೈಕೋರ್ಟ್ ಬದಿಗಿರಿಸಿದೆ. ರಾಜ್ಯ ಹೈಕೋರ್ಟ್‌ನಲ್ಲಿ ಈ ಕುರಿತು ಬಹಳ ದಿನ ವಾದವಿವಾದ ನಡೆದಿದೆ. ಅದರ ಆಧಾರದಲ್ಲಿ ನಮ್ಮ ಅರ್ಜಿಯನ್ನೂ ಪುರಸ್ಕರಿಸಿ, ಕೆಳಹಂತದ ಕೋರ್ಟಿನ ಸಮನ್ಸ್ ರದ್ದು ಮಾಡಿ ಮರು ಪರಿಶೀಲನೆ ಮಾಡುವಂತೆ ನಿರ್ದೇಶನ ನೀಡಿದೆ ಎಂದು ಮತ್ತೊಂದು ಪ್ರಶ್ನೆಗೆ ಉತ್ತರಿಸಿದರು.

## ತೀರ್ಪು ನಿರೀಕ್ಷೆ ಇತ್ತು

ನಿರಾಕರಿಸಿದೆ ಎಂದು ಅವರು ಹೇಳಿದರು. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ವರದಿಯಲ್ಲಿ ಏನಿದೆ ಎಂಬುದು ಇದರ ಅರ್ಥ ತೀರ್ಪು. ಹಾಗಾಗಿ ಒಳ್ಳೆಯ ತೀರ್ಪು ಬಂದಿದೆ ಎಂಬುದು ತಮ್ಮ ಅಭಿಪ್ರಾಯ ಎಂದರು. ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ಆಗುವ ತೀರ್ಮಾನಗಳು ಸ್ವಾಭಾವಿಕವಾಗಿ ನ್ಯಾಯಯುತ ತೀರ್ಮಾನಗಳು ಆಗಿರುತ್ತವೆ ಎಂಬುದಕ್ಕೆ ಈ ತೀರ್ಪು ಉದಾಹರಣೆ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷಗಳಿಗೂ ಈ ತೀರ್ಪಿನಿಂದ ಉತ್ತರ ಸಿಕ್ಕಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

## ಕೇರಳದ ಮಾಜಿ ರಾಜ್ಯಪಾಲ ದಿ.ರಾಚಯ್ಯ ಪತ್ನಿ ನಿಧನ

ಚಾಮರಾಜನಗರ: ಕೇರಳದ ಮಾಜಿ ರಾಜ್ಯಪಾಲ ಹಾಗೂ ಸಿಎಂ ಸಿದ್ದರಾಮಯ್ಯಗೆ ರಾಜಕೀಯ ಗುರುವಾಗಿದ್ದ ದಿ.ಬಿ. ರಾಚಯ್ಯ ಅವರ ಪತ್ನಿ ಗೌರಮ್ಮ ಇಂದು ನಿಧನರಾಗಿದ್ದಾರೆ.

ಸುಮಾರು 90 ವರ್ಷ ವಯಸ್ಸಿನ ಗೌರಮ್ಮ ಅವರು ಶ್ವಾಸಕೋಶದ ತೊಂದರೆಯಿಂದ ಬಳಲುತ್ತಿದ್ದರು. ಕಳೆದ ಕೆಲವು ದಿನಗಳ ಹಿಂದೆಯಷ್ಟೇ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು, ಇಂದು ಬೆಳಗ್ಗೆ 9 ಗಂಟೆಗೆ ಚಿಕಿತ್ಸೆ ಫಲಕಾರಿಯಾಗದೇ ನಿಧನರಾಗಿದ್ದಾರೆ. ಸ್ವಗ್ರಾಮ ಚಾಮರಾಜನಗರದ ಆಲೂರಿನಲ್ಲಿ ಶನಿವಾರ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೆಲವು ತಿಂಗಳ ಹಿಂದೆ ಆಲೂರಿನಲ್ಲಿ ಬಿ.ರಾಚಯ್ಯ ಅವರ ಸ್ಮಾರಕ ಉದ್ಘಾಟನೆಯಾಗಿತ್ತು. ಸ್ಮಾರಕ ಉದ್ಘಾಟನೆಯನ್ನು ಸಿಎಂ ಸಿದ್ದರಾಮಯ್ಯ ನೆರವೇರಿಸಿದ್ದರು. ಆ ವೇಳೆ, ಸುಧೀರ್ಘವಾಗಿ ಹಿಂದಿನ ನೆನಪು ಮೆಲುಕು ಹಾಕಿದ ಸಿದ್ದರಾಮಯ್ಯ ಬಿ.ರಾಚಯ್ಯ ಅವರನ್ನು ತನ್ನ ರಾಜಕೀಯ ಗುರು ಎಂದು ನೆನೆದಿದ್ದರು. ವೇದಿಕೆಯಲ್ಲೇ ಇದ್ದ ಗೌರಮ್ಮ ಅವರ ಕೈರುಚಿಯನ್ನು ಸ್ಮರಿಸಿದ್ದರು.

ಮೃತರು ಶಾಸಕ ಎ.ಆರ್. ಕೃಷ್ಣ ಮೂರ್ತಿ, ಜಿಪಂ ಮಾಜಿ ಸದಸ್ಯ ಆರ್.ಬಾಲರಾಜು,



ಅಳಿಯ ನಿವೃತ್ತ ಪೊಲೀಸ್ ಅಧಿಕಾರಿ ಮರಿಸ್ವಾಮಿ ಸೇರಿದಂತೆ ಅಪಾರ ಬಂದು ಬಳಗವನ್ನು ಅಗಲಿದ್ದಾರೆ.

## ಶಿಕ್ಷಣ, ಸಂಶೋಧನೆಗೆ ಒತ್ತು: ಕರ್ನಾಟಕ–ಲಿವರ್ ಪೂಲ್ ವಿ.ವಿ. ಒಡಂಬಡಿಕೆಗೆ ಅಂಕಿತ

**ಬೆಂಗಳೂರು:** ಶಿಕ್ಷಣ ಹಾಗೂ ಸಂಶೋಧನೆಗೆ ಸಂಬಂಧಿಸಿದಂತೆ ಹೆಚ್ಚಿನ ಸಹಭಾಗಿತ್ವ ಉತ್ತೇಜಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ ಮತ್ತು ಲಿವರ್ ಪೂಲ್ ವಿಶ್ವವಿದ್ಯಾಲಯಗಳು ಮಹತ್ವದ ಒಡಂಬಡಿಕೆಗೆ ಶುಕ್ರವಾರ ಸಹಿ ಹಾಕಿದವು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಭಾರಿ ಮತ್ತು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹಾಗೂ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಅವರ ಸಮ್ಮುಖದಲ್ಲಿ ಮುಖ್ಯಮಂತ್ರಿಯವರ ಅಧಿಕೃತ ನಿವಾಸ ಕಾವೇರಿಯಲ್ಲಿ ಒಡಂಬಡಿಕೆ ಏರ್ಪಟ್ಟಿತು.

ಬ್ರಿಟಿಷ್ ಡೆಪ್ಯುಟಿ ಹೈಕಮಿಷನ್ ನ ಬ್ರಿಟಿಷ್ ಕೌನ್ಸಿಲ್ ವಿಭಾಗದ ನಿರ್ದೇಶಕ ಜನಕ ಪುಷ್ಪನಾಥನ್, ಮಿಷನ್ ನ ಉಪ ಮುಖ್ಯಸ್ಥ ಜೇಮ್ಸ್ ಗೋಡ್ಬರ್, ಲಿವರ್ ಪೂಲ್ ವಿ.ವಿ.ಯ ಕುಲಪತಿ ಪ್ರೊ.ಟಿಮ್ ಜೋನ್ಸ್, ಮತ್ತು ಸಮ–ಕುಲಪತಿ ಪ್ರೊ.ತಾರಿಕ್ ಅಲಿ ಅವರು ಅಂಕಿತಕ್ಕೆ ಸಹಿ ಹಾಕಿದರು.

ಆವಿಷ್ಕಾರ ಕಾರ್ಯಕ್ರಮಗಳು ಹಾಗೂ ಶಿಕ್ಷಣ ಸಹಕಾರಕ್ಕೆ ಸಂಬಂಧಿಸಿದ ಸಹಭಾಗಿತ್ವವನ್ನು ಸದೃಢಗೊಳಿಸುವ ಜೊತೆಗೆ, ಅದನ್ನು ಉನ್ನತ ಸ್ತರಕ್ಕೆ ಕೊಂಡೊಯ್ಯಲು ಜಂಟಿ ಕಾರ್ಯತಂಡ ರಚಿಸುವ ಗುರಿಯನ್ನು ಕೂಡ ಒಡಂಬಡಿಕೆ ಹೊಂದಿದೆ.

ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ, ಉನ್ನತ ಶಿಕ್ಷಣ ಪರಿಷತ್ ನ ಕಾರ್ಯನಿರ್ವಾಹಕ ನಿರ್ದೇಶಕ ಡಾ.ಕೆ.ಜಿ.ಚಂದ್ರಶೇಖರ ಸೇರಿದಂತೆ ಇತರರು ಇದ್ದರು.



**ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ವೃಷಭಾವತಿ ನಗರ ಕ್ರೆಡಿಟ್ ಆಪರೇಟಿವ್ ಸೊಸೈಟಿ ಲಿಮಿಟೆಡ್ ಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಸ್ಥಳೀಯ ಶಾಸಕ ಕೆ ಗೋಪಾಲಯ್ಯ ನವರು ಉಪಾಧ್ಯಕ್ಷರಾಗಿ ಜಯರಾಮಯ್ಯನವರು ಅಂತಿಮ ಅವಿರೋಧ ಇಂದು ಆಯ್ಕೆಯಾದರು. ಸಂಘದ ನಿರ್ದೇಶಕರುಗಳಾದ ಡಿ ಶಿವಣ್ಣ, ಎಸ್ ಪಿ ಹೇಮಲತಾ, ಲಿಂಗಯ್ಯ, ಜೆ,ಜಿ ರವೀಂದ್ರ, ಆರ್ ಆನಂದ್, ಕೆ ಕಲ್ಲಪ್ಪ, ಡಿ ವೆಂಕಟರಮಣಯ್ಯ, ಎನ್ ಕೃಷ್ಣೇಗೌಡ, ಸಿದ್ದಗಂಗಮ್ಮ, ವೆಂಕಟಪ್ಪ, ಇಂದ್ರಮ್ಮ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.**

## ಬಾಂಬ್ ಬೆದರಿಕೆ; ತೀವ್ರ ತನಿಖೆ

**ನವದೆಹಲಿ:** ರಾಜಧಾನಿ ದೆಹಲಿ ಮತ್ತು ನೋಯ್ಡಾದ ಹಲವು ಶಾಲೆಗಳಿಗೆ ಇಂದು ಶುಕ್ರವಾರ ಬೆಳಗ್ಗೆ ಬಾಂಬ್ ಬೆದರಿಕೆ ಕರೆ ಬಂದಿದ್ದು, ಪೊಲೀಸರು ತನಿಖೆ ಆರಂಭಿಸಿ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನ ಅನುಸರಿಸುತ್ತಿದ್ದಾರೆ.

ದೆಹಲಿಯ ಮಯೂರ್ ವಿಹಾರ್ –1 ರಲ್ಲಿರುವ ಆಲ್ಕಾನ್ ಇಂಟರ್ನ್ಯಾಷನಲ್ ಶಾಲೆಗೆ ಶಾಲಾ ಪ್ರಾಂಶುಪಾಲರನ್ನು ಉಲ್ಲೇಖಿಸಿ ಬಾಂಬ್ ಬೆದರಿಕೆ ಇಮೇಲ್ ಬಂದಿರುವುದಾಗಿ ವರದಿಯಾಗಿದೆ. ಪೊಲೀಸರಿಗೆ ಬೆಳಗ್ಗೆ 6:40ಕ್ಕೆ ಮಾಹಿತಿ ನೀಡಲಾಯಿತು.ದೆಹಲಿ ಪೂರ್ವ ಜಿಲ್ಲೆಯಿಂದ ಬಾಂಬ್ ನಿಷ್ಕ್ರಿಯ ದಳ ಶಾಲೆಗೆ ಕಳುಹಿಸಲಾಯಿತು. ಪಾಂಡವ್ ನಗರದ ಸ್ಟೇಷನ್ ಹೆಡ್ ಆಫೀಸರ್ ಮತ್ತು ಇತರ ಸಿಬ್ಬಂದಿ ಸ್ಥಳಕ್ಕೆ ಬಂದರು. ಶಾಲಾ ಆವರಣವನ್ನು ಕೂಲಂಕಷವಾಗಿ ಪರಿಶೀಲಿಸಿದಾಗ ಯಾವುದೇ ಅನುಮಾನಾಸ್ಪದ ವಸ್ತುಗಳು ಪತ್ತೆಯಾಗಿಲ್ಲ. ಭದ್ರತಾ ಬೆದರಿಕೆಯಿಂದಾಗಿ ಇಂದು ಶಾಲಾ ಕ್ಯಾಂಪಸ್ ಮುಚ್ಚಲಾಗುವುದು ಎಂದು ಶಾಲೆಯ ಪ್ರಾಂಶುಪಾಲರು ಪೋಷಕರಿಗೆ ಇಮೇಲ್ ಮೂಲಕ ಮಾಹಿತಿ ನೀಡಿದ್ದಾರೆ.

## ಪರವಾನಗಿ ರಹಿತ ತಂಬಾಕು ಬೆಳೆಗಾರರಿಗೆ ಮಾರಾಟಕ್ಕೆ ಅವಕಾಶ ನೀಡಿ

**ಮೈಸೂರು:** ಪರವಾನಗಿ ರಹಿತ ತಂಬಾಕು ಬೆಳೆಗಾರರಿಗೆ ಮಾರಾಟಕ್ಕೆ ಅವಕಾಶ ಮಾಡಿಕೊಡಲು ಹಾಗೂ ಅವರ ಮೇಲೆ ವಿಧಿಸಲಾಗುತ್ತಿದ್ದ ದಂಡವನ್ನು ಮನ್ನಾ ಮಾಡಬೇಕೆಂದು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರಿಗೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ ಮಾಡಿದ್ದಾರೆ.

ಇದಕ್ಕೆ ಸೂಕ್ತವಾಗಿ ಸ್ಪಂದನೆ ವ್ಯಕ್ತಪಡಿಸಿದ ವಾಣಿಜ್ಯ ಸಚಿವ ಪಿಯೂಷ್ ಗೋಯಲ್, "ಕಾರ್ಡ್ ಹೊಂದಿರದ (ಪರವಾನಗಿ ರಹಿತ) ತಂಬಾಕು ಬೆಳೆಗಾರರು ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸುವ ಕುರಿತು" ಭರವಸೆ ನೀಡಿದರು. "ಪರವಾನಗಿ ತಂಬಾಕು ಬೆಳೆಗಾರರಿಗೆ ವಿಧಿಸುತ್ತಿದ್ದ ದಂಡವನ್ನು ಮನ್ನಾ ಮಾಡುವ ಸಂಬಂಧ ತಂಬಾಕು ಮಂಡಳಿಗೆ ಸೂಕ್ತ ನಿರ್ದೇಶನ" ನೀಡುವ ಭರವಸೆಯನ್ನೂ ನೀಡಿದರು. ಅತಿ ಶೀಘ್ರದಲ್ಲೇ ನಿರ್ಧಾರ ಹೊರಬೀಳುವ ನಿರೀಕ್ಷೆ ಇದೆ. ನಮ್ಮ ಕ್ಷೇತ್ರದ ಬೆಳಗಾರರ ಪರವಾಗಿ ದನಿ ಎತ್ತಲು ನಾನು ಸದಾ ಬದ್ಧನಾಗಿದ್ದೇನೆ ಎಂದು ಪ್ರಕಟಣೆ ಮೂಲಕ ಸಂಸದ ಯದುವೀರ್ ತಿಳಿಸಿದ್ದಾರೆ.

ಮೊದಲ ಪುಟದಿಂದ

## ಮಾನವೀಯತೆ ಮುಖ್ಯ

ಹೊರೆ ತಪ್ಪಿಸಲು ನಾವು ಈ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಎಲ್ಲಾ ವರ್ಗದವರಿಗೂ ಆರ್ಥಿಕ ಶಕ್ತಿ ತುಂಬಲು ಪ್ರತಿ ಕ್ಷೇತ್ರಕ್ಕೆ ₹ 250 ಕೋಟಿಯಷ್ಟು ಹಣ ನೀಡಲಾಗುತ್ತಿದೆ. ಈ ಯೋಜನೆಗಳಿಗಾಗಿ ₹ 56 ಸಾವಿರ ಕೋಟಿ ಹಣ ನೀಡಲಾಗಿದ್ದು, ಈ ಯೋಜನೆ ಜನರಿಗಾಗಿ ಮಾಡಲಾಗಿದೆ. ಜೀವ ಇದ್ದರೆ ಜೀವನ. ನಮ್ಮ ಸರ್ಕಾರ ಹಸಿದವರು, ಬಡವರ ಬಗ್ಗೆ ಆಲೋಚಿಸಿ ಈ ಕಾರ್ಯಕ್ರಮ ರೂಪಿಸಿದೆ. ಮಾರ್ಚ್ ಮೊದಲ ವಾರದಲ್ಲಿ ಬಜೆಟ್ ಮಂಡನೆಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದ್ದು, 2–3 ದಿನಗಳಲ್ಲಿ ದಿನಾಂಕ ಪ್ರಕಟಿಸಲಾಗುವುದು. ಕೇಂದ್ರ ಸರ್ಕಾರದ ಬಜೆಟ್ ರಾಜ್ಯದ ಪಾಲಿಗೆ ಖಾಲಿ ಬುಟ್ಟಿ. ದೇವೇಗೌಡರು, ಕುಮಾರಸ್ವಾಮಿ, ಪ್ರಹ್ಲಾದ್ ಜೋಶಿ, ಶೋಭಾ ಕರಂದ್ಲಾಜೆ ಸೇರಿದಂತೆ ಮಂತ್ರಿಗಳು, ಸಂಸದರು ರಾಜ್ಯಕ್ಕೆ ಆಗಿರುವ ಅನ್ಯಾಯದ ಬಗ್ಗೆ ಚಕಾರ ಎತ್ತಲಿಲ್ಲ. ನಮ್ಮ ಯೋಜನೆಗೆ ಅನುಮತಿ ಕೊಡಿಸಲಿಲ್ಲ. ಆದರೂ ಮಾತು ಮಾತ್ರ ದೊಡ್ಡದಾಗಿ ಆಡುತ್ತಾರೆ. ನಮ್ಮನ್ನು ಟೀಕಿಸಿದರೆ ಅವರಿಗೆ ಆನಂದ. ನಮ್ಮನ್ನು ಟೀಕಿಸಿಯಾದರೂ ಅವರು ಸಂತೋಷ ಪಡುತ್ತಾರಲ್ಲಾ ಅದೇ ನಮಗೆ ತೃಪ್ತಿ" ಎಂದು ತಿಳಿಸಿದರು.

ಬೆಂಗಳೂರಿಗೆ ನೀರು ಕೊಡಿಸುವುದೇ ನನ್ನ ಕೊನೆ ಆಸೆ ಎಂಬ ದೇವೇಗೌಡರ ಹೇಳಿಕೆ ಬಗ್ಗೆ ಕೇಳಿದಾಗ, "ನಾನು ಸಚಿವನಾದ ಬಳಿಕ ಬೆಂಗಳೂರಿಗೆ ಹೆಚ್ಚುವರಿಯಾಗಿ 6 ಟಿಎಂಸಿ ನೀರನ್ನು ಮಂಜೂರು ಮಾಡಿದ್ದೇನೆ. ಆಮೂಲಕ ಬೆಂಗಳೂರಿನ ಇತಿಹಾಸದಲ್ಲಿ ಈ ಡಿ.ಕೆ. ಶಿವಕುಮಾರ್ ಹೊಸ ಅಧ್ಯಾಯ ಬರೆದಿದ್ದಾನೆ. ಬಿಜೆಪಿ ಹಾಗೂ ದಳದ ಸರ್ಕಾರಗಳು ಈ ತೀರ್ಮಾನ ಮಾಡಿರಲಿಲ್ಲ. ನಿಂತುಹೋಗಿದ್ದ 5ನೇ ಹಂತದ ಯೋಜನೆಗೆ ಮತ್ತೆ ಚಾಲನೆ ನೀಡಿ ತೊರೆಕಾಡನಹಳ್ಳಿಯಿಂದ ನೀರು ತರಲಾಗಿದೆ. 110 ಹಳ್ಳಿಗಳಿಗೆ ಕಾವೇರಿ ನೀರು ಪೂರೈಸಲಾಗುತ್ತಿದೆ. ಎತ್ತಿನಹೊಳೆಯಿಂದ ನೀರನ್ನು ಆಚೆಗೆ ತಂದಿದ್ದೇನೆ. ಈ ವರ್ಷದ ಕೊನೆ ವೇಳೆಗೆ ತುಮಕೂರಿನವರೆಗೂ ಎತ್ತಿನಹೊಳೆ ನೀರನ್ನು ಹರಿಸಲಾಗುವುದು. ಇದು ಕಾಂಗ್ರೆಸ್ ಪಕ್ಷದ ಸಂಕಲ್ಪ. ನಾನು ಮೇಕೆದಾಟು ಪಾದಯಾತ್ರೆ ಮಾಡಿದಾಗ ಟೀಕೆ ಟಿಪ್ಪಣಿ ಮಾಡಿದರು.



ಮೋದಿ ಅವರ ಕೈ ಹಿಡಿದು ಈ ಯೋಜನೆಗೆ ಸಹಿ ಹಾಕಿಸುವುದಾಗಿ ಹೇಳಿದ್ದರು, ಆದರೂ ಈವರೆಗೂ ಯಾಕೆ ಸಹಿ ಹಾಕಿಸಿಲ್ಲ? ಕೇವಲ ಪ್ರಚಾರಕ್ಕೆ ಮಾತನಾಡುವುದಲ್ಲ, ರಾಜಕೀಯ ಬದ್ಧತೆ ಇರಬೇಕು. ಅವರ ಅನುಭವ ಹಾಗೂ ಹಿರಿತನಕ್ಕೆ ನಾವು ಗೌರವಿಸುತ್ತೇವೆ. ಆ ಗೌರವವನ್ನು ಅವರು ಉಳಿಸಿಕೊಳ್ಳಬೇಕು" ಎಂದು ಹೇಳಿದರು.

**ಕುಮಾರಸ್ವಾಮಿ ಭೇಟಿ ಮಾಡಲು ಅವರು ವಿತ್ತ ಸಚಿವರೇ?:** ಕೇಂದ್ರದಿಂದ ಅನುದಾನ ತರಲು ರಾಜ್ಯದ ಸಚಿವರು ನಮ್ಮ ಜತೆ ಚರ್ಚೆ ಮಾಡುವುದಿಲ್ಲ ಎಂಬ ಕುಮಾರಸ್ವಾಮಿ ಹೇಳಿಕೆ ಬಗ್ಗೆ ಕೇಳಿದಾಗ, "ಮಿಸ್ಟರ್ ಕುಮಾರಸ್ವಾಮಿ ನಿಮಗೆ ಜವಾಬ್ದಾರಿ ಇಲ್ಲವೇ? ಸಚಿವರು ನಿಮ್ಮ ಜತೆ ಚರ್ಚೆ ಮಾಡಬೇಕೆ? ಈ ರಾಜ್ಯಕ್ಕೆ ಜವಾಬ್ದಾರಿ ನೀಡಬೇಕು ಎಂದು ನಿಮಗೆ ಜವಾಬ್ದಾರಿ ಇಲ್ಲವೇ? ನಾವು ಪ್ರಧಾನಿ ಹಾಗೂ ಹಣಕಾಸು ಸಚಿವೆ ಹಾಗೂ ನಮಗೆ ಸಂಬಂಧಿಸಿದ ಇಲಾಖೆಯ ಕೇಂದ್ರ ಸಚಿವರನ್ನು ಭೇಟಿ ಮಾಡಿದ್ದೇವೆ. ಕುಮಾರಸ್ವಾಮಿ ಭೇಟಿ ಮಾಡಲು ಅವರು ವಿತ್ತ ಸಚಿವರಲ್ಲ. ಅವರಿಗೆ ರಾಜ್ಯದ ಬಗ್ಗೆ ಆಸಕ್ತಿ ಇದ್ದರೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಿ. ಅವರಿಗೆ ಅವರ ವೈಯಕ್ತಿಕ ಆಸಕ್ತಿ ಹೊರತಾಗಿ ರಾಜ್ಯದ ಬಗ್ಗೆ ಯಾವುದೇ ಆಸಕ್ತಿ ಇಲ್ಲ. ರಾಜ್ಯ ಹಾಗೂ ದೇಶದ ಅಭಿವೃದ್ಧಿ ಬಗ್ಗೆ ಅವರಲ್ಲಿ ನಾನು ಆಸಕ್ತಿ ನೋಡಿಲ್ಲ" ಎಂದು ತಿರುಗೇಟು ನೀಡಿದರು.

ಬೇರೆ ರಾಜ್ಯಗಳ ಮುಖ್ಯಮಂತ್ರಿಗಳು ನನ್ನನ್ನು ಭೇಟಿ ಮಾಡುತ್ತಾರೆ, ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳು ನನ್ನನ್ನು ಭೇಟಿ ಮಾಡುವುದಿಲ್ಲ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಈ ವಿಚಾರವಾಗಿ ಮುಖ್ಯಮಂತ್ರಿಗಳನ್ನು ಕೇಳಿ" ಎಂದರು.

ನವೆಂಬರ್ ನಲ್ಲಿ ಸಿಎಂ ಬದಲಾವಣೆ ಖಚಿತ ಎಂಬ ಅಶೋಕ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಅಶೋಕ್ ಅವರು ಜ್ಯೋತಿಷ್ಯ ಕಲಿಯುತ್ತಿರುವ ಬಗ್ಗೆ ಕೇಳಿ ಬಹಳ ಸಂತೋಷವಾಯಿತು. ನನಗೂ ಜ್ಯೋತಿಷ್ಯ ಕೇಳುವ ಚಟ ಇದೆ. ಅವರು ಬಿಡುವಿನ ಸಮಯ ನೀಡಿದಾಗ ನಾನು ಹೋಗಿ ಶಾಸ್ತ್ರ ಕೇಳುತ್ತೇನೆ" ಎಂದರು.

**ಯಾರ ಹಣೆಯಲ್ಲಿ ಏನು ಬರೆದಿದೆ ಯಾರಿಗೆ ಗೊತ್ತು:** ಡಿ.ಕೆ. ಸುರೇಶ್ ಅವರು ಬಮೂಲ್ ಚುನಾವಣೆಯಲ್ಲಿ ಸ್ಪರ್ಧಿಸುತ್ತಾರಾ ಎಂದು ಕೇಳಿದಾಗ, "ಅವೆಲ್ಲಾ ಸುದ್ದಿ. ನಾನು ಮುಂಚೆಯಿಂದಲೂ ಹಸು ಕಟ್ಟಿದ್ದೆ, ನಮ್ಮ ತಾಯಿ ಹಾಲು ಹಾಕುತ್ತಿದ್ದರು. ಹಾಲು ಹಾಕಿದಾಕ್ಷಣ ಚುನಾವಣೆಯಲ್ಲಿ ಸ್ಪರ್ಧಿಸಬೇಕಾ? ಅದರ ಜತೆಗೆ ಹತ್ತಾರು ಎಕರೆ ರೇಷ್ಮೆ, ನೂರಾರು ಎಕರೆ ವ್ಯವಸಾಯ ಮಾಡುತ್ತಿದ್ದೇವೆ. ಕನಕಪುರದ ರೇಷ್ಮೆ ಬೆಳೆಗಾರರಿಗೆ ಅನುಕೂಲ ಮಾಡಿಕೊಡಲು, ಇಲ್ಲಿನ ರೇಷ್ಮೆಯನ್ನು ಬಳಸಲು ನಮ್ಮ ಮಾವ ಅವರ ರೀಲಿಂಗ್ ಕಾರ್ಖಾನೆಯನ್ನು ಮಾಡಲು ಮುಂದಾಗಿದ್ದೇವೆ. ಯಾರ ಹಣೆಯಲ್ಲಿ ಏನು ಬರೆದಿದೆಯೋ ಯಾರಿಗೆ ಗೊತ್ತು? ಈ ಬಗ್ಗೆ ಚರ್ಚೆ ಮಾಡಿದರೆ ಮಾಡಿಕೊಳ್ಳಲಿ, ನೆಮ್ಮದಿ ಕೆಡಿಸಿಕೊಳ್ಳಲಿ" ಎಂದು ಹೇಳಿದರು.

**ಸಮೀಕ್ಷೆ ಮಾಡಿ ವಿಮಾನ ನಿಲ್ದಾಣ ಜಾಗ ತೀರ್ಮಾನ:** 2ನೇ ಏರ್ಪೋರ್ಟ್ ಸ್ಥಳದ ಚರ್ಚೆ ಬಗ್ಗೆ ಕೇಳಿದಾಗ, "ವಿಮಾನ ನಿಲ್ದಾಣ ನಿರ್ಮಾಣದ ಜಾಗ ನಿಗದಿ ಮಾಡುವುದು ನಮ್ಮ ಕೈಯಲ್ಲಿ ಇಲ್ಲ. ನಾವು ಸಲಹೆ ನೀಡಬಹುದು, ಅಂತಿಮವಾಗಿ ವಿಮಾನಯಾನ ಪ್ರಾಧಿಕಾರ ತೀರ್ಮಾನ ಮಾಡುತ್ತದೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮಾಡುವಾಗ ಮಾಡಿಕೊಂಡಿರುವ ಒಪ್ಪಂದದ ಪ್ರಕಾರ 2034ರವರೆಗೂ ನಾವು ಮತ್ತೊಂದು ವಿಮಾನ ನಿಲ್ದಾಣ ಕಾರ್ಯಾರಂಭ ಮಾಡಲು ಸಾಧ್ಯವಿಲ್ಲ. ಆದರೆ ನಾವು ಸಿದ್ಧತೆ ಮಾಡಿಕೊಳ್ಳಬಹುದು. ಈ ಸಿದ್ಧತೆಗಾಗಿ 3–4 ಜಾಗಗಳ ಪ್ರಸ್ತಾವನೆ ನೀಡಿದ್ದೇವೆ. ದಕ್ಷಿಣ, ಉತ್ತರ ಪೂರ್ವ ಭಾಗದಲ್ಲಿ ಸಲಹೆ ನೀಡಿದ್ದೇವೆ. ವಿಮಾನ ನಿಲ್ದಾಣ ತಾಂತ್ರಿಕ ವಿಚಾರವಾಗಿದ್ದು, ಸಮೀಕ್ಷೆ ಮಾಡಿ ತೀರ್ಮಾನ ಮಾಡಲಾಗುವುದು" ಎಂದು ತಿಳಿಸಿದರು.

**ಸಿಬಿಐ ತನಿಖೆಗೆ ಯಾಕೆ ನೀಡಬೇಕು?:** ಮುಡಾ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವ ಬಗ್ಗೆ ಹೈಕೋರ್ಟ್ ಇಂದು ತೀರ್ಪು ನೀಡಲಿರುವ ಬಗ್ಗೆ ಕೇಳಿದಾಗ, "ಯಾವ ಕಾರಣಕ್ಕೆ ಸಿಬಿಐ ತನಿಖೆಗೆ ನೀಡಬೇಕು? ಲೋಕಾಯುಕ್ತ ತನಿಖೆ ನಡೆಯುತ್ತಿರುವಾಗ, ಇಡಿ ಕೂಡ ತನಿಖೆ ಮಾಡುತ್ತಿದೆ.

ಈ ಪರಿಸ್ಥಿತಿಯಲ್ಲಿ ಮೂರನೇ ಸಂಸ್ಥೆ ತನಿಖೆ ಮಾಡಲು ಯಾಕೆ ನೀಡುತ್ತಾರೆ? ಈ ರೀತಿ ನೀಡಲು ಅವಕಾಶ ಇಲ್ಲ. ಈ ಬಗ್ಗೆ ಅನೇಕ ನ್ಯಾಯಾಲಯದ ತೀರ್ಪುಗಳಿವೆ. ನನ್ನ ವಿರುದ್ಧವೂ ಇದೇ ರೀತಿ ಕೇಸ್ ದಾಖಲಿಸಿರುವುದರ ವಿರುದ್ಧ ನಾನು ಬಡಿದಾಡುತ್ತಿದ್ದೇನೆ. ಇದರ ವಿರುದ್ಧ ಸುಪ್ರೀಂ ಕೋರ್ಟ್ ನಲ್ಲಿ ಮೇಲ್ಮನವಿ ಸಲ್ಲಿಸಿದ್ದೇನೆ" ಎಂದು ತಿಳಿಸಿದರು.

## 5 ವರ್ಷಗಳ ಬಳಿಕ ರೆಪೋ ದರ ಇಳಿಕೆ

ಇಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಈ ನಿರ್ಧಾರವನ್ನು ಪ್ರಕಟಿಸಿದ್ದಾರೆ.

ಐದು ವರ್ಷಗಳ ಬಳಿಕ ಮೊದಲ ಬಾರಿಗೆ ಆರ್‌ಬಿಐನ ರಿಪೋ ದರ ಇಳಿಕೆ ಆಗಿದೆ. ಎಂಪಿಸಿಯಲ್ಲಿರುವ ಎಲ್ಲಾ ಆರು ಸದಸ್ಯರು ಸರ್ವಾನುಮತದಿಂದ 25 ಮೂಲಾಂಕಗಳಷ್ಟು ಬಡ್ಡಿದರ ಇಳಿಸಲು ನಿರ್ಧರಿಸಿದ್ದಾರೆ. ಈ ರಿಪೋ ದರ ಇಳಿಕೆಯಿಂದ ಬ್ಯಾಂಕುಗಳ ಸಾಲದರಗಳು ಕಡಿಮೆಗೊಳ್ಳುವ ಸಾಧ್ಯತೆ ಇದೆ.

## ಅಂಕಿತ ಹಾಕದ ರಾಜ್ಯಪಾಲರು!

ಇರುವ ಕಾನೂನುಗಳಲ್ಲೇ ಪೊಲೀಸರು ಸರಿಯಾದ ಕ್ರಮಕೈಗೊಳ್ಳುತ್ತಿಲ್ಲ. ಪೊಲೀಸರು ಸರಿಯಾದ ಕ್ರಮಕ್ಕೈಗೊಳ್ಳದೇ ಇರೋದಕ್ಕೆ ಮತ್ತೊಂದು ಕಾನೂನಿನ ಅಗತ್ಯತೆ ಕಾಣುತ್ತಿಲ್ಲ ಎಂದು ರಾಜ್ಯಪಾಲರು ಸುಗ್ರೀವಾಜ್ಞೆ ವಾಪಸ್ ಕಳಿಹಿಸಿದ್ದಾರೆ.

## ಸತ್ಯಮೇವ ಜಯತೆ

ಬಂದ್ ಆಗಿರುವುದರ ಹಿಂದೆ ತಮ್ಮ ಕೈವಾಡ ಇಲ್ಲ. ತಮಗೆ ದ್ವೇಷ ರಾಜಕಾರಣ ಗೊತ್ತಿಲ್ಲ ಎಂದು ಸಚಿವ ಈಶ್ವರ ಖಂಡ್ರೆ ಸಮಜಾಯಿಷಿ ನೀಡಿದರು.

ಯತ್ನಾಳ್ ಕಾರ್ಖಾನೆ ಬಂದ್ ಮಾಡಿರುವುದರ ಹಿಂದೆ ಸಚಿವ ಖಂಡ್ರೆ ಕೈವಾಡವಿದೆ ಎಂಬ ಆರೋಪದ ಕುರಿತು ಸುದ್ದಿಗಾರರು ಗಮನ ಸೆಳೆದಾಗ ಹೀಗೆ ಪ್ರತಿಕ್ರಿಯಿಸಿದ ಖಂಡ್ರೆ, ಯತ್ನಾಳ್ ಅವರು ಸುಪ್ರೀಂಕೋರ್ಟ್,ಹೈಕೋರ್ಟ್ ಮೊರೆ ಹೋಗಿದ್ದರು. ಸುಪ್ರೀಂಕೋರ್ಟ್ ಆದೇಶವನ್ನು ನಾವು ಪಾಲನೆ ಮಾಡುತ್ತಿದ್ದೇವೆ.ಅವರು ವಾಯು ಮಾಲಿನ್ಯ ನಿಯಂತ್ರಣ ಮಂಡಳಿ ನಿಯಮಾವಳಿ ಉಲ್ಲಂಘನೆ ಮಾಡಿದ್ದಾರೆ. ಹಾಗಾಗಿ ಕಾರ್ಖಾನೆ ಬಂದ್ ಆಗಿದೆ ಎಂದರು.

ರಾಮನಗರದಲ್ಲಿ ಯಾವುದೇ ರೀತಿಯ ಆಪರೇಷನ್ ಹಸ್ತ ನಡೆದಿಲ್ಲ. ಜೆಡಿಎಸ್ ಸೇರಿದಂತೆ ಬೇರೆ ಪಕ್ಷಗಳಿಂದ ತಾವಾಗಿಯೇ ನಮ್ಮ ಪಕ್ಷಕ್ಕೆ ಬರುತ್ತಾರೆಯೇ ಹೊರತು; ನಮ್ಮಿಂದ ಯಾವುದೇ ಆಪರೇಷನ್ ನಡೆಯುತ್ತಿಲ್ಲ.

# ಹಳೇ ಪಿಂಚಣಿ ಜಾರಿಗೆ ಆಗ್ರಹಿಸಿ ಸಮಾವೇಶ

**ಶಿಡ್ಲಘಟ್ಟ:** ನೂತನ ಪಿಂಚಣಿ ಯೋಜನೆ (ಎನ್ ಪಿಎಸ್ ಪಿಂಚಣಿ) ರದ್ದುಪಡಿಸಿ ಈ ಹಿಂದೆ ಇದ್ದ ಹಳೆಯ ಪಿಂಚಣಿ ಪದ್ಧತಿಯನ್ನೇ ಜಾರಿ ಮಾಡುವಂತೆ ಆಗ್ರಹಿಸಿ ಶುಕ್ರವಾರ 'ಒಂದು ದಿನದ ಹಕ್ಕೋತ್ತಾಯ ಸಮಾವೇಶ' ಹಮ್ಮಿಕೊಂಡಿದ್ದೇವೆ ಎಂದು ಎನ್‌ಪಿಎಸ್ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಶಿಕ್ಷಕ ವಿ.ಎನ್. ಗಜೇಂದ್ರ ತಿಳಿಸಿದರು.



ಎನ್‌ಪಿಎಸ್ ನೌಕರರ ಈ ಹೋರಾಟಕ್ಕೆ ಶಾಸಕರಾದ ಬಿ.ಎನ್. ರವಿಕುಮಾರ್ ಅವರು ಬೆಂಬಲ ನೀಡಿದ್ದಾರೆ, ಹಕ್ಕೊತ್ತಾಯ ಸಮಾವೇಶಕ್ಕೆ ತೆರಳುವ ಎಲ್ಲಾ ಎನ್‌ಪಿಎಸ್ ನೌಕರರಿಗೂ ಶಾಸಕರು ಟೀ ಶರ್ಟ್‌ಗಳನ್ನು ನೀಡಲಿದ್ದಾರೆ. ಎಲ್ಲಾ ಎನ್‌ಪಿಎಸ್ ನೌಕರರು ಸಮವಸ್ತ್ರಧರಿಸಿ ಸಮಾವೇಶಕ್ಕೆ ತೆರಳಲು ಇದು ಅನುಕೂಲ ಆಗಲಿದ್ದು, ಶಾಸಕರಿಗೆ ಎನ್ ಪಿಎಸ್ ನೌಕರರ ಸಂಘದಿಂದ ಅಭಿನಂದನೆಗಳನ್ನು ತಿಳಿಸಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಜಿ. ಪರಮೇಶ್ವರ್ ಅವರು ಈ ಹಿಂದೆ ವಿರೋಧ ಪಕ್ಷದಲ್ಲಿದ್ದಾಗ ನಮ್ಮ ಹೋರಾಟಕ್ಕೆ ಬೆಂಬಲ ನೀಡಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಹಳೆಯ ಪಿಂಚಣಿ ಪದ್ಧತಿಯನ್ನೇ ಮರುಜಾರಿ ಮಾಡುವುದಾಗಿ ಭರವಸೆ ನೀಡಿದ್ದರು.

ಅವರು ಅಧಿಕಾರಕ್ಕೆ ಬಂದಾಯ್ತು ಆದರೆ ಕೊಟ್ಟ ಮಾತಿನಂತೆ ಹಳೆಯ ಪಿಂಚಣಿ ಪದ್ಧತಿ ಜಾರಿ ಮಾಡಲಿಲ್ಲ, ಕೇಳಿದ್ದಕ್ಕೆ ಪಂಚ ಗ್ಯಾರಂಟಿಗಳ ಜಾರಿ ನಂತರ 6ನೇ ಗ್ಯಾರಂಟಿಯಾಗಿ ಹಳೆಯ ಪಿಂಚಣಿ ಯೋಜನೆ ಜಾರಿ ಮಾಡುವುದು ನಮ್ಮ ಮುಂದಿದೆ ಎಂದಿದ್ದರು. ಆದರೀಗ ಪಂಚ ಗ್ಯಾರಂಟಿ ಯೋಜನೆಗಳ ಜಾರಿ ಆಗಿದೆ, ಅಧಿಕಾರಕ್ಕೆ ಬಂದು 2 ಕಳೆದಿದೆ ಇನ್ನೂ ಹಳೆಯ ಪಿಂಚಣಿ ಯೋಜನೆ ಜಾರಿ ಮಾಡಿಲ್ಲ ಎಂದು ದೂರಿದರು.

ನಮ್ಮದು ಹಳೆಯ ಪಿಂಚಣಿ ಯೋಜನೆ ಜಾರಿ ಮಾಡಬೇಕೆನ್ನುವ ಏಕೈಕ ಅಜೆಂಡಾ, ಅದಕ್ಕಾಗಿ ಫೆ.7ರ ಶುಕ್ರವಾರ ರಾಜ್ಯದ ಎಲ್ಲ ಎನ್‌ಪಿಎಸ್ ನೌಕರರು ಫ್ರೀಡಂ ಪಾರ್ಕನಲ್ಲಿ ಒಂದು ದಿನದ ಹಕ್ಕೊತ್ತಾಯ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

ಇದಕ್ಕೆ ಸರ್ಕಾರಿ ನೌಕರರ ಸಂಘ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಕಂದಾಯ, ಆರೋಗ್ಯ, ಬೆಸ್ಕಾಂ ಇಲಾಖೆ ನೌಕರರ ಸಂಘ ಸೇರಿದಂತೆ ಹಲವು ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿ ಅಂದು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಈ ಭಾಗದಿಂದಲೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಎನ್‌ಪಿಎಸ್ ನೌಕರರ ಸಂಘದ ಕಾರ್ಯದರ್ಶಿ ನರಸಿಂಹರಾಜು, ಉಪಾಧ್ಯಕ್ಷ ಪಿಡಿಒ ರಮಾಕಾಂತ್, ಖಜಾಂಚಿ ಆರೋಗ್ಯ ಇಲಾಖೆ ಟಿ.ಟಿ. ನರಸಿಂಹಪ್ಪ, ಕಂದಾಯ ಇಲಾಖೆಯ ಜಾರ್ಜ್, ಅನುದಾನಿತ ಶಿಕ್ಷಕರ ಸಂಘದ ವೆಂಕಟೇಶ್, ಜಿ.ಎನ್. ರಮೇಶ್ ಭಾಗವಹಿಸಿದ್ದರು.

# ಮೂಲಭೂತ ಸೌಕರ್ಯ ವಂಚಿತ ಗ್ರಾಮ ಹೆಡಗಿನಬೆಲೆ

**ಮಾಲೂರು:** ತಾಲ್ಲೂಕಿನ ಹೆಡಗಿನಬೆಲೆ ಗ್ರಾಮ ಮೂಲ ಭೂತ ಸೌಕರ್ಯಗಳಿಂದ ವಂಚಿತವಾಗಿದೆ ಎಂದು ಗ್ರಾಮಸ್ಥರು ಗ್ರಾ.ಪಂ.ವಿರುದ್ಧ ದೂರಿದ್ದಾರೆ.





ತಾಲ್ಲೂಕಿನ ತೊರ್ನಹಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಗೆ ಬರುವ ಹೆಡಗಿನಬೆಲೆ ಗ್ರಾಮದಲ್ಲಿ ಸುಮಾರು 150 ಕ್ಕೂ ಹೆಚ್ಚು ಕುಟುಂಬಗಳು ವಾಸವಿದ್ದು, ಈ ಗ್ರಾಮದಲ್ಲಿ ಬಡ ಕುಟುಂಬಗಳು, ರೈತರು, ಕೂಲಿನಾಲಿಯಿಂದ ಜೀವನ ಸಾಗಿಸುತ್ತಿದ್ದಾರೆ. ಅದರೆ ಈ ಗ್ರಾಮದಲ್ಲಿ ಚರಂಡಿ, ಬೀದಿ ದೀಪ, ಸಿಸಿ ರಸ್ತೆ , ಚರಂಡಿ ಸ್ವಚ್ಛತೆ ಇಲ್ಲದೇ ಚರಂಡಿಗಳಲ್ಲಿ ಕಸ ಕಡ್ಡಿ ತುಂಬಿ ಗಬ್ಬುನಾರುತ್ತಿದ್ದು, ಮೂಲಭೂತ ಸೌಕರ್ಯಗಳ ಮರೀಚಿಕೆಯಾಗಿದೆ.

ಮಾಲೂರು– ತೊರ್ನಹಳ್ಳಿ ಮುಖ್ಯ ರಸ್ತೆಯಿಂದ ಗ್ರಾಮಕ್ಕೆ ಒಂದರಿಂದ 2 ಕೀ.ಮೀಟರ್ ಆಗುತ್ತದೆ. ರಾತ್ರಿಯ ಸಮಯದಲ್ಲಿ ಬಸ್ ಇಳಿದು ನಡೆದುಕೊಂಡು ಹೋಗಬೇಕಾದರೆ ಕತ್ತಲುನಲ್ಲಿ ಸಂಚಾರಿಸಬೇಕಾದ ಪರಿಸ್ಥಿತಿ, ಇನ್ನೂ ಗ್ರಾಮಸ್ಥರು ಮಾಲೂರು ಪಟ್ಟಣ, ತೊರ್ನಹಳ್ಳಿಗೆ ಹೋಗಬೇಕಾದರೆ ಬಿಸಿಲು, ಮಳೆಯಲ್ಲಿ ನಿಂತು ಬಸ್ ಹತ್ತು ಬೇಕಾಗುತ್ತದೆ.

ಅದ ಕಾರಣ ಗೇಟ್ ಬಳಿ ಪ್ರಯಾಣಿಕರ ತಂಗುದಾಣ ಅವಶ್ಯಕತೆ ಇದೆ. ಶ್ರೀಘ್ರವಾಗಿ ಸಾರ್ವಜನಿಕರಿಗೆ ತಂಗುತಾಣ ನಿರ್ಮಾಣ ಮಾಡಿ ಗ್ರಾಮದವರೆಗೆ ಬೀದಿ ದೀಪಗಳ ಅಳವಡಿಕೆ, ಗ್ರಾಮದಲ್ಲಿ ಸುಮಾರು 150 ವರ್ಷಗಳ ಇತಿಹಾಸವಿರುವ ಕಲ್ಲಿನ ನೀರಿನ ಭಾವಿ ಇದೆ ಹಾಗೂ ಮನೆಗಳು, ತೋಟಕ್ಕೆ ಅದೇ ರಸ್ತೆ ಅಲ್ಲಿವರೆಗೂ ಸಿಸಿ ರಸ್ತೆ ನಿರ್ಮಾಣ, ಬೀದಿ ದೀಪ ಅನುಕೂಲ ಕಲ್ಪಿಸಬೇಕು ಎಂದು ಗ್ರಾಮಸ್ಥರು ಜನಪ್ರತಿನಿಧಿಗಳಿಗೆ, ಗ್ರಾ.ಪಂ.ಅಧಿಕಾರಿಗಳಿಗೆ ಒತ್ತಾಯಿಸಿ ಈ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೇ ಇದ್ದಲ್ಲಿ ಗ್ರಾ.ಪಂ.ಮುಂಭಾಗದಲ್ಲಿ ಪ್ರತಿಭಟನಾ ಧರಣಿ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.


ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ. ಸುರೇಶ್, ನರಸಿಂಹಮೂರ್ತಿ, ಸುಬ್ರಮಣಿ, ಮಂಜುನಾಥ್, ಶಶಿ, ವೆಂಕಟೇಶಪ್ಪ, ರಾಜೇಂದ್ರ ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

# ನಕಲಿ ಪತ್ರಕರ್ತರಿಗೆ ಕಡಿವಾಣ ಹಾಕುವವರು ಯಾರು?

## ಸ್ವಯಂ ಪ್ರೇರಿತ ಕೇಸು ದಾಖಲಿಸಿ ಕ್ರಮ ಕೈಗೊಳ್ಳಲು ಆಗ್ರಹ

**ಜಿ.ಕೆ.ಆನಂದ್ ಬಾಗೇಪಲ್ಲಿ**

**ಬಾಗೇಪಲ್ಲಿ:** ತಾಲ್ಲೂಕಿನಲ್ಲಿ ವ್ಯಾಕರಣಗಳ ಬಗ್ಗೆ, ಪತ್ರಿಕೋದ್ಯಮದ ಗಂಧ ಗಾಳಿ, ಸಭ್ಯತೆ, ನೀತಿ, ನಿಯಮ ಯಾವುದೂ ಗೊತ್ತಿಲ್ಲದ, ಕನಿಷ್ಠ ವಿದ್ಯಾರ್ಹತೆಯೂ ಇಲ್ಲದ ಕೆಲವು ನಕಲಿ ಪತ್ರಕರ್ತರಿಂದ ನಿಜವಾದ ಪತ್ರಕರ್ತರ ಗೌರವಕ್ಕೆ ಧಕ್ಕೆ ಉಂಟಾಗುತ್ತಿದ್ದ ಕೂಡಲೇ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳಬೇಕಾಗಿದೆ.



ಕೆಲವರು ಯು ಟ್ಯೂಬ್ ಮತ್ತು ಮುದ್ರಣವಾಗದ ವಾರಪತ್ರಿಕೆ ಮತ್ತು ದಿನ ಪತ್ರಿಕೆಗಳ ಹೆಸರಿನಲ್ಲಿ ಅಧಿಕಾರಿ ಹಾಗೂ ಸಾರ್ವಜನಿಕರನ್ನು ಹೆದರಿಸಿ, ಅನೀತಿಗೆ ಕೈ ಹಾಕಿ ಬದುಕುತ್ತಿರುವರಿಂದ ಪತ್ರಕರ್ತರ ಗೌರವ ಹಾಳಾಗುತ್ತಿದೆ. ಸುದ್ದಿ ಪ್ರಸಾರಕ್ಕೆ ಬೇಕಿರುವ ಕನಿಷ್ಠ ಕಾನೂನಿನ ಅರಿವೂ ಇಲ್ಲ. ಕನ್ನಡ ಬರವಣಿಗೆ, ವ್ಯಾಕರಣವಂತೂ ಮೊದಲೇ ಗೊತ್ತಿಲ್ಲ. ಇಂತಹವರಿಗೆ ಕಡಿವಾಣ ಹಾಕಬೇಕಿರುವ ಅಧಿಕಾರಿಗಳು ಮಾತ್ರ ಮೌನವಾಗಿರು ವುದು ನಕಲಿ ಪತ್ರಕರ್ತರ ಹೆಚ್ಚಳಕ್ಕೆ ಕಾರಣವಾಗಿದೆ.

ನಕಲಿ ಪತ್ರಕರ್ತರ ಹಾವಳಿ ತಡೆಯಲು ಜಿಲ್ಲಾಡಳಿತ, ತಾಲ್ಲೂಕು ಆಡಳಿತ, ಪೊಲೀಸ್ ಇಲಾಖೆ, ವಾರ್ತಾ ಇಲಾಖೆ ಸುಮ್ಮನಿರುವುದುದನ್ನು ನೋಡಿದರೆ ಬೆಕ್ಕಿನ ಕೊರಳಿಗೆ ಗಂಟೆ ಕಟ್ಟುವವರ್ಯಾರು ಎಂಬ ಪ್ರಶ್ನೆ ಎದುರಾಗುತ್ತಿದೆ. ಹತ್ತಾರು ವರ್ಷಗಳಿಂದ ಈ ಮಾಧ್ಯಮದಲ್ಲಿ ಕೆಲಸ ಮಾಡಿದ ಹಿರಿಯ ಪತ್ರಕರ್ತರು ಈ ವ್ಯವಸ್ಥೆ ನೋಡಿ ಮರುಗುವಂತಾಗಿದೆ. ದಿನದಿಂದ ದಿನಕ್ಕೆ ನಕಲಿ ಪತ್ರಕರ್ತರ ಹಾವಳಿ ಹೆಚ್ಚಾಗುತ್ತಿದೆ. ಪತ್ರಕರ್ತರ ಸೋಗಿನಲ್ಲಿರುವವರಿಗೆ ಕಾನೂನಿನ ಭಯ ಹುಟ್ಟಿದರೆ ಮಾತ್ರ ಇದಕ್ಕೆ ಕಡಿವಾಣ ಸಾಧ್ಯವಾಗಿದ್ದು, ಜಿಲ್ಲಾ ಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು ಇಂತಹ ನಕಲಿ ಪತ್ರಕರ್ತರ ವಿರುದ್ದ ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ಸೂಕ್ತ ಕ್ರಮ ಕೈಗೊಳ್ಳುವ ಮೂಲಕ ಪತ್ರಿಕೆಗಳ ಗೌರವಕ್ಕೆ ಧಕ್ಕೆ ಬಾರದಂತೆ ನೋಡಿಕೊಳ್ಳಬೇಕಾಗಿದೆ. ಪತ್ರಕರ್ತರು ಸಮಾಜದ ಧ್ವನಿ ಎನ್ನುವುದು ಜನಸಾಮಾನ್ಯರ ತಿಳಿವಳಿಕೆಯಾಗಿತ್ತು. ಆದರೆ, ಪತ್ರಕರ್ತರ ಶ್ರೇಷ್ಠತೆಯನ್ನು ಇನ್ನು ಮುಂದೆ ಕಥೆಗಳಲ್ಲಿ ಮಾತ್ರ ಕೇಳುವ ಸ್ಥಿತಿ ನಿರ್ಮಾಣವಾಗಿದೆ.

ಬರವಣಿಗೆಯೇ ಗೊತ್ತಿಲ್ಲದ ರೋಲ್‌ಕಾಲ್ ಪತ್ರಕರ್ತರ ಹಾವಳಿ ಸಮಾಜದಲ್ಲಿ ದಿನೇ ದಿನೇ ಹೆಚ್ಚಾಗುತ್ತಿದೆ. ನೂರಾರು ಯು ಟ್ಯೂಬ್ ಚಾನೆಲ್‌ಗಳು, ಕಂಡು ಕೇಳರಿಯದ ಪತ್ರಿಕೆಗಳ ಐಡಿ ಕಾರ್ಡ್, ವಿಸಿಟಿಂಗ್ ಕಾರ್ಡ್‌ಗಳನ್ನು ಇಟ್ಟುಕೊಂಡು, ದಪ್ಪ ದಪ್ಪ ಅಕ್ಷರಗಳಲ್ಲಿ ತಮ್ಮ ಕಾರು, ಬೈಕ್‌ಗಳ ಮುಂಭಾಗ ಪ್ರಸ್ ಎಂದು ಬರೆಸಿಕೊಂಡು ಅಕ್ರಮ ಚಟುವಟಿಕೆಗಳಿಗಾಗಿ ತಿರುಗುವವರ ವಿರುದ್ಧ ಕ್ರಮ ಅವಶ್ಯಕವಾಗಿದೆ. ತಾಲ್ಲೂಕಿನಲ್ಲಿ ನಕಲಿ ಪತ್ರಕರ್ತರ ಹಾವಳಿ ಮಿತಿ ಮೀರಿರುವುದರಿಂದ ಕಾರ್ಯನಿರತ ಪತ್ರಕರ್ತರು ಮುಕ್ತವಾಗಿ ಕಾರ್ಯ ನಿರ್ವಹಿಸುವುದು ಕಷ್ಟಸಾಧ್ಯವಾಗಿದೆ. ಸರ್ಕಾರಿ ಹಾಗೂ ಸಂಘ, ಸಂಸ್ಥೆಗಳ ಕಾರ್ಯಕ್ರಮದಲ್ಲೂ ನಕಲಿ ಪತ್ರಕರ್ತರು ಮುಂಚೂಣಿಯಲ್ಲಿದ್ದು, ಮುದ್ರಣ ಹಾಗೂ ದೃಶ್ಯ ಮಾಧ್ಯಮದ ವರದಿಗಾರರ ಕೆಲಸ–ಕಾರ್ಯಗಳಿಗೆ ಅಡ್ಡಿಯಾಗುತ್ತಿದ್ದಾರೆ. ನಕಲಿ ಪತ್ರಕರ್ತರನ್ನು ಪ್ರಶ್ನಿಸುವ ನೈಜ ಪತ್ರಕರ್ತರ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ವ್ಯವಸ್ಥಿತವಾಗಿ ಅಪಪ್ರಚಾರ ಮಾಡುವಂತಹ ಹುನ್ನಾರ ನಡೆದಿದೆ. ಇದನ್ನು ಖಂಡಿಸುವ ಪತ್ರಕರ್ತರನ್ನು ಗುರಿಯಾಗಿಸಿಕೊಂಡು ತೇಜೋವಧೆ ಮಾಡಲಾಗುತ್ತಿದೆ. ಕೆಲ ನಕಲಿ ಪತ್ರಕರ್ತರು ಸಭೆ ಸಮಾರಂಭಗಳು ಮುಗಿಯುವವರೆಗೂ ನಿರಂತರವಾಗಿ ವಿಡಿಯೋ ಮಾಡುತ್ತಾ, ತಿರುಗಾಡುತ್ತಿದ್ದರೂ, ಅಧಿಕಾರಿಗಳು ಚಕಾರವೆತ್ತಿಲ್ಲ. ಜನಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಪೊಲೀಸರ ಇತ್ತೀಚಿನ ನಡೆಗಳು ಪರೋಕ್ಷವಾಗಿ ನಕಲಿ ಪತ್ರಕರ್ತರಿಗೆ ಪ್ರೋತ್ಸಾಹಿಸುವಂತಿವೆ. ತಾಲ್ಲೂಕಿನಲ್ಲಿ ನಕಲಿ ಪತ್ರಕರ್ತರ ಹಾವಳಿ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ಹಿರಿಯ ಪತ್ರಕರ್ತರು ಕಳವಳ ವ್ಯಕ್ತಪಡಿಸುತ್ತಿದ್ದಾರೆ.

ಪೊಲೀಸ್ ಇಲಾಖೆ ಮತ್ತು ತಾಲ್ಲೂಕು ಆಡಳಿತ ನೈಜ ಪತ್ರಕರ್ತರ ಸಭೆ ಕರೆದು ತಾಲ್ಲೂಕಿನಲ್ಲಿ ಹೆಚ್ಚುತ್ತಿರುವ ನಕಲಿ ಪತ್ರಕರ್ತರ ಹಾವಳಿಗೆ ಕಡಿವಾಣ ಹಾಕಬೇಕಾಗಿದೆ. ನಕಲಿ ಪತ್ರಕರ್ತರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಅಂಥವರನ್ನು ಗೂಂಡಾ ಕಾಯ್ದೆಯಡಿ ಗಡಿಪಾರು ಮಾಡಬೇಕು. ಈ ವಿಚಾರದಲ್ಲಿ ಮೀನಮೇಷ ಎಣಿಸಿದರೆ ಮುಂದೆ ನಡೆಯಲಿರುವ ಸರ್ಕಾರಿ ಸಭೆ, ಸಮಾರಂಭ ಸೇರಿದಂತೆ ಚುನಾವಣೆಗಳಲ್ಲಿ ನಕಲಿ ಪತ್ರಕರ್ತರ ಹಾವಳಿ ಹೆಚ್ಚಾಗುವುದರಲ್ಲಿ ಸಂದೇಹವಿಲ್ಲ. ಈಗಲಾದರೂ ಪೊಲೀಸ್ ಇಲಾಖೆ ಮತ್ತು ಜಿಲ್ಲಾಡಳಿತ ನಕಲಿ ಪತ್ರಕರ್ತರ ವಿರುದ್ಧ ಕ್ರಮ ಕೈಗೊಳ್ಳುವರೇ ಕಾದುನೋಡಬೇಕಾಗಿದೆ.

# ಸಾವಯವ ಕೃಷಿಯಿಂದ ಮಾಲಿನ್ಯವನ್ನು ತಡೆಗಟ್ಟಬಹುದು

**ಮುಳಬಾಗಿಲು:** ಸಾವಯವ ಕೃಷಿ ಪದ್ಧತಿಯಿಂದ ರೈತರು ಮಣ್ಣಿನ ಆರೋಗ್ಯವನ್ನು ಕಾಪಾಡುವುದಲ್ಲದೆ ಮಾಲಿನ್ಯವನ್ನು ತಡೆಗಟ್ಟಬಹುದು ಆದ್ದರಿಂದ ಉತ್ತಮವಾದ ಬೆಳೆಗಳನ್ನು ಬೆಳೆದು ಹೆಚ್ಚಿನ ಲಾಭಗಳಿಸಬಹುದು ಎಂದು ಬೈರಕೂರು ಸಹಾಯಕ ಕೃಷಿ ಅಧಿಕಾರಿ ಅಕ್ಷಯ್ ರೈತರಿಗೆ ಕಿವಿ ಮಾತು ಹೇಳಿದ್ದಾರೆ.





ಬೈರಕೂರಿನಲ್ಲಿ ನಡೆದ ಎಮ್ ಸೆಹಗಲ್ ಫೌಂಡೇಶನ್ ಸಹಯೋಗದಲ್ಲಿ ರೈತ ಉತ್ಪಾದಕ ಕಂಪನಿಯಲ್ಲಿ ರೈತರಿಗೆ ಸೂಕ್ಷ್ಮ ಪೋಷಕಾಂಶ ಮತ್ತು ರಸಗೊಬ್ಬರಗಳ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಇವರು ಕೃಷಿ ಉತ್ಪಾದನೆ ರೈತರ ಆರ್ಥಿಕ ಪರಿಸ್ಥಿತಿ ಮತ್ತು ಜೀವನಮಟ್ಟ ಸುಧಾರಿಸಲು ಸಮಗ್ರ ಕೃಷಿ ಪದ್ಧತಿಗಳನ್ನು ಅಳವಡಿಸಿದರೆ ತುಂಬಾ ಅನುಕೂಲವಾಗುತ್ತದೆ ಮೊದಲು ರೈತ ಮಣ್ಣಿನ ಪರೀಕ್ಷೆಯನ್ನು ನಡೆಸಿ ಅದಕ್ಕೆ ತಕ್ಕಂತೆ ಬೇಕಾಗಿರುವ ರಸಗೊಬ್ಬರಗಳನ್ನ ಬಳಸುವುದು ಉತ್ತಮ ಎಂ ಸೇಗಲ್ ಫೌಂಡೇಶನ್ ವತಿಯಿಂದ ನೀಡುತ್ತಿರುವ ಗಂಧಕ ಬೋರನ್ ಕಾರ್ಬನ್ ಡೈಆಕ್ಸೈಡ್ ಜಿಂಕ್ ಸಾರಜನಕ ಸವಯುವ ಇಂಗಳ ರಂಜಿಕ00:50 ಇತ್ಯಾದಿಗಳನ್ನು ರೈತ ಬಳಸುವುದರಿಂದ ಮಣ್ಣಿನ ಫಲವತ್ತತೆಯನ್ನು ಕಾಪಾಡಬಹುದು ಯಾವುದೇ ರೀತಿಯ ಅವೈಜ್ಞಾನಿಕ ಔಷಧಿಗಳನ್ನು ಸಿಂಪರಣೆ ಮಾಡಬಾರದು ಏನೇ ಸಮಸ್ಯೆ ಇದ್ದರೂ ರೈತರು ರೈತ ಸಂಪರ್ಕ ಕೇಂದ್ರಕ್ಕೆ ಬಂದು ಮಾಹಿತಿ ಪಡೆಯಬಹುದು ಎಂದರು.

ಬೈರಕೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ ಎಸ್ ಅಶೋಕ್ ಮಾತನಾಡಿ ರೈತರು ಈ ದೇಶದ ಬೆನ್ನೆಲುಬು ರೈತರು. ರೈತ ಇಲ್ಲ ಅಂದರೆ ಈ ದೇಶ ಉಳಿಯುವುದು ಕಷ್ಟ ಆದ್ದರಿದ ಮುಂದಿನ ದಿನಗಳಲ್ಲಿ ಸರ್ಕಾರಗಳು ರೈತರ ಪರವಾಗಿ ನಿಯಮಗಳನ್ನ ರೂಪಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ಕೆ ಎಸ್ ಅಶೋಕ್ ಸದಸ್ಯ ಶಂಕರಪ್ಪ ಪ್ರಭಾಕರ್ ನವೀನ್ ನೀವು ಎ ಓ ಅಕ್ಷಯ್ ಗುಟ್ಟು ವೆಂಕಟರಮಣ ಸ್ವಾಮಿ ದೇವಸ್ಥಾನ ಕಮಿಟಿ ಅಧ್ಯಕ್ಷ ಎಂ ವೆಂಕಟೇಶಪ್ಪ ಉಪಾಧ್ಯಕ್ಷ ಸುಬ್ರಮಣಿ ಚಲಪತಿ ಎಂ ಸೇಗಲ್ ಫೌಂಡೇಶನ್ ಮಂಜುಳಾ ಚಲಪತಿ ನಿರ್ಮಲ ಉಪಸ್ಥಿತರಿದ್ದರು.

# ಗಾಂಧಿನಗರ ಕ್ಷೇತ್ರದಲ್ಲಿ ಕಳಪೆ ಕಾಮಗಾರಿ: ಪ್ರಕಾಶ್ ಆರೋಪ

**ಬೆಂಗಳೂರು:** ಕಸದ ವಿಲೇವಾರಿ ಕುರಿತ ನಕಲಿ ಬಿಲ್ ಸಂಬಂಧಿಸಿ ಸ್ಥಳೀಯ ಶಾಸಕ ದಿನೇಶ್ ಗುಂಡೂರಾವ್ ಅವರಿಗೆ ಮಾಹಿತಿ ಇಲ್ಲವೆಂದರೆ ಅದನ್ನು ನಂಬುವುದು ಹೇಗೆ ಎಂದು ಬಿಜೆಪಿ ರಾಜ್ಯ ವಕ್ತಾರ ಪ್ರಕಾಶ್ ಅವರು ಪ್ರಶ್ನಿಸಿದ್ದಾರೆ.





ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಗಾಂಧಿನಗರ ವಿಧಾನಸಭಾ ಕ್ಷೇತ್ರದಲ್ಲಿ 3 ವರ್ಷಗಳಿಂದ ಕಸದ ಗುತ್ತಿಗೆಯಲ್ಲಿ 2 ಕೋಟಿ 37 ಲಕ್ಷ ನಕಲಿ ಬಿಲ್ ಮಾಡಿ ಹಣ ಪಡೆದ ಕುರಿತು ತನಿಖೆಗೆ ಆದೇಶಿಸಲಾಗಿದೆ.

ಇದೇನೂ ಸಣ್ಣ ಮೊತ್ತವಲ್ಲ. ಶಾಸಕರ ಗಮನಕ್ಕೆ ಬರದೆ ಯಾವುದೇ ಬಿಲ್ ಪಾವತಿ ಆಗುವುದಿಲ್ಲ ಎಂದು ಗಮನ ಸೆಳೆದರು.

ತಮ್ಮ ಕ್ಷೇತ್ರದಲ್ಲಿ ಕಸ ವಿಲೇವಾರಿ ಆಗುತ್ತಿದೆಯೇ ಸಮರ್ಪಕವಾಗಿ ಆಗುತ್ತಿದೆಯೇ? ಜನರಿಗೆ ಅನುಕೂಲಕರ ಆಗುತ್ತಿದೆಯೇ ಎಂಬುದಕ್ಕೆ ಗಮನ ಕೊಡದೇ ಇವರು ಕರ್ತವ್ಯದಲ್ಲಿ ಸಂಪೂರ್ಣ ವಿಫಲವಾಗಿದ್ದಾರೆ. ಸರಕಾರ ಬಿಬಿಎಂಪಿ ವಿಶೇಷ ಕಮೀಷನರ್ ವಿಕಾಸ್ ಕಿಶೋರ್ ಎಂಬುವರನ್ನು ತನಿಖೆಗೆ ನೇಮಿಸಿದೆ. ಅಧಿಕಾರಿಗಳು ಕೈಜೋಡಿಸದೆ ಗುತ್ತಿಗೆದಾರ ಈ ಮೊತ್ತ ಪಡೆಯಲು ಸಾಧ್ಯವೇ ಇಲ್ಲ ಎಂದು ವಿವರಿಸಿದರು.ಎಲ್ಲ ಸೇರಿ 2 ಕೋಟಿ ನುಂಗಿ ಹಾಕಿದಂತಿದೆ. ತನಿಖೆ ಮಾಡಿದರೆ ಅದೆಷ್ಟು ಕೋಟಿ ಆಚೆ ಬರುತ್ತದೋ ಗೊತ್ತಿಲ್ಲ ಎಂದು ತಿಳಿಸಿದರು.

ಈಚೆಗೆ ಗೇಟ್ ಬಿದ್ದು ಮಗು ಸತ್ತುಹೋಗಿತ್ತು. ಕಳಪೆ ಕಾಮಗಾರಿಯಿಂದ ಹೀಗಾಗಿದೆ. ಗುತ್ತಿಗೆದಾರರ ಮೇಲೆ ಕೊಲೆ ಕೇಸ್ ಹಾಕಿಲ್ಲ; ಗಾಂಧಿನಗರ ವಿಧಾನಸಭಾ ಕ್ಷೇತ್ರದಲ್ಲಿ ಕಳಪೆ ಕಾಮಗಾರಿಗಳು ನಡೆಯುತ್ತಿವೆ. ಅದಕ್ಷತೆಯಿಂದ ಕೆಲಸಗಳು ನಡೆಯುತ್ತಿವೆ ಎಂದು ಆರೋಪಿಸಿದರು. ದಿನೇಶ್ ಗುಂಡೂರಾವ್ ಅವರ ಆರೋಗ್ಯ ಇಲಾಖೆಯಲ್ಲೂ ಅದೇ ನಡೆದಿದೆ.

ದಿನನಿತ್ಯ ಬಾಣಂತಿಯರ ಸಾವು ಸಂಭವಿಸುತ್ತಿದೆ ಎಂದು ತಿಳಿಸಿದರು. ಬೇರೆಯವರನ್ನು ಟೀಕಿಸುವುದಕ್ಕೇ ಇವರು ಸೀಮಿತವಾಗಿದ್ದಾರೆ. ತಮ್ಮ ಮೂಗಿನಡಿ ನಡೆಯುವ ಅವ್ಯವಹಾರಗಳನ್ನು ಕೂಡ ದಿನೇಶ್ ಗುಂಡೂರಾವ್ ಅವರು ಗಮನಿಸದೆ ಇರುವುದು ಬಹಳ ಶೋಚನೀಯ ಎಂದು ತಿಳಿಸಿದರು.

ಬಿಜೆಪಿ ರಾಜ್ಯ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್, ಕೇಂದ್ರ ಜಿಲ್ಲಾ ಅಧ್ಯಕ್ಷ ಸಪ್ತಗಿರಿ ಗೌಡ, ಉತ್ತರ ಜಿಲ್ಲಾ ಅಧ್ಯಕ್ಷ ಹರೀಶ್ ಅವರು ಭಾಗವಹಿಸಿದ್ದರು.

# ಹಾಲು ಉತ್ಪಾದಕರ ಸಂಘಕ್ಕೆ ಆಯ್ಕೆ





ಶಿಡ್ಲಘಟ್ಟ: ತಾಲ್ಲೂಕಿನ ಮೇಲೂರು ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಎನ್.ನಾಗರಾಜ್ (ಟೈಲರ್) ಹಾಗೂ ಉಪಾಧ್ಯಕ್ಷರಾಗಿ ಬಿ.ಕೆಂಪೇಗೌಡ ಅವಿರೋಧವಾಗಿ ಆಯ್ಕೆಯಾದರು.


ಒಟ್ಟು 13 ಸಂಖ್ಯಾ ಬಲವಿರುವ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಹಾಗೂ ಉಪಾದ್ಯಕ್ಷರ ಚುನಾವಣೆ ನಡೆಯಿತು.

ಅಧ್ಯಕ್ಷ ಹಾಗು ಉಪಾಧ್ಯಕ್ಷ ಸ್ಥಾನಕ್ಕೆ ಕೇವಲ ಒಂದೊಂದು ನಾಮಪತ್ರ ಸಲ್ಲಿಕೆಯಾದ ಹಿನ್ನಲೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಚುನಾವಣಾಧಿಕಾರಿಯಾಗಿ ಎನ್.ವನಿತ ಕಾರ್ಯನಿರ್ವಹಿಸಿದರು.

ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ನಿರ್ದೇಶಕರಾದ ಎಂ.ಎಸ್.ರಮೇಶ್, ಎಸ್.ಟಿ.ಸುರೇಶ್, ಎಂ.ಶ್ರೀನಿವಾಸ್, ಎಂ.ಎನ್.ಶಿವಕುಮಾರ್, ಎಂ.ಆರ್.ಲಕ್ಷ್ಮೀಪತಿ, ಸುದರ್ಶನ್, ಎನ್.ಎಂ.ಶಿವಕುಮಾರ್, ಎಂ.ಟಿ.ಜಯದೇವ, ಬಿ.ಶ್ರೀನಿವಾಸಮೂರ್ತಿ, ನಾಗವೇಣಿ, ರತ್ನಮ್ಮ ಹಾಗು ಮುಖಂಡರಾದ ಆರ್.ಎ.ಉಮೇಶ್, ರೂಪೇಶ್, ಮುನೇಗೌಡ, ಪ್ರಭಾಕರ್, ಸುಧೀರ್,ಕಾರ್ಯ ನಿರ್ವಹಣಾಧಿಕಾರಿ ನಂದನ್ ಮುಂತಾದವರು ಹಾಜರಿದ್ದರು.

# ಬಸ್ ಮಾಲೀಕರ ಮೇಲೆ ಪ್ರಕರಣ ದಾಖಲಿಸುವಂತೆ ದೂರು ಸಲ್ಲಿಕೆ

**ಚಾಮರಾಜನಗರ:** ಶಾಲಾ ಶಿಕ್ಷಕನೋರ್ವ ಬಸ್ ಚಾಲನೆ ಮಾಡಿ ಇಲಾಖಾವಾರು ವಿಚಾರಣೆ ನಡೆಸಿ ಅಮಾನತು ಮಾಡಿದ ಬೆನ್ನಲ್ಲೇ ವಿದ್ಯಾರ್ಥಿಗಳು ಪೋಷಕರು ಶಿಕ್ಷಕರ ಪರ ಪ್ರತಿಭಟನೆ ನಡೆಸಿದ್ದು ಇದೀಗ ಈ ಪ್ರಕರಣ ಸಂಬಂಧಿಸಿದಂತೆ ಬಸ್ ಮಾಲೀಕರ ಮೇಲೂ ಪ್ರಕರಣ ದಾಖಲಿಸುವಂತೆ ಚಾಮರಾಜನಗರ ವರೀಷ್ಠಾದಿಕಾರಿಗಳಿಗೆ ಕದಂಬಸೇನೆ ರಾಜ್ಯಾದ್ಯಕ್ಷ ಅಂಬರೀಶ್ ದೂರು ಸಲ್ಲಿಸಿದ್ದಾರೆ.



ಕದಂಬ
ಕನ್ನಡ ಸೇನೆ ಕರ್ನಾಟಕ (ನೋಂ)

ಯಳಂದೂರು ತಾಲ್ಲೂಕಿನ ಗುಂಬಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವತಿಯಿಂದ ಕೈಗೊಂಡಿದ್ದ ಶಾಲಾ ಶೈಕ್ಷಣಿಕ ಪ್ರವಾಸಕ್ಕೆ ಖಾಸಗಿ ವಾಹನ ಸಂಖ್ಯೆ:ಕೆ.ಎಲ್.40.ಬಿ–9090 ನಿಗದಿಗೊಳಿಸಿ, ಶೈಕ್ಷಣಿಕ ಪ್ರವಾಸ ಕೈಗೊಂಡಿರುವುದು ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಉತ್ತಮ ಕಾಯಕ. ಆದರೆ ಪ್ರವಾಸದಲ್ಲಿರುವಾಗ ಶಾಲೆಯ ಸಹಶಿಕ್ಷಕರಾದ ಶ್ರೀ ವೀರಭದ್ರಸ್ವಾಮಿ ಎಂಬುವವರು ಏಕಾಏಕಿ ಬಸ್ಸನ್ನು ಸ್ವತಃ ತಾವೇ ಚಾಲನೆ ಮಾಡಿರುವುದು ಹಾಗೂ ಚಾಲನೆ ಮಾಡಿರುವ ದೃಶ್ಯವನ್ನು ತಮ್ಮದೇ ವಿದ್ಯಾರ್ಥಿಗಳು ಹಾಗೂ ಸಹೋದ್ಯೋಗಿಗಳು ದೃಶ್ಯವನ್ನು ಸೆರೆ ಹಿಡಿದು ಜಾಲತಾಣದಲ್ಲಿ ಹರಿಬಿಟ್ಟಿರುತ್ತಾರೆ. ಸ್ವತಃ ತಾವು ಓರ್ವ ಶಿಕ್ಷಕನಾಗಿ ಕನಿಷ್ಠ ಕಾನೂನು ತಿಳುವಳಿಕೆಗೂ ಒತ್ತು ನೀಡದೇ, ಮೇಲಾಧಿಕಾರಿಗಳ ಗಮನಕ್ಕೂ ತಾರದೇ, ಏಕಾಏಕಿ ಬಸ್ಸನ್ನು ಸ್ವತಃ ಚಾಲನೆ ಮಾಡಿರುವುದಲ್ಲದೇ, ಬಸ್ಸಿನಲ್ಲಿದ್ದ ಮಕ್ಕಳ ಬಗ್ಗೆ ಹಾಗೂ ಅವರ ಪೋಷಕರುಗಳ ಆತಂಕದ ಬಗ್ಗೆ ಕನಿಷ್ಠ ನಿಗಾವನ್ನು ಕೊಟ್ಟಿರುವುದಿಲ್ಲ. ಜೊತೆಗೆ ಮಕ್ಕಳ ಪ್ರಾಣದ ಜೊತೆಗೆ ಚೆಲ್ಲಾಟವಾಡಿರುವುದಲ್ಲದೇ ತನ್ನ ಹುಂಬತನಕ್ಕಷ್ಟೆ ದೇಕಾದ ರೀತಿಯಲ್ಲಿ ವರ್ತನೆ ಮಾಡಿ, ಅಧಿಕೃತ ಭಾರಿ ವಾಹನ ಚಾಲನಾ ಪರವಾನಿಗೆ ಮತ್ತು ಬ್ಯಾಡ್ಜ್ ಇಲ್ಲದಿದ್ದರೂ ಭಾರಿ ವಾಹನ ಚಲಾಯಿಸಿರುವುದು ಮೋಟಾರ್ ವಾಹನ ಕಾಯಿದೆ ಪ್ರಕಾರ ಅಪರಾಧವಾಗಿರುತ್ತದೆ. ಅವರು ಓರ್ವ ಶಿಕ್ಷಕರಾಗಿದ್ದು, ಮಕ್ಕಳಿಗೆ ನಾಗರೀಕತೆ ಮತ್ತು ಕಾನೂನಿನ ಬಗ್ಗೆ ಉತ್ತಮ ಮೌಲ್ಯಗಳನ್ನು ಹಾಗೂ ಅರಿವನ್ನು ಬಿತ್ತುವ ಸ್ಥಾನದಲ್ಲಿದ್ದುಕೊಂಡು ತಾವೇ ತಮ್ಮ ಶಿಷ್ಯಂದಿರ ಮುಂದೆಯೇ ಈ ರೀತಿಯ ಕಾನೂನು ಬಾಹಿರ ನಡೆಯನ್ನು ಕಾಯ್ದುಕೊಂಡಿರುವುದು ಮುಂದೆ ಅವರ ಶಿಷ್ಯರಲ್ಲೂ ಇದೇ ರೀತಿಯ ವರ್ತನೆ ಬೆಳೆಯಲು ಪ್ರಚೋದನೆ ನೀಡಿರುತ್ತಾರೆ ಮತ್ತು ಮಕ್ಕಳ ಹಿತದೃಷ್ಟಿ ಪ್ರಾಣಾಪಾಯದ ಬಗ್ಗೆ ನಿಗಾ ಇಡಬೇಕಾದ ಶಿಕ್ಷಕರೇ, ಮಕ್ಕಳ ಪ್ರಾಣವನ್ನು ಒತ್ತೆ ಇಟ್ಟು ವಾಹನ ಚಲಾಯಿಸಿರುವುದು ಕಾನೂನು ರೀತ್ಯ ಅಪರಾಧವಾಗಿರುವುದರಿಂದ ತಾವು ವಾಹನ ಚಾಲಕ ತನ್ನ ಬೇಜವಾಬ್ದಾರಿತನದಿಂದ ಶಿಕ್ಷಕರಿಗೆ ವಾಹನ ಚಾಲನೆ ಮಾಡಲು ಕೊಟ್ಟಿರುವುದು ಮತ್ತು ಮಾಲೀಕರ ಬೇಜವಾಬ್ದಾರಿಯಿಂದ ಮಕ್ಕಳ ಪ್ರಾಣಕ್ಕೆ ಆಪತ್ತು ಬಂದಿದ್ದರೆ ಹೊಣೆಗಾರಿಕೆಯನ್ನು ಹೊರುವ ವ್ಯಕ್ತಿಯಾಗಿರುವುದರಿಂದ ಕೂಡಲೇ ಮೇಲ್ಕಾಣಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕಠಿಣ ಕ್ರಮ ತೆಗೆದುಕೊಂಡು, ಮುಂದೆ ಯಾವ ವ್ಯಕ್ತಿಯು ಈ ತರಹದ ಅಪಾಯಕಾರಿ ಕೆಲಸಕ್ಕೆ ತೊಡಗದಂತೆ ಕಾನೂನು ಕ್ರಮ ಜರುಗಿಸಲು ತಮ್ಮಲ್ಲಿ ಈ ಮೂಲಕ ಮನವಿ ಮಾಡುತ್ತೇವೆ. ಈ ಹಿಂದೆ ಕೋಲಾರದ ಮುರಾರ್ಜಿ ಶಿಕ್ಷಕರ ಮತ್ತು ಸಿಬ್ಬಂದಿಗಳ ಬೇಜವಾಬ್ದಾರಿತನದಿಂದ ಸಮುದ್ರದಲ್ಲಿ ಮಕ್ಕಳು ಪ್ರಾಣ ಬಿಡುವಂತೆ ಆಗಿರುವುದು ಇನ್ನೂ ಮಾಸಿರುವುದಿಲ್ಲ.ಅಲ್ಲದೇ ಬೇರೆ ಬೇರೆ ಕಡೆಗಳಲ್ಲಿ ಶಿಕ್ಷಕರ ಮತ್ತು ಸಿಬ್ಬಂದಿಗಳ ಬೇಜವಾಬ್ದಾರಿತನದಿಂದ ಮಕ್ಕಳ ಪ್ರಾಣಕ್ಕೆ ಕುತ್ತು ಬರುವ ಉದಾಹರಣೆಗಳು ಕಂಡುಬಂದಿರುವುದರಿಂದ ತಮ್ಮಲ್ಲಿ ಮತ್ತೊಮ್ಮೆ ಮನವಿ ಮಾಡುವುದೇನೆಂದರೆ ಶಿಕ್ಷಕ, ಚಾಲಕ ಮತ್ತು ವಾಹನದ ಮಾಲೀಕರ ಮೇಲೆ ದೂರು ದಾಖಲಿಸಿಕೊಂಡು ಕಠಿಣ ಕಾನೂನು ಕ್ರಮ ಜರುಗಿಸುವಂತೆ ಮನವಿ ಮಾಡಿದ್ದಾರೆ

# ಗುಣ ನಿಯಂತ್ರಣ ಪರೀಕ್ಷೆಗೆ ಮಾದರಿ ರವಾನೆ



**ಶಿಡ್ಲಘಟ್ಟ:** ಕೃಷಿ ಇಲಾಖೆಯಿಂದ ಹನಿ ನೀರಾವರಿ ಪದ್ದತಿಗಾಗಿ ರೈತರಿಗೆ ವಿತರಿಸಿದ್ದ ಪಿವಿಸಿ ಪೈಪ್ ಮತ್ತು ಲ್ಯಾಟರಲ್‌ಗಳು ಕಳಪೆ ಗುಣಮಟ್ಟದ್ದಾಗಿದೆ ಎಂಬ ದೂರು ಬಂದ ಹಿನ್ನಲೆಯಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಗುಣ ನಿಯಂತ್ರಣ ಪರೀಕ್ಷೆಗಾಗಿ ಮಾದರಿ ಸಂಗ್ರಹಿಸಿ ಮೈಸೂರಿನ ಸೇಫೆಟ್ ಸಂಸ್ಥೆಗೆ ರವಾನಿಸಿದ್ದಾರೆ.

ತಾಲ್ಲೂಕಿನ ಅಪ್ಪೇಗೌಡನಹಳ್ಳಿಯ ರೈತ ಲಕ್ಷ್ಮೀನಾರಾಯಣರೆಡ್ಡಿ ಅವರ ಕೇಶವಪುರ ಗೇಟ್ ನಲ್ಲಿನ ತೋಟದಲ್ಲಿ ಅಳವಡಿಸಲು ಕೃಷಿ ಇಲಾಖೆಯಿಂದ ನೀಡಿದ್ದ ಪ್ರೀಮಿಯರ್ ಇರಿಗೇಷನ್ ಅಡ್ರಿ ಪ್ರೈವೇಟ್ ಲಿಮಿಟೆಡ್ ಕಂಪನಿಯ ಪಿವಿಸಿ ಪೈಪ್, ಲ್ಯಾಟರಲ್ ಗಳ ಮಾದರಿ ಸಂಗ್ರಹಿಸಲಾಯಿತು.

ಕೃಷಿ ಸಹಾಯಕ ನಿರ್ದೇಶಕ ಪಿ.ಆರ್. ರವಿ ಮಾತನಾಡಿ, ಅಪ್ಪೇಗೌಡನಹಳ್ಳಿಯ ರೈತ ಲಕ್ಷ್ಮಿನಾರಾಯಣರೆಡ್ಡಿ ಅವರಿಗೆ ನಮ್ಮ ಇಲಾಖೆಯಿಂದ ವಿತರಿಸಿದ್ದ ಪಿವಿಸಿ ಪೈಪ್, ಲ್ಯಾಟರಲ್ ಗಳ ಗುಣಮಟ್ಟ ಕಳಪೆ ಎಂಬ ದೂರು ಬಂದ ಹಿನ್ನಲೆಯಲ್ಲಿ ತೋಟದಿಂದ 5 ಮೀಟರ್ ಪಿವಿಸಿ ಪೈಪ್, 7 ಮೀಟರ್ ಲ್ಯಾಟರಲ್, 335 ಮೀಟರ್ ನಷ್ಟು ಇನ್ ಲ್ಯಾಂಡ್ ಮಾದರಿ ಸಂಗ್ರಹಿಸಿ ಮೈಸೂರಿನ ಸೀಫೆಟ್ ಸಂಸ್ಥೆಗೆ ಗುಣ ಮಟ್ಟ ಪರಿಶೀಲನೆಗೆ ಕಳುಹಿಸಿದ್ದು ವರದಿ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು..

# ಸಂಕ್ರಾಂತಿ ಹಬ್ಬ ಹಾಗೂ ದೀಪೋತ್ಸವದ ಪ್ರಯುಕ್ತ ರಸಮಂಜರಿ

**ಮುಳಬಾಗಿಲು:** ತಾಲೂಕಿನ ಪುರಾಣ ಪ್ರಸಿದ್ಧ ದೇವಾಲಯಗಳಲ್ಲಿ ಒಂದಾದ ಹೆಬ್ಬಣಿ ಶ್ರೀ ಶ್ರೀ ಗಂಗಮ್ಮ ದೇವಿ ದೇವಾಲಯದಲ್ಲಿ ಸಂಕ್ರಾಂತಿ ಹಬ್ಬ ಹಾಗೂ ದೀಪೋತ್ಸವದ ಪ್ರಯುಕ್ತ ರಸಮಂಜರಿ ಕಾರ್ಯಕ್ರಮವನ್ನು ಪಂಚಾಯ್ತಿಯ ಜನತೆಯ ಆಶಾಕಿರಣ, ಬಡವರ ಬಂಧು, ಯುವಕರ ಆಶಾಕಿರಣ ಎಂ.ಗೊಲ್ಲಹಳ್ಳಿ ಪ್ರಭಾಕರ್ ರವರಿಂದ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ದೇವರ ನೃತ್ಯ, ಕನ್ನಡ ಹಾಗೂ ತೆಲುಗು ಹಾಡುಗಳಿಗೆ ವಿಶೇಷ ನೃತ್ಯ ಮಾಡಲು ಅದ್ದೂರಿಯಾಗಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಅಭಿಮಾನಿಗಳಿಂದ ಭವ್ಯ ಸ್ವಾಗತವನ್ನು ಸ್ವೀಕರಿಸಿ ನಂತರ ಮಾತನಾಡಿದ ಸಮಾಜ ಸೇವಕರು ಹಾಗೂ ಕೆಪಿ ಟ್ರಾವೆಲ್ಸ್‌ನ ಮಾಲೀಕರು, ಜೆಡಿಎಸ್ ನ ಮುಖಂಡರಾದ ಎಂ.ಗೊಲ್ಲಹಳ್ಳಿ ಪ್ರಭಾಕರ್ ರವರು ಸಂಕ್ರಾಂತಿ ಹಬ್ಬ ಎಂದರೆ ಇಡೀ ದೇಶವೇ ಸಂಭ್ರಮ ಸಡಗರದಿಂದ ಆಚರಿಸುವ ಹಬ್ಬಗಳಲ್ಲಿ ಒಂದಾಗಿದು ,ಆಚರಣೆಯು ಯಾವುದೇ ವ್ಯಕ್ತಿಗೆ ತೊಂದರೆ ತೊಡಕಾಗದಂತೆ ಆಚರಿಸಿ ಯಾವುದೇ ಅವಘಡಗಳಿಗೆ ಆಸ್ಪಾದ ನೀಡದಿರಿ ಎಂದು ತಿಳಿಸಿದರು.

ಪಂಚಾಯ್ತಿಯ ಜನತೆಯ ಕಷ್ಟ ಸುಖಗಳಲ್ಲಿ ಕಳೆದ ನಾಲ್ಕು ವರ್ಷಗಳಿಂದ ಜನರ ಒಟ್ಟಿಗೆ ಇದ್ದು ಮುಂದೆಯು ಸಹ ಜನರ ಮಧ್ಯೆ ಸದಾ ಸೇವೆಯಲ್ಲಿ ಇರುವುದಾಗಿ ಹೇಳಿದರು. ಇತ್ತೀಚಿನ ದಿನಗಳಲ್ಲಿ ಬಹುತೇಕ ಯುವಕರು ಅಡ್ಡದಾರಿಗಳಿಗೆ ಸಿಲುಕಿ ಬಹುಬೇಗ ಕೋಟ್ಯಾಧಿಪತಿ ಗಳಾಗ ಬೇಕೆಂದು ಸಲ್ಲದ ದಾರಿಗಳಲ್ಲಿ ನಡೆಯುವುದು ಸರಿಯಲ್ಲ ಪ್ರಾಮಾಣಿಕವಾಗಿ ಕಷ್ಟಪಟ್ಟರೆ ನಂತರ ಭಗವಂತನ ಆಶೀರ್ವಾದ ಇಂದಲ್ಲ ನಾಳೆ ಕಂಡಿತ ಸಿಗುತ್ತದೆಂದು ಯುವಕರನ್ನು ಕುರಿತು ತಿಳಿಸಿದರು.

ನಾನು ಇದೇ ಗ್ರಾಮ ಪಂಚಾಯಿತಿಯ ಹೆಬ್ಬಣಿ ರಾಧಾಕೃಷ್ಣ ಪ್ರೌಢ ಶಾಲೆಯಲ್ಲಿ ಓದುತ್ತಿದ್ದಾಗ ನನ್ನ ಅಕ್ಕ ಪಕ್ಕದಲ್ಲಿರುವ ಕೊಠಡಿಗಳನ್ನು ತರಗತಿಗಳನ್ನು ಮಾಡಿಕೊಂಡು, ಇಲ್ಲಿರುವ ಅಂಗಡಿಗಳನ್ನು ನೆನೆಯುತ್ತಾ, ಊರಿನ ಹಿರಿಯರನ್ನು ತಿಳಿಯುತ್ತಾ, ಓದಿ ಬಂದವನು ನನ್ನ ಹುಟ್ಟೂರು ಇದೆ ಪಕ್ಕದಲ್ಲಿರುವ ಎಂ. ಗೊಲ್ಲಹಳ್ಳಿ ಎಂದು ಇಲ್ಲಿಗೆ ಬರಬೇಕಾದರೆ ಎರಡು ಕಿ.ಮೀ ನಡೆಯುತ್ತಾ ಬಂದು ವಿದ್ಯಾಭ್ಯಾಸದಲ್ಲಿ ತೊಡಗಿ ಗುರುಹಿರಿಯರಿಗೆ ಗೌರವ ಕೊಡುತ್ತಾ ಬಂದಿದ್ದೇನೆ ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿ ನಮ್ಮ ತಾಲೂಕಿನ ಶಾಸಕರಾದ ಸಮೃದ್ಧಿ ಮಂಜುನಾಥ್ ಹಾಗೂ ಜೆಡಿಎಸ್ ಪಕ್ಷದ ತಾಲೂಕ ಅಧ್ಯಕ್ಷರಾದ ಕಾಡೇನಹಳ್ಳಿ ನಾಗರಾಜ್ ರವರ ಆದೇಶ ಮೇರೆಗೆ ಬಡಜನರ ಕಷ್ಟವನ್ನು ಆಳಿಸುತ್ತಾ ನನ್ನ ಕೈಲಾದಷ್ಟು ಸಹಾಯವನ್ನು ಮಾಡುತ್ತಾ ಬರುತ್ತಿದ್ದೇನೆ. ಮುಂದಿನ ದಿನಗಳಲ್ಲಿ ನಮ್ಮ ಜೆಡಿಎಸ್ ಪಕ್ಷ ಹಾಗೂ ನನ್ನ ಮೇಲೆ ಭರವಸೆ ಇಟ್ಟುಕೊಂಡು ನನ್ನನ್ನು ಆಶೀರ್ವಾದ ಮಾಡುತ್ತಾರೆ ಎಂದು ಗ್ರಾಮ ಪಂಚಾಯತಿಯ ಹಾಗೂ ಊರಿನ ತಾಯಂದಿರು ಹಾಗೂ ಸಾರ್ವಜನಿಕರು, ಯುವಕರಲ್ಲಿ ಮನವಿ ಮಾಡುತ್ತೇನೆ. ಈ ಒಂದು ಕಾರ್ಯಕ್ರಮಕ್ಕೆ ಸಹಕಾರ ನೀಡಿದ ಅಂಬೇಡ್ಕರ್ ನಗರದ ಯುವಕರಿಗೆ, ಹಿರಿಯರಿಗೆ ಹಾಗೂ ಮುಖಂಡರಿಗೆ ನನ್ನ ಅಭಿನಂದನೆಗಳು ತಿಳಿಸುತ್ತಾ ಇಂತಹ ಕಾರ್ಯಕ್ರಮಗಳನ್ನು ಇನ್ನು ಮುಂದೆಯೂ ಸಹ ಮಾಡುತ್ತೇನೆ ಎಂದು ಭರವಸೆ ನೀಡಿದರು.



ಕಾರ್ಯಕ್ರಮದಲ್ಲಿ ಮಾಜಿ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರಾದ ಎಂ. ಎಸ್. ಶ್ರೀನಿವಾಸ್ ರೆಡ್ಡಿ . ನಗರಸಭೆಯ ಮಾಜಿ ಅಧ್ಯಕ್ಷರಾದ ಎಂ.ಆರ್ ಮುರಳಿ, ಚಂದ್ರಹಾಸ್, ಹೆಬ್ಬಣಿ ಗ್ರಾ.ಪಂ ಅಧ್ಯಕ್ಷರಾದ ಭಾಸ್ಕರ್ ರೆಡ್ಡಿ , ಉಪಾಧ್ಯಕ್ಷರಾದ ಸುಚಿತ್ರ ಗಂಗಾಧರ್, ಮುಷ್ಟೂರು ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಪೆದ್ದೂರು ವರದಪ್ಪ, ಬೈರಕೂರು ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಪಿ ಎಲ್ ಡಿ ಬ್ಯಾಂಕಿನ ಸದಸ್ಯರಾದ ಕಾಡೇನಹಳ್ಳಿ ಅಶೋಕ್ , ಗ್ರಾಮ ಪಂಚಾಯತಿ ಸದಸ್ಯರ ಒಕ್ಕೂಟದ ತಾಲೂಕು ಅಧ್ಯಕ್ಷರಾದ ಶಂಕರ್, ಕೊತ್ತೂರು ವೆಂಕಟರಾಮಪ್ಪ, ಗ್ರಾಪಂ ಸದಸ್ಯರಾದ ಕೊತ್ತೂರು ಸೀನಪ್ಪ ಎಂ. ಶ್ರೀನಿವಾಸ್, ಬೈಯಪ್ಪನಹಳ್ಳಿ ಅಶೋಕ್, ಚಾನ್ ಪಾಷಾ , ಡಾಬಾ ಹರಿ, ಕೋಡಹಳ್ಳಿ ಸುಬ್ರಮಣಿ, ಮುನಿಯಪ್ಪ, ರಸಮಂಜರಿ ಕಾರ್ಯಕ್ರಮದ ನಿರ್ವಾಹಕರಾದ ಅಂಬೇಡ್ಕರ್ ನಗರದ ಎಚ್. ಬಿ.ರವಿ, ಶಿವಶಂಕರ್, ನಾಗೇಂದ್ರ, ಮುನಿರಾಜ್ ರವಿ, ಸುಧ, ಹಾಗೂ ನಗರದ ಯುವಕ ಮಿತ್ರರು, ಅಂಬೇಡ್ಕರ್ ಯುವಕರ ಬಳಗ,ಜೆಡಿಎಸ್ ಪಕ್ಷದ ಕಾರ್ಯಕರ್ತರು, ಮುಖಂಡರು ಭಾಗವಹಿಸಿದ್ದರು.

# ಅಧ್ಯಕ್ಷರಾಗಿ ನೂರ್‌ಜಾನ್ ಮುಸ್ತಾಪ ಆಯ್ಕೆ

**ಮಾಗಡಿ:** ತಾಲೂಕಿನ ಚಿಕ್ಕಹಳ್ಳಿ ಗ್ರಾಮಪಂಚಾಯ್ತಿಗೆ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್‌ನ ನೂರ್ ಜಾನ್ ಮುಸ್ತಾಪ ಚುನಾಯಿತರಾಗಿದ್ದಾರೆ.

ಜಿ.ಎನ್.ಶ್ರೀನಿವಾಸ್ ಮೂರ್ತಿ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಗೆ ಕಾಂಗ್ರೆಸ್‌ನ ನೂರ್ ಜಾನ್ ಮುಸ್ತಾಪ, ಜೆಡಿಎಸ್‌ನ ನಿಂಗೇಗೌಡ, ನಾರಾಯಣಮೂರ್ತಿ ಮೂರು ಮಂದಿ ನಾಮಪತ್ರ ಸಲ್ಲಿಕೆಮಾಡಿದರು ಈ ಮೂರು ನಾಮಪತ್ರ ಸಿಂಧುವಾಗಿತ್ತು ಕೊನೆಯ ಕ್ಷಣದಲ್ಲಿ ನಿಂಗೇಗೌಡ ತಮ್ಮ ನಾಮಪತ್ರ ವಾಪಸು ಪಡೆದರು ಅಂತಿಮವಾಗಿ ನೂರ್ ಜಾನ್ ಮುಸ್ತಾಪ, ನಾರಾಯಣಮೂರ್ತಿ

ಇಬ್ಬರು ಅಂತಿಮ ಕಣದಲ್ಲಿದ್ದು ಗೌಪ್ಯಮತದಾನದಲ್ಲಿ ಜೆಡಿಎಸ್‌ನ ನಾರಾಯಣ ಮೂರ್ತಿ 5 ಮತಪಡೆದರೆ ಕಾಂಗ್ರೆಸ್‌ನ ನೂರ್ ಜಾನ್ ಮುಸ್ತಾಪ 8 ಮತಗಳನ್ನು ಪಡೆಯುವ ಮೂಲಕ ಚುನಾಯಿತರಾದರು.

ಚಿಕ್ಕಹಳ್ಳಿ ಗ್ರಾ.ಪಂ. 16 ಸದಸ್ಯರನ್ನು ಹೊಂದಿದ್ದು ಇಂದು ನಡೆದ ಚುನಾವಣೆಯಲ್ಲಿ 14 ಮಂದಿ ಸದಸ್ಯರು ಚುನಾವಣೆ ಪ್ರಕ್ರಿಯೆಯಲ್ಲಿ ಭಾಗವಹಿಸಿದರೆ ಭವ್ಯ, ಜಾಕೀರ್ ಹುಸೇನ್ ಗೈರಾಗಿದ್ದರು. ವಲಯ ಅರಣ್ಯಾಧಿಕಾರಿ ಚೈತ್ರ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದರು. ಪೊಲೀಸರು ಬಿಗಿ ಬಂದೋಬಸ್ತ್ ಏರ್ಪಡಿಸಿದ್ದರು.



ನೂತನ ಅಧ್ಯಕ್ಷ ನೂರ್ ಜಾನ್ ಮುಸ್ತಾಪ ಮಾತನಾಡಿ, ಗ್ರಾಮೀಣ ಭಾಗಗಳ ಸರ್ವತೋಮುಖ ಅಭಿವೃದ್ಧಿಗೆ ಗ್ರಾಮಪಂಚಾಯ್ತಿಗಳ ಪಾತ್ರ ಮಹತ್ವವಾಗಿದೆ, ಸರಕಾರ ಗ್ರಾ.ಪಂಗೆ ಹೆಚ್ಚು ಒತ್ತು ನೀಡಿರುವುದರಿಂದ ಗ್ರಾ.ಪಂ. ಮಿನಿ ವಿಧಾನಸೌಧ ಇದ್ದಂತೆ ಈ ಮೂಲಕ ಸರಕಾರದಿಂದ ಬರುವ ಎಲ್ಲಾ ಸೌಲತ್ತುಗಳನ್ನು ಕಟ್ಟಕಡೆಯ ವ್ಯಕ್ತಿಗೂ ತಲುಪಿಸಲು ಪ್ರಮಾಣಿಕ ಪ್ರಯತ್ನಮಾಡುತ್ತೇನೆ. ಸಾಮಾನ್ಯ ಕಾರ್ಯಕರ್ತೆಯಾದ ನನನ್ನು ಅಧ್ಯಕ್ಷರನ್ನಾಗಿ ಮಾಡಲು ಸಹಕಾರ ನೀಡಿದ ಶಾಸಕ ಎಚ್.ಸಿ.ಬಾಲಕೃಷ್ಣ, ಮಾಜಿ ಸಂಸದ ಡಿ.ಕೆ.ಸುರೇಶ್, ಗ್ರಾ.ಪಂ. ಸದಸ್ಯರು, ಮುಖಂಡರುಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ತಾಲೂಕು ಟಿಎಪಿಸಿಎಂಎಸ್ ಅಧ್ಯಕ್ಷ ಹೊನ್ನಾಪುರ ಶಿವಪ್ರಸಾದ್ ಮಾತನಾಡಿ, ಚಿಕ್ಕಹಳ್ಳಿ ಗ್ರಾ.ಪಂ. ಎಲ್ಲಾ ಜನಾಂಗ ಹೊಂದಿರುವ ಗ್ರಾ.ಪಂಯಾಗಿದ್ದು ಎಲ್ಲಾ ಜನಾಂಗದವರಿಗೂ ರಾಜಕೀಯವಾಗಿ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಶಾಸಕ ಎಚ್.ಸಿ.ಬಾಲಕೃಷ್ಣ, ಕೆಂಪೇಗೌಡ ಆಸ್ಪತ್ರೆ ಅಧ್ಯಕ್ಷ ಎಚ್.ಎನ್.ಆಶೋಕ್ ಅವರು ಅಲ್ಪಸಂಖ್ಯಾತ ಮಹಿಳೆ ನೂರ್ ಜಾನ್ ಮುಸ್ತಾಪ ಅವರನ್ನು ಅಧ್ಯಕ್ಷೆಯನ್ನಾಗಿ ಮಾಡಲು ಶ್ರಮಿಸಿದ್ದು ಗ್ರಾ.ಪಂ. ಸದಸ್ಯರು, ಮುಖಂಡರು ಸಹಕಾರ ನೀಡಿದ್ದು ಎಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇವೆ. ಗ್ರಾ.ಪಂ. ಸದಸ್ಯರಾಗಿ ಸಾಕಷ್ಟು ಅನುಭವಹೊಂದಿರುವ ಅವರು ಜನರ ಸಮಸ್ಯೆಗಳ ಬಗ್ಗೆ ಸಾಕಷ್ಟು ಅನುಭವಹೊಂದಿದ್ದು ಎಲ್ಲರ ಸಮಸ್ಯೆಗಳಿಗೆ ಪೂರಕವಾಗಿ ಶಕ್ತಿ ಮೀರಿ ಶ್ರಮಿಸುತ್ತಾರೆ ಎಂಬ ಆತ್ಮವಿಶ್ವಾಸ ಎಲ್ಲರಲ್ಲಿದೆ ಎಂದರು.

ಬೇಸಿಗೆ ಸಮೀಪಿಸಿದ್ದು ಗ್ರಾ.ಪಂ. ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿಲ್ಲ ನೀರಿನ ಸಮಸ್ಯೆ ಕಂಡುಬಂದರೆ ಶಾಸಕರ ಗಮನಕ್ಕೆ ತಂದು ತುರ್ತಾಗಿ ಕೊಳವೆ ಬಾವಿ ಕೊರೆಸಿ 2 ದಿನಗಳ ಒಳಗೆ ಸಮಸ್ಯೆಗೆ ಮುಕ್ತಿ ನೀಡುವುದಾಗಿ ಭರವಸೆ ನೀಡಿದರು.

ಉಪಾಧ್ಯಕ್ಷೆ ಶಾರದಮ್ಮ ಕೃಷ್ಣಮೂರ್ತಿ, ಸದಸ್ಯರಾದ ಶಿವಪ್ರಸಾದ್, ಮುನಿರಾಜು, ಶ್ರೀನಿವಾಸ ಮೂರ್ತಿ, ಪುಷ್ಪ, ನರಸಿಂಹಮೂರ್ತಿ, ದೊಡ್ಡಹಳ್ಳಿ, ಜಯಮ್ಮ, ಜಯಮ್ಮ ಸಣ್ಣೇನಹಳ್ಳಿ, ನರಸಿಂಹಮೂರ್ತಿ, ಜಾಸ್ಮೀನ್ ಬಾನು, ವೆಂಕಟೇಶ್, ಹೊನ್ನಾಪುರ ಜಯಮ್ಮ ಮಾರಣ್ಣ, ಮುಖಂಡರಾದ ಶ್ರೀನಿವಾಸ್ ಮೂರ್ತಿ, ವೇಣುಗೋಪಾಲ್,ಅಜೀಂ ಉಲ್ಲಾ, ರಾಜಣ್ಣ ಇದ್ದರು.

# ಅರಕಲಗೂಡು ಕ್ರೀಡಾಂಗಣದ ನವೀಕರಣಕ್ಕೆ 25 ಲಕ್ಷ ನೆರವು

**ಹಾಸನ (ಅರಕಲಗೂಡು):** ಯಾವುದೇ ಊರಲ್ಲಿ ಆಸ್ಪತ್ರೆ–ಮೆಡಿಕಲ್ ಶಾಪ್ ಗಳಿಗಿಂತ ಕ್ರೀಡಾಂಗಣಗಳು–ಗರಡಿ ಮನೆಗಳು ಹೆಚ್ಚಾಗಿದ್ದರೆ ಅದು ಆರೋಗ್ಯಕರ ಊರಿನ ಲಕ್ಷಣ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ವಿವರಿಸಿದರು.

ಶ್ರೀ ರಾಘವೇಂದ್ರ ಯೂತ್ ಆಂಡ್ ಸ್ಪೋರ್ಟ್ಸ್ ಕ್ಲಬ್ ಆಯೋಜಿಸಿದ್ದ "ಸಿದ್ದರಾಮಯ್ಯ ಕಪ್" ಸೀಸನ್ –3 ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

ಯಾವುದೇ ಒಂದು ಊರು ಎಷ್ಟು ಆರೋಗ್ಯಕರವಾಗಿದೆ, ಚೈತನ್ಯಶಾಲಿಯಾಗಿದೆ ಅನ್ನೋದು ಆ ಊರಿನ ಮೈದಾನಗಳು, ಕ್ರೀಡಾಂಗಣಗಳು, ಗರಡಿ ಮನೆಗಳು, ಜಿಮ್ ಗಳು, ಪಾರ್ಕ್ ಗಳು ಎಷ್ಟು ತುಂಬಿರುತ್ತವೆ ಅನ್ನೋದನ್ನು ನೋಡಿದರೆ ಗೊತ್ತಾಗತ್ತೆ ಎಂದರು.



15 ವರ್ಷಗಳ ಹಿಂದೆ ತುಂಬು ಉತ್ಸಾಹದಿಂದ ಸಣ್ಣದಾಗಿ ಶುರುವಾದ ಸ್ಪೋರ್ಟ್ಸ್ ಕ್ಲಬ್ ಈಗ ದೊಡ್ಡಮಟ್ಟಕ್ಕೆ ವಿಸ್ತರಿಸಿದೆ. ಅರಕಲಗೂಡು ಕ್ರಿಕೆಟ್ ಪಂದ್ಯಾವಳಿ ಹಾಸನ ಜಿಲ್ಲೆಯ ಹೊರಗೂ ಸದ್ದು ಮಾಡುತ್ತಿದೆ. ಇದಕ್ಕೆ ಯುವ ಮುಖಂಡ ಅರಕಲಗೋಡು ಪ್ರಸನ್ನನ ಮತ್ತು ತಂಡದ ಶ್ರಮ ಕಾರಣ. ಪ್ರಸನ್ನ ಹೆಸರಿಗೆ ಮಾತ್ರ "ಪ್ರಸನ್ನ". ಆದ್ರೆ ಈತ ಪ್ರಸನ್ನನಾಗಿ ಇರೋದೇ ಕಡಿಮೆ. ಹಠ ಹಿಡಿದ್ರೆ ಮುಗೀತು. ಪರಿಣಾಮ ಯೋಚನೆ ಮಾಡದೆ ಕೆಲಸ ಆಗುವವರೆಗೂ ಬೆನ್ನು ಬೀಳ್ತಾರೆ. ಇದರ ಪರಿಣಾಮದಿಂದ ಕ್ರಾಂತಿಕಾರಿ ಸಂಗೊಳ್ಳಿ ರಾಯಣ್ಣ ಕ್ರೀಡಾಂಗಣದ ನವೀಕರಣಕ್ಕಾಗಿ 25 ಲಕ್ಷ ರೂಪಾಯಿ ಅನುದಾನ ಒದಗಿ ಬರುವ ಹಂತದಲ್ಲಿದೆ. ಮುಂದಿನ ವರ್ಷವೂ ಇನ್ನೂ 25 ಲಕ್ಷ ಬೇಕು ಅನುದಾನ ಕೊಡುವಂತೆ ಪ್ರಸನ್ನ ಅವರ ಕ್ರಿಯಾಶೀಲ ತಂಡ ಈಗಲೇ ಅಪ್ಲಿಕೇಷನ್ ಹಾಕಿದ್ದಾಗಿದೆ ಎಂದು ಮೆಚ್ಚುಗೆ ಸೂಚಿಸಿದರು.

ಇಂಥಾ ಕ್ರೀಡಾಕೂಟಗಳು ಹೆಚ್ಚೆಚ್ಚು ನಡೆಯಲಿ, ಕ್ರೀಡಾ ಮನೋಭಾವ ಹೆಚ್ಚಾಗಲಿ ಎಂದು ಕೆ.ವಿ.ಪ್ರಭಾಕರ್ ಅವರು ಹಾರೈಸಿದರು.

# ಸಹಕಾರ ಜಾಗೃತಿ ಸಮಾವೇಶ ಸಚಿವ ಕೆ.ಎನ್.ರಾಜಣ್ಣ ಭಾಗಿ

**ಕುಕನೂರು:** ಪಟ್ಟಣದ ಎಪಿಎಂಸಿ ಆವರಣದಲ್ಲಿ ಶನಿವಾರ ನಡೆಯುವ ಸಹಕಾರ ಜಾಗೃತಿ ಸಮಾವೇಶವನ್ನು ಸಹಕಾರಿ ಮಂತ್ರಿ ಕೆ ಎನ್ ರಾಜಣ್ಣ ಉದ್ಘಾಟನೆ ಮಾಡಲಿದ್ದಾರೆ.

ಇವರ ಜೊತೆಗೆ ಕಾನೂನು ಮತ್ತು ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ, ಶಾಸಕ ಜಿ.ಟಿ.ದೇವೇಗೌಡ ಮತ್ತು ಆರ್ಥಿಕ ಸಲಹೆಗಾರ ಯಲಬುರ್ಗಾ ಕ್ಷೇತ್ರದ ಶಾಸಕ ಬಸವರಾಜ್ ರಾಯರಡ್ಡಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಚಂದ್ರಶೇಖರಯ್ಯ ಹಿರೇಮಠ ತಿಳಿಸಿದ್ದಾರೆ.

ಸಮಾವೇಶದಲ್ಲಿ ಯಲಬುರ್ಗಾ ಕುಕನೂರು ಅವಳಿ ತಾಲೂಕಿನ 34 ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರು , ಆರ್ ಡಿ ಸಿ ಸಿ ಬ್ಯಾಂಕ್ ನಿರ್ದೇಶಕರು, ಸೇರಿದಂತೆ ಹಾಲು ಒಕ್ಕೂಟ ಮತ್ತು ಎಣ್ಣೆ ಉತ್ಪಾದನೆ ಮಂಡಳಿ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದು ತಾಲೂಕಿನ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶಕ್ಕೆ ಬರಲು ಚಂದ್ರಶೇಖರಯ್ಯ ಮುಕ್ತ ಆಹ್ವಾನ ನೀಡಿದ್ದಾರೆ. ಸಹಕಾರ ಕ್ಷೇತ್ರದಿಂದ ವಿಮುಖರಾಗಿರುವ ರೈತರನ್ನು ಮತ್ತೆ ಸೆಳೆಯಲು ಮತ್ತು ಕ್ಷೇತ್ರದಲ್ಲಿ ಸಹಕಾರಿ ಸಂಘಗಳನ್ನು ಬಳಪಡಿಸಿ ರೈತರಿಗೆ ಸಿಗುವ ಸವಲತ್ತುಗಳನ್ನು ತಿಳಿಸಿ ಜಾಗೃತಿ ಮೂಡಿಸಲು ಸಮಾವೇಶ ಮಾಡಲಾಗುತ್ತಿದೆ ಎಂದು ಚಂದ್ರಶೇಖರಯ್ಯ ಹಿರೇಮಠ ತಿಳಿಸಿದ್ದಾರೆ. ಕುಕನೂರು ಪಟ್ಟಣದ ಕೃಷಿ ಪತ್ತಿನ ಸಂಘದ ಚುನಾವಣೆ ಫಲಿತಾಂಶ ಘೋಷಣೆ ಬಾಕಿ ಇದ್ದು ಆ ಸಂಘದ ಸುಮಾರು 1700 ಸದಸ್ಯರನ್ನು ಕತ್ತಲಲ್ಲಿ ಇಟ್ಟಂತಾಗಿದ್ದು ಸಮಾವೇಶದ ಔಚಿತ್ಯವನ್ನು ಕೆಲವರು ಪ್ರಶ್ನಿಸಿದ್ದಾರೆ.

# ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸಭೆ

**ಬೆಂಗಳೂರು:** ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಅಧ್ಯಕ್ಷರಾದ ಶ್ರೀ ಜಿ.ಕೃಷ್ಣಪ್ಪ ರವರು ಬಿಬಿಎಂಪಿ ವ್ಯಾಪ್ತಿಯ 28 ವಿಧಾನ ಸಭಾ ಕ್ಷೇತ್ರಗಳಿಗೆ ಪರಿಶೀಲನಾ ಭೇಟಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಇದುವರೆಗೂ 10 ವಿಧಾನ ಸಭಾ ಕ್ಷೇತ್ರಗಳ ಕಛೇರಿ ಪರಿವೀಕ್ಷಣೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ. ಅದರಂತೆ ಗುರುವಾರ ದಾಸರಹಳ್ಳಿ ಹಾಗೂ ರಾಜರಾಜೇಶ್ವರಿನಗರ ವಿಧಾನ ಸಭಾ ಕ್ಷೇತ್ರದ ಕಛೇರಿಗಳಿಗೆ ಪರಿವೀಕ್ಷಣೆ ಕಾರ್ಯಕ್ರಮವನ್ನು ಕೈಗೊಂಡು, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಮಾತನಾಡಿ, ಪ್ರತಿ ವಿಧಾನ ಸಭಾ ಕ್ಷೇತ್ರದ ವಾರ್ಡ್ ವಾರು ಗ್ಯಾರಂಟಿ ಮನೆ–ಮನೆ ಭೇಟಿ ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವಂತೆ ಸಮಿತಿಯ ಸದಸ್ಯರುಗಳಿಗೆ ತಿಳಿಸಿದರು.


# ಪಶು ಇಲಾಖೆಯ ನಿರ್ಲಕ್ಷ್ಯದಿಂದಾಗಿ ಮೇಕೆಗಳ ಸಾವು




ಮಾಲೂರು: ತಾಲ್ಲೂಕಿನ ಲಕ್ಕೂರು ಗ್ರಾಮದ ಎಲ್ ಆರ್ ವೆಂಕಟೇಶ್ ಅವರಿಗೆ ಸೇರಿದ ಮೇಕೆಗಳು ಪಶು ಇಲಾಖೆಯ ನಿರ್ಲಕ್ಷ್ಯದಿಂದ 2 ಮೇಕೆಗಳು ಮೃತ ಪಟ್ಟಿರುವುದಾಗಿ ಕದಸಂಸ ಅಂಬೇಡ್ಕರ್ ವಾದ ಸಂಘಟಿಕರು ದೂರಿದ್ದಾರೆ.

ಜಿಲ್ಲಾ ಸಂಘಟನಾ ಸಂಚಾಲಕ ಲಕ್ಕೂರು ವೆಂಕಟೇಶ್ ಮಾತನಾಡಿ, ತಾಲ್ಲೂಕಿನ ಲಕ್ಕೂರು ಗ್ರಾಮದಲ್ಲಿ ಪಶು ಚಿಕಿತ್ಸಾಲಯ ಇದ್ದು ಸಮಯಕ್ಕೆ ಸರಿಯಾಗಿ ವೈದ್ಯರು ಇರುವುದಿಲ್ಲ ವೈದ್ಯರ ಕೊರತೆ ಇರುವುದರಿಂದ ಪ್ರತಿನಿತ್ಯ ಈ ಭಾಗದಲ್ಲಿ ಕುರಿ ಮೇಕೆ ಇನ್ನಿತರೆ ಸಾಕು ಪ್ರಾಣಿಗಳು ದಿನನಿತ್ಯ ಮೃತಪಡುತ್ತಲೇರುತ್ತವೆ. ಆದ್ದರಿಂದ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತುಕೊಂಡು ಇನ್ನಾದರೂ ಪಶು, ಕೋಳಿಗಳು, ಮೇಕೆ,ಕುರಿ, ಇನ್ನಿತರೆ ಪ್ರಾಣಿಗಳು ಮೃತಪಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಾಗಿ ಮೂಕ ಪ್ರಾಣಿಗಳು ಸತ್ತು ಹೋದರೆ ಅದಕ್ಕೆ ಸರ್ಕಾರದಿಂದ ಬರುವಂತಹ ಅನುದಾನವನ್ನು ಶೀಘ್ರವಾಗಿ ಫಲಾನುಭವಿಗಳಿಗೆ ತಲುಪಿಸಬೇಕು. ನಿರ್ಲಕ್ಷ್ಯ ವಹಿಸಿರುವ ಪಶು ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಸಂಘಟನೆ ಉಗ್ರವಾದ ಹೋರಾಟ ಹಮ್ಮಿಕೊಳ್ಳಲಾಗುತ್ತದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಸ ಂ ಘ ಟ ನ ೆ ವ ತಿ ಯಿ ಂ ದ ಒತ್ತಾಯಿಸಿ ಎಚ್ಚರಿಕೆನೀಡಿದರು.


ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಎಟ್ಟ ಕೋಡಿ ಎ ಕೆ ವೆಂಕಟೇಶ್ ,ಅಗ್ರಹಾರ ಬಾಬು, ಮಡಿವಾಳ ಶ್ರೀನಿವಾಸ್, ತಿಮ್ಮರಾಜು, ರಮೇಶ್, ಪೂಜಪ್ಪ, ಪುರ ವೆಂಕಟೇಶ್, ಪುರ ನಾರಾಯಣಪ್ಪ ಇನ್ನಿತರರು ಇದ್ದರು



ಮೈಸೂರಿನಲ್ಲಿ ಗುರುವಾರ ಸಂಜೆ ನಡೆದ ಶ್ರೀರಂಗಪಟ್ಟಣ ಶಾಸಕ ರಮೇಶ್ ಬಂಡಿಸಿದ್ದೇಗೌಡ ಅವರ ಮಗಳು ರೋಹನ ಮತ್ತು ಸಚಿನ್ ಅವರ ವಿವಾಹ ಆರತಕ್ಷತೆಯಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಪಾಲ್ಗೊಂಡು ವಧು–ವರನಿಗೆ ಶುಭ ಹಾರೈಸಿದರು.

# ಕಾಂಗ್ರೆಸ್ ಕುರಿತ ದೇವೇಗೌಡರ ಹೇಳಿಕೆ ಸರಿಯಾಗಿದೆ: ಛಲವಾದಿ ನಾರಾಯಣಸ್ವಾಮಿ

ಬೆಂಗಳೂರು: ಕಾಂಗ್ರೆಸ್ ಪಕ್ಷದ ರಾಜ್ಯ ಸರಕಾರದ ವಿಚಾರದಲ್ಲಿ ಮಾಜಿ ಪ್ರಧಾನಮಂತ್ರಿಗಳಾದ ಮಾನ್ಯ ಎಚ್.ಡಿ.ದೇವೇಗೌಡರು ಪ್ರಸ್ತಾಪ ಮಾಡಿದ್ದು ಸರಿ ಇದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದ್ದಾರೆ.



ಮಾಧ್ಯಮಗಳ ಜೊತೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ನೀಡಿದರು. ಕರ್ನಾಟಕದಲ್ಲಿ ದಲಿತರ ದುರ್ಬಳಕೆ, ಅಧಿಕಾರಿಗಳ ಆತ್ಮಹತ್ಯೆ, ಭ್ರಷ್ಟಾಚಾರ ಮಿತಿ ಮೀರಿರುವುದು, 136 ಶಾಸಕರಿದ್ದರೂ ಅಭದ್ರತೆಯ ವಾತಾವರಣ ಸಂಬಂಧಿತ ದೇವೇಗೌಡರ ಹೇಳಿಕೆಗೆ ಮಲ್ಲಿಕಾರ್ಜುನ ಖರ್ಗೆಯವರು ಆಕ್ಷೇಪ ಎತ್ತಲು ಯಾವುದೇ ಕಾರಣ ಇಲ್ಲ; ದಲಿತರಿಗೆ ಅನ್ಯಾಯ ಮಾಡಿದ ಕಾಂಗ್ರೆಸ್ಸಿನ ವಿರುದ್ಧವಾಗಿ ಮಾನ್ಯ ಖರ್ಗೆಜೀ ಅವರೇ ಮಾತನಾಡಬೇಕಿತ್ತು ಎಂದು ಅಭಿಪ್ರಾಯಪಟ್ಟರು.

ದಲಿತರ ಪರವಾಗಿ ಮಾತನಾಡಲು ಅವರಿಗೆ ಬಾಯಿಯೇ ಬರುತ್ತಿಲ್ಲ; ಆದರೆ, ದೇವೇಗೌಡರು ದಲಿತ ಸಮುದಾಯಗಳ ಬಗ್ಗೆ ಆಗಿರುವ ಅನ್ಯಾಯ ಸರಿಪಡಿಸಲು ರಾಜ್ಯಸಭೆಯಲ್ಲಿ ಸಮಯೋಚಿತವಾಗಿ ಮಾತನಾಡಿದ್ದಾರೆ ಎಂದು ತಿಳಿಸಿದರು.


ಇದೊಂದು ಭಂಡತನದ ಸರಕಾರ. ಮಾನ್ಯ ಮುಖ್ಯಮಂತ್ರಿಗಳು ಯಾವುದಕ್ಕೂ ಸಮರ್ಪಕ ಉತ್ತರ ಕೊಡುವುದಿಲ್ಲ ಎಂದು ಟೀಕಿಸಿದರು.

ವಾಲ್ಮೀಕಿ ನಿಗಮದಲ್ಲಿ 187 ಕೋಟಿ ನುಂಗಲಾಯಿತು. ಪರಿಶಿಷ್ಟ ಜಾತಿ– ಪರಿಶಿಷ್ಟ ವರ್ಗಗಳಿಗೆ ಇಟ್ಟಿದ್ದ ಹಣ 25 ಸಾವಿರ ಕೋಟಿಯನ್ನು ಇದೇ ಕಾಂಗ್ರೆಸ್ ಸರಕಾರ ನುಂಗಿದೆ. ಖರ್ಗೆಯವರು ಇದರ ಬಗ್ಗೆ ಯಾಕೆ ಮಾತನಾಡಿಲ್ಲ ಎಂದು ಪ್ರಶ್ನಿಸಿದರು. ಇವತ್ತಿನ ವರೆಗೆ ಚಕಾರ ಎತ್ತಿಲ್ಲ. ನೀವು ಯಾರ ಪರ ಇದ್ದೀರಿ ಎಂದು ಕೇಳಿದರು.

ಅದು 187 ಕೋಟಿ ಅಲ್ಲ; ಬರೀ 87 ಕೋಟಿ ಎಂದೇ ಮುಖ್ಯಮಂತ್ರಿಗಳು ಸದನದಲ್ಲಿ ಒಪ್ಪಿಕೊಂಡಿದ್ದಾರೆ. ಅಂದ ಮೇಲೆ ಸತ್ಯವನ್ನು ಒಪ್ಪಿಕೊಂಡರಲ್ಲವೇ ಈ ಸತ್ಯ ಒಪ್ಪಿಕೊಳ್ಳಲು ಖರ್ಗೆಜೀ ಅವರಿಗೆ ಏನಾಗಿದೆ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಆತ್ಮಹತ್ಯೆ ಪತ್ರ ಬರೆದಿಟ್ಟು ಚಂದ್ರಶೇಖರ್ ಅವರು ತೀರಿಕೊಂಡರು; ಇನ್ನೂ ಅನೇಕರು ಪ್ರಾಣತ್ಯಾಗ ಮಾಡಿದ್ದಾರೆ. ಎಸ್‌ಐ ಪರಶುರಾಂ ಅವರ ಕುಟುಂಬಕ್ಕೆ 50 ಲಕ್ಷ ಪರಿಹಾರ, ಮನೆಯವರಿಗೆ ಕೆಲಸ ಕೊಡುವುದಾಗಿ ಗೃಹಸಚಿವರೇ ತಿಳಿಸಿದ್ದರು. ಇಲ್ಲಿನವರೆಗೆ ಕೂಡ ಒಂದೇ ಒಂದು ನಯಾಪೈಸೆ ಕೊಟ್ಟಿಲ್ಲ ಎಂದು ಆಕ್ಷೇಪಿಸಿದರು.


# ಒತ್ತುವರಿ ತೆರವು ಕಾರ್ಯ ಪ್ರಾರಂಭ

**ಮುಳಬಾಗಿಲು:** ಹಸಿರು ಪ್ರಾಧಿಕಾರದ ಆದೇಶದಂತೆ ಕೋಲಾರ ಜಿಲ್ಲಾಧಿಕಾರಿಗಳ ಸೂಚನೆಯಂತೆ ತಾಲ್ಲೂಕು ಸರ್ಕಾರಿ ಎಲ್ಲಾ ಕೆರೆಗಳನ್ನು ಫೆ.7 ಶುಕ್ರವಾರದಿಂದ ಒತ್ತುವರಿ ತೆರವುಗೊಳಿಸುವ ಕಾರ್ಯ ಪ್ರಾರಂಭವಾಗುತ್ತದೆ ಎಂದು ತಹಸಿಲ್ದಾರ್ ವಿ ಗೀತಾ ತಿಳಿಸಿದ್ದಾರೆ.



ಸಾರ್ವಜನಿಕರ ಆಸ್ತಿಯನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯವಾಗಿದ್ದು, ನಾನು ಬಂದ ಮೇಲೆ ಹೆಚ್ಚು ಒತ್ತುವರಿ ತೆರವುಗೊಳಿಸಲು ಅರ್ಜಿಗಳು ಸ್ವೀಕೃತವಾಗಿವೆ. ಆದ್ದರಿಂದ ತಾಲ್ಲೂಕಿನಾದ್ಯಂತ ಮೊದಲು ಕೆರೆಗಳು ಒತ್ತುವರಿ ತೆರವು ಮಾಡುವ ಕಾರ್ಯಾಚರಣೆಯನ್ನು ಮೊದಲು ದೇವರಾಯಸಮುದ್ರ, ಗ್ರಾಮಪಂಚಾಯಿತಿ ಕೆರೆಗಳಿಂದ ಪ್ರಾರಂಭ ಮಾಡುತ್ತಿದ್ದೇವೆ. ಎಲ್ಲಾ ಸಾರ್ವಜನಿಕರು, ರೈತರು, ಜನಪ್ರತಿನಿಧಿಗಳು ಸಹಕಾರ ನೀಡಬೇಕೆಂದು ಅವರು ಪತ್ರಿಕಾ ಹೇಳಿಕೆಯಲ್ಲಿ ಕೋರಿದ್ದಾರೆ.

# ಕೋಟೆಬೆಟ್ಟ ಶ್ರೀವೆಂಕಟರಮಣ ಸ್ವಾಮಿಯ ಬ್ರಹ್ಮರಥೋತ್ಸವ



**ನಾಗಮಂಗಲ:** ಸಾಲಾದ್ರಿ ಕ್ಷೇತ್ರ ಶ್ರೀ ವೆಂಕಟರಮಣ ಸ್ವಾಮಿಯ ಬ್ರಹ್ಮರಥೋತ್ಸವ 10ರಿಂದ 15ರವರೆಗೆ ಜಾತ್ರೆ ನಡೆಯಲಿದೆ.

ನಾಗಮಂಗಲ ತಾಲೂಕಿನ ದೆವ್ವಲಾಪುರ ಹೋಬಳಿ ಕೋಟೆಬೆಟ್ಟದಲ್ಲಿರುವ ಶ್ರೀ ವೆಂಕಟರಮಣ ಸ್ವಾಮಿಯ ಬ್ರಹ್ಮ ರಥೋತ್ಸವ ಜಾತ್ರೆ ಮತ್ತು ಬ್ರಹ್ಮರಥೋತ್ಸವ ಫೆಬ್ರವರಿ ತಿಂಗಳ 10ರಿಂದ 15ರವರೆಗೆ ಶ್ರೀ ಕ್ಷೇತ್ರದಲ್ಲಿ ವಿವಿಧ ಪೂಜಾ ಕಾರ್ಯಗಳು ಸ್ವಾಮಿಯ ವಿಶೇಷ ಉತ್ಸವಗಳು ನಡೆಯಲಿದ್ದು ಭಕ್ತಾದಿಗಳು ಶ್ರೀ ವೆಂಕಟರಮಣ ಸ್ವಾಮಿ ದರ್ಶನಕ್ಕೆ ಪಾತ್ರರಾಗುವಂತೆ ತಿಳಿಸಿದ್ದಾರೆ.

# ರಷ್ಯಾದ ಸಶಸ್ತ್ರ ಪಡೆಗಳಲ್ಲಿ 18 ಭಾರತೀಯರು ಅದರಲ್ಲಿ 16 ಮಂದಿ ನಾಪತ್ತೆ: ಸಂಸತ್‌ಗೆ ಮಾಹಿತಿ



**ನವದೆಹಲಿ:** 18 ಭಾರತೀಯರು ರಷ್ಯಾದ ಸಶಸ್ತ್ರ ಪಡೆಗಳಲ್ಲಿ ಉಳಿದುಕೊಂಡಿದ್ದು, ಅವರಲ್ಲಿ 16 ಮಂದಿ ನಾಪತ್ತೆಯಾಗಿದ್ದಾರೆದಂದು ರಷ್ಯಾ ತಿಳಿಸಿದೆ ಎಂದು ಕೇಂದ್ರ ಸರ್ಕಾರ ಗುರುವಾರ ಸಂಸತ್ತಿಗೆ ಮಾಹಿತಿ ನೀಡಿದೆ.

ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್? ಸಿಂಗ್? ರಾಜ್ಯಸಭೆಯಲ್ಲಿ ಕೇಳಿದ ಪ್ರಶ್ನೆಗೆ ಲಿಖಿತ ಪ್ರತಿಕ್ರಿಯೆಯಲ್ಲಿ ಮಾಹಿತಿ ನೀಡಿದ್ದಾರೆ. 18 ಭಾರತೀಯ ಸೈನಿಕರಲ್ಲಿ ಒಂಬತ್ತು ಜನ ಉತ್ತರ ಪ್ರದೇಶದವರು, ತಲಾ ಇಬ್ಬರು ಪಂಜಾಬ್ ಮತ್ತು ಹರಿಯಾಣದವರು ಮತ್ತು ತಲಾ ಒಬ್ಬರು ಚಂಡೀಗಢ, ಮಹಾರಾಷ್ಟ್ರ, ಕೇರಳ ಮತ್ತು ಬಿಹಾರ, ಜಮ್ಮು ಮತ್ತು ಕಾಶ್ಮೀರದಿಂದ ಬಂದವರು ಎಂದು ತಿಳಿಸಿದ್ದಾರೆ.

ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಿಂಗ್??, ರಷ್ಯಾದ ಸಶಸ್ತ್ರ ಪಡೆಗಳಲ್ಲಿ 12 ಭಾರತೀಯರು, ಪ್ರಸ್ತುತ ನಡೆಯುತ್ತಿರುವ ಸಂಘರ್ಷದಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ ಎಂದು ವರದಿಯಾಗಿದೆ ಎಂದು ಹೇಳಿದರು.


ನಮ್ಮ ರಾಯಭಾರಿ ಕಚೇರಿಗಳು ಮತ್ತು ಪೋಸ್ಟ್‌ಗಳು ವಿದೇಶಗಳಲ್ಲಿರುವ ಎಲ್ಲಾ ಭಾರತೀಯ ಪ್ರಜೆಗಳ ಸುರಕ್ಷತೆ, ಭದ್ರತೆ ಮತ್ತು ಯೋಗಕ್ಷೇಮಕ್ಕೆ ಹೆಚ್ಚಿನ ಆದ್ಯತೆ ನೀಡುತ್ತವೆ. ಮತ್ತು ಸಹಾಯಕ್ಕಾಗಿ ಯಾವುದೇ ಕರೆ ಬಂದಾಗ ಸೂಕ್ತ ಕ್ರಮವನ್ನು ತೆಗೆದುಕೊಳ್ಳುತ್ತವೆ ಎಂಬ ಭರವಸೆ ನೀಡಿದರು.

ಈ ವೇಳೆ, ರಷ್ಯಾದಲ್ಲಿ ಇನ್ನೂ ಸಿಕ್ಕಿ ಹಾಕಿಕೊಂಡಿರುವ ಮತ್ತು ಅವರ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಭಾರತೀಯ ಯುವಕರ ಸಂಖ್ಯೆ ಮತ್ತು ಅವರನ್ನು ಭಾರತಕ್ಕೆ ಕರೆತರಲು ಒಇಂ ಮತ್ತು ರಷ್ಯಾದ ಭಾರತೀಯ ರಾಯಭಾರ ಕಚೇರಿ ಕೈಗೊಂಡ ಕ್ರಮಗಳ ವಿವರಗಳಿಗಾಗಿ ಸರ್ಕಾರವನ್ನು ಕೇಳಲಾಯಿತು.

ರಷ್ಯಾದ ಅಧಿಕಾರಿಗಳಿಗೆ ವಿನಂತಿ: ಲಭ್ಯವಿರುವ ಮಾಹಿತಿಯ ಪ್ರಕಾರ, 18 ಭಾರತೀಯ ಪ್ರಜೆಗಳು ರಷ್ಯಾದ ಸಶಸ್ತ್ರ ಪಡೆಗಳಲ್ಲಿ ಉಳಿದಿದ್ದಾರೆ. ಅವರಲ್ಲಿ 16 ವ್ಯಕ್ತಿಗಳು ಕಾಣೆಯಾಗಿದ್ದಾರೆ ಎಂದು ವರದಿಯಾಗಿದೆ. ರಷ್ಯಾದ ಸಶಸ್ತ್ರ ಪಡೆಗಳಲ್ಲಿ ಉಳಿದಿರುವ ಭಾರತೀಯರ ಬಗ್ಗೆ ಮಾಹಿತಿ ಒದಗಿಸಲು ಮತ್ತು ಅವರ ಸುರಕ್ಷತೆ, ಯೋಗಕ್ಷೇಮ ಮತ್ತು ಆರಂಭಿಕ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳಲು ರಷ್ಯಾದ ಅಧಿಕಾರಿಗಳಿಗೆ ವಿನಂತಿಸಲಾಗಿದೆ ಎಂದು ಕೀರ್ತಿ ವರ್ಧನ್ ಸಿಂಗ್ ತಿಳಿಸಿದರು.

ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮತ್ತು ಮಾಸ್ಕೋದಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಈ ವಿಷಯಗಳ ಕುರಿತು ವಿವಿಧ ಹಂತಗಳಲ್ಲಿ ಸಂಬಂಧಿತ ರಷ್ಯಾದ ಅಧಿಕಾರಿಗಳೊಂದಿಗೆ ತೊಡಗಿಸಿಕೊಂಡಿದೆ. ರಷ್ಯಾದ ಸಶಸ್ತ್ರ ಪಡೆಗಳಲ್ಲಿ ತಮ್ಮ ಸೇವೆಯನ್ನು ಸ್ಥಗಿತಗೊಳಿಸಿದ ನಂತರ, ರಷ್ಯಾದಲ್ಲಿರುವ ಭಾರತೀಯ ರಾಯಭಾರಿ ಕಚೇರಿಗಳು ಈ ಹಿಂದೆ ಭಾರತೀಯ ಪ್ರಜೆಗಳಿಗೆ ಭಾರತಕ್ಕೆ ಮರಳಲು ಪ್ರಯಾಣ ದಾಖಲೆಗಳನ್ನು ಸುಗಮಗೊಳಿಸುವುದು ಮತ್ತು ಅಗತ್ಯ ಇರುವಲ್ಲೆಲ್ಲಾ ವಿಮಾನ ಟಿಕೆಟ್‌ಗಳನ್ನು ಒದಗಿಸುವುದು ಸೇರಿದಂತೆ ಎಲ್ಲಾ ಅಗತ್ಯಗಳನ್ನು ನೀಡಿದೆ ಎಂದು ಕೇಂದ್ರ ಸಚಿವರು ಸಮರ್ಥಿಸಿಕೊಂಡರು. ರಷ್ಯಾದ ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸುವುದನ್ನು ನಿಲ್ಲಿಸಿರುವ 97 ಭಾರತೀಯ ಪ್ರಜೆಗಳನ್ನು ಯಾವ ರಾಜ್ಯದಿಂದ ಬಂದವರು ಎಂಬುದರ ವಿವರಗಳನ್ನು ಸಹ ಅವರು ಹಂಚಿಕೊಂಡರು.

# ಕೃಷ್ಣಾ ನದಿಗೆ ಬೃಹತ್ ಬಾಹುಬಲಿ ಸೇತುವೆ



**ಆಂಧ್ರಪ್ರದೇಶ:** ಅಮರಾವತಿಯನ್ನು ರಾಷ್ಟ್ರೀಯ ಹೆದ್ದಾರಿಗಳೊಂದಿಗೆ ಸಂಪರ್ಕಿಸುವ ಕೃಷ್ಣಾ ನದಿಗೆ ಬೃಹತ್ ಸೇತುವೆಯೊಂದನ್ನು ನಿರ್ಮಾಣ ಮಾಡಲಾಗುತ್ತಿದ್ದು, ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ಇದರಿಂದ ಬೇಜವಾಡಕ್ಕೆ ಕಾಲಿಡದೆಯೇ ಅಮರಾವತಿ ತಲುಪಲು ಈ ಹೆದ್ದಾರಿ ಅನುಕೂಲವಾಗಲಿದ್ದು, ಈ ಮಾರ್ಗ ಶೀಘ್ರದಲ್ಲೇ ಜನ ಸೇವೆಗೆ ಲಭ್ಯವಾಗಲಿದೆ. ಬಾಹುಬಲಿ ಬ್ರಿಡ್ಜ್? ರಾಜಧಾನಿಯ ಅಭಿವೃದ್ಧಿಗೂ ಉತ್ತೇಜನ ನೀಡಲಿದೆ. ಕೃಷ್ಣಾ ನದಿಗೆ ನಿರ್ಮಿಸಲಾಗುತ್ತಿರುವ ಈ ಅತಿ ದೊಡ್ಡ ಸೇತುವೆಯ ನೋಟ ಆಕರ್ಷಕವಾಗಿದೆ. ಕಣ್ಣು ಹಾಯಿಸಿದಷ್ಟೂ ನೀಲ ವರ್ಣದ ಜಲಧಾರೆ. ಕೃಷ್ಣೆಯತ್ತ ಸಾಗುವ ಬೆಟ್ಟಗಳು, ಹಸಿರು ಗದ್ದೆಗಳು ಒಂದೆಡೆಯಾದರೆ, ಇನ್ನೊಂದು ಕಡೆ ನವ ಆಂಧ್ರದ ರಾಜಧಾನಿ ಅಮರಾವತಿ. ಮಧ್ಯದಲ್ಲಿರುವ ಈ ಬಾಹುಬಲಿ ಸೇತುವೆ ಈಗ ಎಲ್ಲ ಆಕರ್ಷಣೆ ಆಗಿದೆ.

ವಿಜಯವಾಡ ಪಶ್ಚಿಮ ಬೈಪಾಸ್ ನಿರ್ಮಾಣದ ಭಾಗವಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ 1,546 ಕೋಟಿ ವೆಚ್ಚದಲ್ಲಿ ಗೊಲ್ಲಪುಡಿಯಿಂದ ಕಾಜಾ ಸುಂಕದಕಟ್ಟೆವರೆಗೆ 17.8 ಕಿಮೀ ರಸ್ತೆಯನ್ನು ನಿರ್ಮಿಸುತ್ತಿದೆ. ಈ ಮಾರ್ಗದಲ್ಲಿ ಕೃಷ್ಣಾ ನದಿಯನ್ನು ದಾಟಲು ಬೃಹತ್ ಬಾಹುಬಲಿ ಸೇತುವೆ ನಿರ್ಮಾಣ ಕಾರ್ಯ ನಡೆಯುತ್ತಿದೆ. ಗೊಲ್ಲಪುಡಿಯಲ್ಲಿ ಪ್ರಾರಂಭವಾಗುವ ಈ ಸೇತುವೆಯು ಅಮರಾವತಿಯನ್ನು ದೇಶದ ಉಳಿದ ಹೆದ್ದಾರಿಗಳೊಂದಿಗೆ ಸಂಪರ್ಕಿಸುತ್ತದೆ.

ಪಶ್ಚಿಮ ಬೈಪಾಸ್‌ನಲ್ಲಿ ಪ್ಯಾಕೇಜ್–4 ಅನ್ನು ನಿರ್ಧರಿಸಲಾಗಿದ್ದು, ನಿರ್ಮಾಣದ ಜವಾಬ್ದಾರಿಯನ್ನು ನವಯುಗ ಮತ್ತು ಅದಾನಿ ಗುಂಪುಗಳಿಗೆ ವಹಿಸಲಾಗಿದೆ. 2021ರಲ್ಲಿ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದ್ದು, ಅತ್ಯಂತ ವೇಗವಾಗಿ ಕಾಮಗಾರಿ ನಡೆಸುತ್ತಿವೆ. ಗೊಲ್ಲಪುಡಿ ಬಳಿಯಿಂದ ವೆಂಕಟಪಾಲೆಂವರೆಗಿನ 3.1 ಕಿ.ಮೀ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ಸೇತುವೆಯನ್ನು ಇತ್ತೀಚೆಗೆ ಚಿನ್ನಾವುಟುಪಲ್ಲಿಯಿಂದ ಬೈಪಾಸ್‌ಗೆ ಸಂಪರ್ಕಿಸಲಾಗಿದೆ. ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುತ್ತಿದೆ.

53 ಬೃಹತ್ ಕಂಬಗಳಿಂದ ನಿರ್ಮಾಣ: ಈ ಬಾಹುಬಲಿ ಸೇತುವೆ ಕೃಷ್ಣಾ ಮತ್ತು ಗುಂಟೂರು ಸಂಯೋಜಿತ ಜಿಲ್ಲೆಗಳನ್ನು ಸಂಪರ್ಕಿಸುವ ಅತಿದೊಡ್ಡ ಸೇತುವೆ ಎಂದು ಗುರುತಿಸಲ್ಪಟ್ಟಿದೆ. ಮೇಲಿಂದ ಮೇಲೆ ಬರುತ್ತಿರುವ ಕೃಷ್ಣೆಯನ್ನು ತಡೆದುಕೊಳ್ಳಲು 53 ಬೃಹತ್ ಕಂಬಗಳೊಂದಿಗೆ ಸೇತುವೆಯನ್ನು 2 ಸಾಲುಗಳಲ್ಲಿ ನಿರ್ಮಾಣ ಮಾಡಲಾಗಿದೆ. ಭಾರವಾದ ಲಾಂಚರ್‌ಗಳ ಸಹಾಯದಿಂದ ಸೇತುವೆಯ ಕಂಬಗಳ ನಡುವೆ ಸಿಮೆಂಟ್ ಕಾಂಕ್ರೀಟ್ ಮಿಶ್ರಣದಿಂದ ಮಾಡಿದ ಬಿಡಿಭಾಗಗಳನ್ನು ಅಳವಡಿಸಲಾಗಿದೆ.

ಈ ಸೇತುವೆಯು ಅಮರಾವತಿಯ ಹೃದಯಭಾಗದಲ್ಲಿರುವ ಏಕೈಕ ರಾಷ್ಟ್ರೀಯ ಹೆದ್ದಾರಿಯ ಭಾಗವಾಗಿದೆ. ಚೆನ್ನೈ–ಕೋಲ್ಕತ್ತಾ ರಾಷ್ಟ್ರೀಯ ಹೆದ್ದಾರಿಯಲ್ಲಿ ಹೋಗುವ ವಾಹನಗಳು ವಿಜಯವಾಡಕ್ಕೆ ಹೋಗದೇ ಈ ಸೇತುವೆ ಮೂಲಕ ಸಾಗಲಿವೆ.

ನೇರವಾಗಿ ಅಮರಾವತಿಗೆ: ಅಮರಾವತಿಗೆ ಬರುವ ವಿಐಪಿಗಳು, ಕೈಗಾರಿಕೋದ್ಯಮಿಗಳು ವಿಜಯವಾಡ ಮೂಲಕ ಬರುವಾಗ ಗಂಟೆಗಟ್ಟಲೆ ಟ್ರಾಫಿಕ್‌ನಲ್ಲಿ ಕಾಯಬೇಕಾಗಿತ್ತು. ಆದರೆ ಈಗ ಈ ಸೇತುವೆ ಸೇವೆಗೆ ಲಭ್ಯವಾದರೆ ಗೊಲ್ಲಪುಡಿಯಿಂದ ಕೆಲವೇ ನಿಮಿಷಗಳಲ್ಲಿ ಸೆಕ್ರೆಟರಿಯೇಟ್ ತಲುಪಬಹುದು. ಉತ್ತರಾಂಧ್ರ, ಗೋದಾವರಿ ಜಿಲ್ಲೆಗಳಿಂದ ಬರುವವರೂ ಚಿನ್ನಾವತಪಲ್ಲಿಯಲ್ಲಿ ಬೈಪಾಸ್ ಹಿಡಿದರೆ ಬೆಜವಾಡಕ್ಕೆ ಕಾಲಿಡದೆ ಕೆಲವೇ ಸಮಯದಲ್ಲಿ ಅಮರಾವತಿಗೆ ಹೋಗಬಹುದು. ಏಪ್ರಿಲ್ ಅಂತ್ಯದೊಳಗೆ ಸೇತುವೆಯನ್ನು ಸಾರ್ವಜನಿಕರಿಗೆ ತಲುಪಿಸಲು ಪ್ರಯತ್ನಿಸಲಾಗುತ್ತಿದೆ.

# ಸಂಜಯ್ ಜೀವಾವಧಿ ಶಿಕ್ಷೆ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ತಿರಸ್ಕೃತ



ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು, ಆಸ್ಪತ್ರೆಯಲ್ಲಿ ತರಬೇತಿ ನಿರತ ವೈದ್ಯೆ ಮೇಲೆ ನಡೆದ ಅತ್ಯಾಚಾರ, ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಸಂಜಯ್ ಜೀವಾವಧಿ ಶಿಕ್ಷೆ ಪ್ರಶ್ನಿಸಿ ಪಶ್ಚಿಮ ಬಂಗಾಳ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿಯನ್ನು ಕೋಲ್ಕತ್ತಾ ಹೈಕೋರ್ಟ್ ತಿರಸ್ಕರಿಸಿದೆ.

ಈ ಕುರಿತು ಸಿಬಿಐ ಸಲ್ಲಿಸಿದ್ದ ಮನವಿಯನ್ನು ಹೈಕೋರ್ಟ್ ಸ್ವೀಕರಿಸಿದೆ. ಈ ಪ್ರಕರಣದಲ್ಲಿ ಸಿಬಿಐ ತನಿಖಾ ಸಂಸ್ಥೆಯಾಗಿದ್ದು, ಮೇಲ್ಮನವಿ ಸಲ್ಲಿಸುವ ಹಕ್ಕು ತನಗೆ ಮಾತ್ರ ಇದೆ ಎಂದು ಈ ಹಿಂದೆ ಹೇಳಿತ್ತು. ಕೇಂದ್ರ ಸಂಸ್ಥೆಯ ಜೊತೆಗೆ, ವಿಚಾರಣಾ ನ್ಯಾಯಾಲಯವು ನೀಡಿದ ಶಿಕ್ಷೆಯ ಅಸಮರ್ಪಕತೆಯನ್ನು ಪ್ರತಿಪಾದಿಸಿ ಮೇಲ್ಮನವಿ ಸಲ್ಲಿಸಬಹುದು ಎಂದು ಮಮತಾ ಬ್ಯಾನರ್ಜಿ ಸರ್ಕಾರ ವಾದಿಸಿತು .


ಕಳೆದ ವರ್ಷ ಆಗಸ್ಟ್ 9 ರಂದು ಇಲ್ಲಿನ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸೆಮಿನಾರ್ ಕೊಠಡಿಯಲ್ಲಿ ಕರ್ತವ್ಯದಲ್ಲಿದ್ದ ವೈದ್ಯೆಯೊಬ್ಬಳ ಮೇಲೆ ಅತ್ಯಾಚಾರ ನಡೆಸಿ ಕೊಲೆ ಮಾಡಲಾಗಿತ್ತು. ಕಳೆದ ವರ್ಷ ಕೋಲ್ಕತ್ತಾದ ಆರ್‌ಜಿ ಕಾರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ತರಬೇತಿ ವೈದ್ಯೆಯ ಮೇಲೆ ಅತ್ಯಾಚಾರ ನಡೆಸಿ ಕೊಲೆ ಮಾಡಿದ್ದಕ್ಕಾಗಿ ಸಂಜಯ್ ರಾಯ್‌ಗೆ ಜೀವಾವಧಿ ಶಿಕ್ಷೆ ವಿಧಿಸಲಾಗಿತ್ತು.

ಆದರೆ ಆತನಿಗೆ ಮರಣದಂಡನೆ ಶಿಕ್ಷೆ ವಿಧಿಸಬಹುದು ಎಂದು ಎಲ್ಲರೂ ಭಾವಿಸಿದ್ದರು. ಈ ಶಿಕ್ಷೆ ನಿರಾಶೆಯ ಅಲೆಯನ್ನು ಉಂಟುಮಾಡಿತ್ತು. ಸೀಲ್ದಾ ನ್ಯಾಯಾಲಯವು ಸಂತ್ರಸ್ತೆಯ ಕುಟುಂಬಕ್ಕೆ 17 ಲಕ್ಷ ರೂ., ಪರಿಹಾರ ನೀಡುವಂತೆ ಆದೇಶಿಸಿದೆ.

ಪ್ರಕರಣದಲ್ಲಿ ಅಪರಾಧಿಗೆ ಮರಣದಂಡನೆ ವಿಧಿಸಬೇಕೆಂದು ಸಿಬಿಐ ಒತ್ತಾಯಿಸಿತ್ತು. ಇದು ಅಪರೂಪದ ಪ್ರಕರಣಗಳಲ್ಲಿ ಅಪರೂಪದ ಪ್ರಕರಣವಲ್ಲ, ಆದ್ದರಿಂದ ಮರಣದಂಡನೆ ವಿಧಿಸಲಾಗಿಲ್ಲ ಎಂದು ನ್ಯಾಯಾಧೀಶರು ಹೇಳಿದ್ದರು. ಶಿಕ್ಷೆಯ ಪ್ರಮಾಣವನ್ನು ಬಂಗಾಳ ಸರ್ಕಾರ ಮತ್ತು ಸಿಬಿಐ ಎರಡೂ ಪ್ರಶ್ನಿಸಿದ್ದವು.

ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ತೀರ್ಪಿನ ಬಗ್ಗೆ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದು, ಇಂತಹ ಘೋರ ಅಪರಾಧಕ್ಕೆ ಮರಣದಂಡನೆ ವಿಧಿಸಬೇಕು ಎಂದು ಹೇಳಿದ್ದರು.

# ಮಹಾಕುಂಭಕ್ಕೆ ತೆರಳುತ್ತಿದ್ದ ಕಾರು ಅಪಘಾತ: 8 ಮಂದಿ ಸಾವು



**ಜೈಪುರ:** ಮಹಾ ಕುಂಭ ಮೇಳದ ಪುಣ್ಯ ಸ್ನಾನದಲ್ಲಿ ಭಾಗಿಯಾಗಬೇಕು ಎಂದು ತೆರಳುತ್ತಿದ್ದ ಯಾತ್ರಿಗಳಿದ್ದ ವಾಹನ ಭೀಕರ ರಸ್ತೆ ಅಪಘಾತಕ್ಕೆ ತುತ್ತಾಗಿದ್ದು, 8 ಜನರು ಸಾವನ್ನಪ್ಪಿದ್ದು, ಐವರು ಗಾಯಗೊಂಡಿರುವ ಘಟನೆ ರಾಜಸ್ಥಾನದ ಬಿಲ್ವಾರ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ನಡೆದಿದೆ.

ಬಿಲ್ವಾರ ಜಿಲ್ಲೆಯ ಮಂಡಲಗಢ ಮೂಲದ 8 ಮಂದಿ ಸ್ನೇಹಿತರು ಮಹಾಕುಂಭ ಮೇಳಕ್ಕೆ ಭಾಗಿಯಾಗಲು ಹೊರಟಾಗ ಈ ದುರ್ಘಟನೆ ಸಂಭವಿಸಿದ್ದು, ತಕ್ಷಣಕ್ಕೆ ಸ್ಥಳೀಯರು ನೆರವಿಗೆ ಆಗಮಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಸಾವನ್ನಪ್ಪಿದವರ ಮೃತದೇಹಗಳನ್ನು ಶುಕ್ರವಾರ ಸ್ವಗ್ರಾಮಕ್ಕೆ ತಂದು ಸಾಮಹಿಕ ಅಂತ್ಯಸಂಸ್ಕಾರ ನಡೆಸಲಾಯಿತು. ಊರಿನ ಯುವಕರ ಸಾವಿನಿಂದ ಗ್ರಾಮದಲ್ಲಿ ನೀರವ ಮೌನ ಆವರಿಸಿತ್ತು.

ಗುರುವಾರ ದುದು ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ಘಟನೆ ನಡೆದಿದೆ. ಈ ಸುದ್ದಿ ತಿಳಿಯುತ್ತಿದ್ದಂತೆ ದುದು ಎಡಿಎಂ ಗೋಪಾಲ್ ಪರಿಹಾರ್ ಮತ್ತು ನೈಬ್ ತಹಸೀಲ್ದಾರ್ ಅವರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದರು. ಘಟನೆಯಲ್ಲಿ ಕಾರ್‌ಗೆ ಡಿಕ್ಕಿ ಹೊಡೆದ ಬಸ್ ಚಾಲಕ ಸೇರಿದಂತೆ ನಾಲ್ವರು ಪ್ರಯಾಣಿಕರು ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ಘಟನೆ ಬಗ್ಗೆ ಮಾಹಿತಿ ನೀಡಿದ ದುದು ಎಡಿಎಂ ಮೃತಪಟ್ಟವರಲ್ಲಿ 7 ಮಂದಿಯ ಗುರುತುಪತ್ತೆಯಾಗಿದೆ. ಇವರೆಲ್ಲಾ ಪ್ರಯಾಗರಾಜ್ ಮಹಾಕುಂಭಕ್ಕೆ ತೆರಳುತ್ತಿದ್ದರು. ಇವರ ಕಾರಿಗೆ ಎದುರಾಗಿ ಬಸ್ ಬರುತ್ತಿತ್ತು. ಬಸ್ ಟೈರ್ ಸ್ಫೋಟಗೊಂಡ ಪರಿಣಾಮ ಅದು ನಿಯಂತ್ರಣ ತಪ್ಪಿದ್ದರಿಂದ ಮತ್ತೊಂದು ಮಾರ್ಗಕ್ಕೆ ಬಂದಿದ್ದು. ಎದುರಿನಿಂದ ಬರುತ್ತಿದ್ದ ಕಾರಿಗೆ ಡಿಕ್ಕಿ ಹೊಡೆದಿದೆ ಎಂದು ಹೇಳಿದ್ದಾರೆ.

ಶೋಕಸಾಗರದಲ್ಲಿ ಬಡಿಯಾ ಪಟ್ಟಣ: ಬಡಿಯಾ ಗ್ರಾಮದ ಐವರು ಮೃತ ಪಟ್ಟ ಹಿನ್ನೆಲೆ ಊರಿನಲ್ಲಿ ನೀರವ ಮೌನ ಆವರಿಸಿತ್ತು. ಪಟ್ಟಣದ ಅಂಗಡಿ, ಮುಗ್ಗಟ್ಟುಗಳನ್ನು ಬಂದ್ ಮಾಡಲಾಗಿತ್ತು. ಪಟ್ಟಣದ ಎಲ್ಲ ನಿವಾಸಿಗಳು ಯುವಕರ ಸಾಮೂಹಿಕ ಅಂತ್ಯ ಸಂಸ್ಕಾರದಲ್ಲಿ ಭಾಗಿಯಾದರು. ಇನ್ನು ಸಾವನ್ನಪ್ಪಿದ ಐವರ ಯುವಕರ ಅಂತ್ಯ ಕ್ರಿಯೆಯನ್ನು ಏಕಕಾಲದಲ್ಲಿ ಮೋಕ್ಷ ಧಾಮದಲ್ಲಿ ನೆರವೇರಿಸಲಾಯಿತು.

# ಗರ್ಭಿಣಿಗೆ ಲೈಂಗಿಕ ದೌರ್ಜನ್ಯ: ಆರೋಪಿ ವಶಕ್ಕೆ




**ತಮಿಳುನಾಡು:** ಗರ್ಭಿಣಿಯೊಬ್ಬರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ, ಆಕೆಯನ್ನು ಟ್ರೈನ್‌ನಿಂದ ಹೊರ ತಳ್ಳಿರುವ ಆಘಾತಕಾರಿ ಘಟನೆ ತಮಿಳು ನಾಡಿನ ವೆಲ್ಲೂರಿನಲ್ಲಿ ವರದಿಯಾಗಿದೆ. ನಾಲ್ಕು ತಿಂಗಳ ಗರ್ಭಿಣಿಯಾಗಿದ್ದ ಸಂತ್ರಸ್ತ ಮಹಿಳೆ ಕೊಯಮತ್ತೂರಿನಿಂದ ತಿರುಪತಿಗೆ ಇಂಟರ್‌ಸಿಟಿ ಎಕ್ಸ್‌ಪ್ರೆಸ್‌ನಲ್ಲಿ ತೆರಳುತ್ತಿದ್ದಾಗ ಈ ದುರ್ಘಟನೆ ನಡೆದಿದೆ.

ಘಟನೆಯ ಹಿನ್ನೆಲೆ: ಗುರುವಾರ ರಾತ್ರಿ 9ರ ಸುಮಾರಿಗೆ ಮಹಿಳೆ ಪ್ರಯಾಣಿಸುವಾಗ ಜೊಲರ್ಪೆಟ್ಟೈನಲ್ಲಿ ಮಹಿಳೆಯರ ಬೋಗಿಗೆ ಹತ್ತಿದ ಯುವಕನೊಬ್ಬ, ಮಹಿಳೆ ಒಬ್ಬರೇ ಇರುವುದನ್ನು ಗಮನಿಸಿದ್ದಾನೆ. ಈ ವೇಳೆ ಮಹಿಳೆ ಇದು ಮಹಿಳಾ ಬೋಗಿಯಾಗಿದ್ದು, ಕೆಳಗೆ ಇಳಿಯುವಂತೆ ತಿಳಿಸಿದ್ದಾರೆ. ಈ ವೇಳೆ ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿದ್ದು, ಕಡೆಗೆ ಆತ ಆಕೆಯ ಮೇಲೆ ದೈಹಿಕ ದೌರ್ಜನ್ಯಕ್ಕೆ ಮುಂದಾಗಿದ್ದಾನೆ.

ರಕ್ಷಣೆಗಾಗಿ ಮಹಿಳೆ ಶೌಚಾಲಯದ ಆಶ್ರಯ ಪಡೆಯಲು ಮುಂದಾಗಿದ್ದಾರೆ, ಈ ವೇಳೆ ಕೂಡ ಆತ ಹಿಂಬಾಲಿಸಿದ್ದಾನೆ. ಅಲ್ಲದೇ ರೈಲು ಬಾಗಿಲಲ್ಲಿ ನಿಂತು ವಾದ ಮುಂದುವರೆಸಿದ್ದಾನೆ. ಬಳಿಕ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದು, ಆಕೆ ಸಹಾಯಕ್ಕೆ ಅಂಗಲಾಚಿದರೂ ಕರುಣೆ ತೋರದೇ ಆಕೆಯನ್ನು ಕೆವಿ ಕುಪ್ಪಂ ಬಳಿ ರೈಲಿನಿಂದ ಹೊರ ತಳ್ಳಿದ್ದಾನೆ.

ಮಹಿಳೆಯ ಮೇಲೆ ದೌರ್ಜನ್ಯ ನಡೆದಿರುವುದು ಗೊತ್ತಾಗಿದ್ದು ಹೇಗೆ: ಈ ವೇಳೆ ದಾರಿ ಹೋಕರೊಬ್ಬರು ಮಹಿಳೆ ರೈಲ್ವೆ ಟ್ರ್ಯಾಕ್ ಬಳಿ ಗಾಯಗೊಂಡು ಕೆಳಕ್ಕೆ ಬಿದ್ದಿರುವುದನ್ನು ನೋಡಿ ರಕ್ಷಣೆ ಮಾಡಿದ್ದು, ಕೆವಿ ಕುಪ್ಪಂ ಪೊಲೀಸರಿಗೆ ಮತ್ತು ತುರ್ತು ಸೇವೆಗೆ ಕರೆ ಮಾಡಿ ವಿಷಯ ಮುಟ್ಟಿಸಿದ್ದಾರೆ. ಕೆವಿ ಕುಪ್ಪಂ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಬಳಿಕ ಹೆಚ್ಚಿನ ಚಿಕಿತ್ಸೆಗೆ ವೆಲ್ಲೂರು ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಮಹಿಳೆಯನ್ನು ದಾಖಲಿಸಲಾಗಿದೆ. ರೈಲಿನಿಂದ ಕೆಳಕ್ಕೆ ಬಿದ್ದಿರುವುದರಿಂದ ಮಹಿಳೆಯ ಕೈ ಮತ್ತು ಕಾಲುಗಳು ಮುರಿದಿವೆ ಎಂದು ವೈದ್ಯರು ತಿಳಿಸಿದ್ದಾರೆ.

ತನಿಖೆಗೆ ಮುಂದಾದ ಪೊಲೀಸರು: ರೈಲ್ವೆ ಪೊಲೀಸರು ಮತ್ತು ಕೆವಿ ಕುಪ್ಪಂ ಪೊಲೀಸರು ಘಟನೆ ಸಂಬಂಧ ತನಿಖೆಗೆ ಮುಂದಾಗಿದ್ದಾರೆ. ರೈಲು ಮತ್ತು ರೈಲು ನಿಲ್ದಾಣದ ಸಿಸಿಟಿವಿ ಫೂಟೇಜ್ ಮೂಲಕ ಸಾಕ್ಷಿಗಳನ್ನು ಸಂಗ್ರಹಿಸುವ ಕೆಲಸಕ್ಕೆ ಮುಂದಾಗಿದ್ದಾರೆ. ಸದ್ಯ ಸಂತ್ರಸ್ತ ಮಹಿಳೆ ಸುರಕ್ಷಿತವಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಅವರನ್ನು ಈಗ ವೈದ್ಯಕೀಯ ನಿಗಾದಲ್ಲಿ ಇರಿಸಲಾಗಿದೆ.

ಆರೋಪಿ ವಶಕ್ಕೆ ಪಡೆದ ಪೊಲೀಸರು: ಈ ಕೃತ್ಯ ಎಸಗಿದ ಆರೋಪಿಯನ್ನು ಹೇಮರಾಜ್ ಎಂದು ಪತ್ತೆ ಮಾಡಲಾಗಿದ್ದು, ಆತನ ವಿರುದ್ಧ ಕೊಲೆ, ಲೈಂಗಿಕ ದೌರ್ಜನ್ಯ ಸೇರಿದಂತೆ ಇತರ ಅಪರಾಧದ ಮೇಲೆ ವಶಕ್ಕೆ ಪಡೆಯಲಾಗಿದೆ. ಆರೋಪಿ ಹೇಮರಾಜ್ ಕೃತ್ಯ ಎಸಗುವ ಸಂದರ್ಭದಲ್ಲಿ ಆಲ್ಕೋಹಾಲ್ ಅಥವಾ ಡ್ರಗ್ಸ್ ನಶೆಯಲ್ಲಿದ್ದನಾ ಅಥವಾ ಇಲ್ಲವೇ ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸಿದ್ದಾರೆ. ಈ ಘಟನೆ ಮಹಿಳಾ ಬೋಗಿಯಲ್ಲಿ ಹೆಚ್ಚಿನ ಭದ್ರತೆ ಬೇಕು ಎಂಬುದನ್ನು ತೋರಿಸುತ್ತಿದೆ.

# ಶೇಖ್ ಹಸೀನಾ ಹಸ್ತಾಂತರದ ಬಗ್ಗೆ ಬಾಂಗ್ಲಾದೇಶಕ್ಕೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ

**ನವದೆಹಲಿ:** ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರನ್ನು ಹಸ್ತಾಂತರಿಸಲು ಭಾರತಕ್ಕೆ ಕೋರಿದೆ ಎಂದು ವಿದೇಶಾಂಗ ವ್ಯವಹಾರಗಳರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಹೇಳಿದ್ದಾರೆ.ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರು ಆಗಸ್ಟ್ 2023ರಲ್ಲಿ ಭಾರತಕ್ಕೆ ಪಲಾಯನ ಮಾಡುವ ಮೊದಲು ಎಸಗಿದ್ದಾರೆ ಎನ್ನಲಾದ ಅಪರಾಧಗಳಿಗಾಗಿ ಅವರನ್ನು ಗಡೀಪಾರು ಮಾಡುವಂತೆ ಬಾಂಗ್ಲಾದೇಶ ಸರ್ಕಾರ ಮಾಡಿದ ಮನವಿಗೆ ಭಾರತ ಯಾವುದೇ ಪ್ರತಿಕ್ರಿಯೆಯನ್ನು ನೀಡಿಲ್ಲ ಎಂದಿದ್ದಾರೆ.

ಕೇರಳ ಸಿಪಿಐಎಂ ರಾಜ್ಯಸಭಾ ಸಂಸದ ಜಾನ್ ಬ್ರಿಟ್ಟಾಸ್ ಕೇಳಿದ ಪ್ರಶ್ನೆಗೆ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಉತ್ತರಿಸಿದ್ದಾರೆ. 'ಬಾಂಗ್ಲಾದೇಶ ಸರ್ಕಾರವು 2024ರ ಆಗಸ್ಟ್ 5ರಂದು ಭಾರತಕ್ಕೆ ಬರುವ ಮೊದಲು ಮಾಡಿದ ಅಪರಾಧಗಳಿಗಾಗಿ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರನ್ನು ಹಸ್ತಾಂತರಿಸುವಂತೆ ಕೋರಿದೆ. ಬಾಂಗ್ಲಾದೇಶ ಸರ್ಕಾರಕ್ಕೆ ನಮ್ಮ ಸರ್ಕಾರ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಕೀರ್ತಿ ವರ್ಧನ್ ಸಿಂಗ್ ಉತ್ತರಿಸಿದ್ದಾರೆ.

ನೊಬೆಲ್ ಪ್ರಶಸ್ತಿ ವಿಜೇತ ಮುಹಮ್ಮದ್ ಯೂನಸ್ ನೇತೃತ್ವದಲ್ಲಿ ಅಧಿಕಾರ ವಹಿಸಿಕೊಂಡ ಮಧ್ಯಂತರ ಅಧಿಕಾರಿಗಳ ಪ್ರಕಾರ, ಆಗಸ್ಟ್ 5ರಂದು ಶೇಖ್ ಹಸೀನಾ ಅವರ ಸರ್ಕಾರವನ್ನು ಪದಚ್ಯುತಗೊಳಿಸುವಲ್ಲಿ ಕೊನೆಗೊಂಡ ವಿದ್ಯಾರ್ಥಿಗಳ ನೇತೃತ್ವದ ಪ್ರತಿಭಟನೆಯಲ್ಲಿ 800ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದರು. ಶೇಖ್ ಹಸೀನಾ ಅವರ ಪಕ್ಷವಾದ ಅವಾಮಿ ಲೀಗ್‌ನ ಕೋಟಾ ವ್ಯವಸ್ಥೆಯ ವಿರುದ್ಧ ವಿದ್ಯಾರ್ಥಿಗಳು ಪ್ರತಿಭಟಿಸಿದರು. ಆದರೆ ಆ ಪ್ರತಿಭಟನೆಗಳು ಕ್ರಮೇಣ ಶೇಖ್ ಹಸೀನಾ ಅವರ ರಾಜೀನಾಮೆಗೆ ಒತ್ತಾಯಿಸುವ ಚಳುವಳಿಯಾಗಿ ಬೆಳೆಯಿತು.

# ಕ್ರೀಡೆಗಳಲ್ಲಿ ಟ್ರಾನ್ಸ್‌ಜೆಂಡರ್ ಮಹಿಳೆಯರು ಭಾಗವಹಿಸುವುದನ್ನು ನಿಷೇಧಿಸಿದ ಟ್ರಂಪ್



**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಹತ್ವದ ಆದೇಶಕ್ಕೆ ಸಹಿ ಹಾಕಿದ್ದಾರೆ. ದೇಶದಲ್ಲಿ ಇನ್ಮುಂದೆ ಎರಡೇ ಲಿಂಗಗಳಿರುವುದಾಗಿ ಅವರು ಘೋಷಿಸಿದ್ದು, ಈ ಕುರಿತಾಗಿ ಮಹತ್ತರ ರಾಜಕೀಯ ನಿರ್ಣಯ ಕೈಗೊಂಡಿದ್ದಾರೆ. ಟ್ರಾನ್ಸ್‌ಜೆಂಡರ್‌ಗಳು ಅಥವಾ ಲಿಂಗತ್ವ ಅಲ್ಪಸಂಖ್ಯಾತರು ಮಹಿಳಾ ಕ್ರೀಡೆಗಳಲ್ಲಿ ಸ್ಪರ್ಧಿಸುವುದನ್ನು ಟ್ರಂಪ್ ನಿಷೇಧಿಸಿದ್ದಾರೆ.

"Keeping Men Out of Women's Sports"ಎಂಬ ಆದೇಶಕ್ಕೆ ಟ್ರಂಪ್ ಸಹಿ ಹಾಕಿದರು. ಈ ವೇಳೆ ಅಲ್ಲಿ ನೂರಾರು ಮಹಿಳೆಯರು ಮತ್ತು ಅಥ್ಲೆಟಿಕ್ ಸಮವಸ್ತ್ರದಲ್ಲಿ ಕೆಲವು ಯುವತಿಯರು ಅವರನ್ನು ಸುತ್ತುವರೆದಿದ್ದರು. ಸಹಿ ಬಳಿಕ ಟ್ರಂಪ್ ಈ ಕಾರ್ಯಕಾರಿ ಆದೇಶದೊಂದಿಗೆ ಮಹಿಳಾ ಕ್ರೀಡೆ ಮೇಲಿನ ಯುದ್ಧ ಕೊನೆಗೊಂಡಿದೆ ಎಂದು ಹೇಳಿದ್ದಾರೆ.

ಈ ಶೀರ್ಷಿಕೆ ಋಘಿ ಬಗ್ಗೆ ಟ್ರಂಪ್ ಆಡಳಿತದ ಅಧಿಕಾರಿ, "ನೀವು ಮಹಿಳಾ ಕ್ರೀಡೆಗಳನ್ನು ಆಯೋಜಿಸಲು ಬಯಸಿದರೆ, ಅದರಲ್ಲಿ ನೀವು ಮಹಿಳೆಯರಿಗಾಗಿಯೇ ಅವಕಾಶಗಳನ್ನು ಒದಗಿಸಬೇಕಾದರೆ, ಅವರು ಸಮಾನವಾಗಿ ಸುರಕ್ಷಿತ, ಸಮಾನವಾಗಿ ನ್ಯಾಯಯುತ ಮತ್ತು ಸಮಾನವಾಗಿ ಖಾಸಗಿ ಅವಕಾಶಗಳನ್ನು ಹೊಂದಿರಬೇಕು. ಆದ್ದರಿಂದ ನೀವು ಮಹಿಳೆಯರಿಗೆ ಮಹಿಳಾ ಕ್ರೀಡೆಗಳನ್ನು ಸಂರಕ್ಷಿಸಲಿದ್ದೀರಿ ಎಂದರ್ಥ" ಎಂದು ಹೇಳಿದ್ದಾರೆ

ಆದೇಶವು ಎರಡು ಅಂಶಗಳನ್ನು ಒಳಗೊಂಡಿದೆ. ಮೊದಲನೆಯದಾಗಿ, ಇದು ಟೈಟಲ್ ಋಘಿ ನಿಯಮಗಳನ್ನು ಪಾಲಿಸುವಂತೆ ಒತ್ತಾಯಿಸುತ್ತದೆ. ಟೈಟಲ್ ಋಘಿ ಎಂದರೆ ಅಮೆರಿಕದ ಫೆಡರಲ್ ಸರ್ಕಾರದಿಂದ ಹಣಕಾಸಿನ ನೆರವು ಪಡೆಯುವ ಯಾವುದೇ ಶೈಕ್ಷಣಿಕ ಸಂಸ್ಥೆಯಲ್ಲಿ ಲಿಂಗದ ಆಧಾರದ ಮೇಲೆ ತಾರತಮ್ಯ ಮಾಡುವುದನ್ನು ನಿಷೇಧಿಸುವ ಕಾನೂನು. ಎರಡನೆಯದಾಗಿ, ಈ ಆದೇಶವು ಖಾಸಗಿ ವಲಯದೊಂದಿಗೆ ಸಹಕರಿಸಲು ಫೆಡರಲ್ ಸರ್ಕಾರವನ್ನು ಪ್ರೋತ್ಸಾಹಿಸುತ್ತದೆ. ಅಂದರೆ, ಸರ್ಕಾರವು ಖಾಸಗಿ ಸಂಸ್ಥೆಗಳೊಂದಿಗೆ ಸೇರಿ ಈ ನಿಯಮಗಳನ್ನು ಅನುಷ್ಠಾನಗೊಳಿಸಲು ಪ್ರಯತ್ನಿಸುತ್ತದೆ. ಈ ಆದೇಶವು ಲಿಂಗ ತಾರತಮ್ಯವನ್ನು ತಡೆಯಲು ಎರಡು ರೀತಿಯಲ್ಲಿ ಕೆಲಸ ಮಾಡುತ್ತದೆ.

ಮತ್ತೊಂದು ಚುನಾವಣೆ ಭರವಸೆ ಈಡೇರಿಸಿದ ಟ್ರಂಪ್: ಚುನಾವಣೆ ವೇಳೆ ನೀಡಿದ ಭರವಸೆಯಂತೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಲಿಂಗ ವೈವಿಧ್ಯತೆ ಕುರಿತು ಅಮೆರಿಕ ಸರ್ಕಾರದ ನೀತಿಗಳನ್ನು ಬದಲಾಯಿಸುವ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದ್ದಾರೆ. ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಅಮೆರಿಕವನ್ನುದ್ದೇಶಿಸಿ ಮಾತನಾಡಿದ್ದ ಡೊನಾಲ್ಡ್ ಟ್ರಂಪ್ ಇನ್ಮುಂದೆ ಅಮೆರಿಕದಲ್ಲಿ ಗಂಡು ಮತ್ತು ಹೆಣ್ಣು ಎಂಬ ಎರಡು ಲಿಂಗಗಳನ್ನು ಮಾತ್ರ ಗುರುತಿಸಲಾಗುತ್ತದೆ. ಇದುವೇ ನಮ್ಮ ಸರ್ಕಾರದ ಅಧಿಕೃತ ನೀತಿಯಾಗಲಿದೆ ಎಂದು ಘೋಷಿಸಿದ್ದರು. ಈ ಮಾತಿನಂತೆ ಅವರು ಇಂದು ಮಹಿಳಾ ಕ್ರೀಡೆಗಳಲ್ಲಿ ಟ್ರಾನ್ಸ್‌ಜೆಂಡರ್‌ಗಳಿಗೆ ಭಾಗವಹಿಸುವ ಅಧಿಕಾರ ಇಲ್ಲ ಎಂಬ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಅಮೆರಿಕದಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಹಕ್ಕುಗಳ ಬಗ್ಗೆ ಭಾರಿ ಚರ್ಚೆಗಳು ನಡೆಯುತ್ತಿವೆ. ಮಹಿಳಾ ಕ್ರೀಡಾಕೂಟದಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಭಾಗವಹಿಸುವುದನ್ನು ರಿಪಬ್ಲಿಕನ್ ಪಕ್ಷದ ಅನೇಕರು ವಿರೋಧಿಸಿದ್ದರು. ಪಕ್ಷದ ಆಶಯದಂತೆ ಅಮೆರಿಕ ಅಧ್ಯಕ್ಷರು ಅಧಿಕೃತವಾಗಿ ಕ್ರಮ ಕೈಗೊಂಡಿದ್ದಾರೆ.

# ಪರಿಸರ ಸ್ನೇಹಿ ಆಮಂತ್ರಣ: ವೈದ್ಯ ದಂಪತಿಯ ಹೊಸ ಆಲೋಚನೆ



**ರಾಜಸ್ಥಾನ:** ಪರಿಸರ ಸಂರಕ್ಷಣೆಯ ಕುರಿತು ವಿನೂತನ ಜಾಗೃತಿಗಳನ್ನು ಕಾಣುವುದು ಸಹಜ. ಇದರಲ್ಲಿ ಕೋಟಾ ದಂಪತಿಗಳ ಹೆಜ್ಜೆ ವಿಶೇಷವಾಗಿದೆ. ಕೋಟಾದ ಈ ದಂಪತಿ ತಮ್ಮ ಮಗನ ಮದುವೆ ಆಮಂತ್ರಣವನ್ನು ವಿಶೇಷವಾಗಿ ವಿನ್ಯಾಸ ಮಾಡವ ಮೂಲಕ ಪರಿಸರಾತ್ಮಕ ಕ್ರಮಕ್ಕೆ ಮುಂದಾಗಿದೆ.

ಮದುವೆಯನ್ನು ಪರಿಸರ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಪೇಪರ್ ಬದಲಾಗಿ ದಂಪತಿಗಳು ಬಟ್ಟೆಯಲ್ಲಿ ಮದುವೆ ಆಮಂತ್ರಣ ಪ್ರಕಟಿಸಿದ್ದಾರೆ. ಆಮಂತ್ರಣ ಬಟ್ಟೆ ಕರ ವಸ್ತ್ರದ ರೀತಿಯಲ್ಲಿದ್ದು, ಇದನ್ನು ಬಳಕೆ ಮಾಡುವುದು ಸುಲಭ ಎನ್ನುತ್ತಾರೆ ಅವರು.

ಬಟ್ಟೆಯಲ್ಲಿ ಆಮಂತ್ರಣ ಪತ್ರಿಕೆ ಮುದ್ರಿಸಲು ಪ್ರಮುಖ ಕಾರಣ ಎಂದರೆ, ಪತ್ರಿಕೆಯಲ್ಲಿ ಮುದ್ರಿಸಿದ ದೇವರ ಚಿತ್ರಗಳು ಕಡೆಗೆ ಕಸದ ಬುಟ್ಟಿಗೆ ಸೇರಬಾರದು ಹಾಗೇ ಪತ್ರಿಕೆಗೆ ಬಳಕೆ ಮಾಡಲು ಮರಗಳನ್ನು ಕಡಿಯುವುದನ್ನು ತಪ್ಪಿಸಬಹುದು ಅಂತಾರೆ ವೈದ್ಯ ದಂಪತಿಗಳಾದ ಡಾ ಗಿರೀಶ್ ಚಂದ್ ಶರ್ಮಾ ಮತ್ತು ಅವರ ಪತ್ನಿ ಡಾ ರಶ್ಮಿ ತಿವಾರಿ. ಕೋಟಾದ ರಾಂಗಬಿರ್ ಯೋಜ್ನದಲ್ಲಿ ಇವರು ನೆಲೆಸಿದ್ದು, ತಮ್ಮ ಮಗನ ಮದುವೆಯಲ್ಲಿ ತೆಗೆದುಕೊಂಡಿರುವ ನಿರ್ಧಾರ ವ್ಯಾಪಕ ಮೆಚ್ಚುಗೆಗೆ ಪಾತ್ರವಾಗಿದೆ.

ಈ ಐಡಿಯಾ ಹೊಳೆದಿದ್ದು ಹೀಗೆ: ಆರಂಭದಲ್ಲಿ ಆಮಂತ್ರಣ ಪತ್ರಿಕೆ ಮಾಡಿಸುವ ಉದ್ದೇಶ ಹೊಂದಿದ್ದರೂ, ಬಳಿಕ ಪರಿಸರ ಸ್ನೇಹಿ ಕರೆಯೋಲೆ ಸಂಬಂಧ ಮಕ್ಕಳ ಜೊತೆ ಚರ್ಚಿಸಿದ್ದರು . ಇದಕ್ಕಾಗಿ ಕುಟುಂಬಸ್ಥರು ಅನೇಕ ಸಂಶೋಧನೆ ಮಾಡಿ, ಪುಣೆಯಲ್ಲಿನ ಉಗಂ ಕಾರ್ಡ್ಸ್‌ನಲ್ಲಿ ಪೇಪರ್‌ಲೆಸ್ ಪರಿಸರ ಸ್ನೇಹಿ ಆಮಂತ್ರಣದ ಕುರಿತು ತಿಳಿದುಕೊಂಡಿದ್ದರು. ಅವರನ್ನು ಸಂಪರ್ಕಿಸಿ ಈ ಪರಿಸರ – ಸ್ನೇಹಿ ವಿವಾಹ ಆಮಂತ್ರಣ ರೂಪಿಸಿದ್ದಾರೆ.

ಬಜೆಟ್ ಸ್ನೇಹಿ: ಕರವಸ್ತ್ರದ ಗಾತ್ರದ ಬಟ್ಟೆಯಲ್ಲಿ ತಯಾರಾಗುವ ಪತ್ರಿಕೆಯ ಬಜೆಟ್ ಕೂಡ ಹೆಚ್ಚು ದುಬಾರಿಯಾಗಿಲ್ಲ. ಒಂದರ ಬೆಲೆ 35 ರೂ ಆಗಿದೆ.

ನನ್ನ ಮಗಳ ಮದುವೆಯಲ್ಲಿ ಒಂದು ಕಾರ್ಡ್‌ಗೆ 37 ರೂ ಖರ್ಚು ಮಾಡಿದ್ದೆವು. ಅದಕ್ಕೆ ಹೋಲಿಕೆ ಮಾಡಿದರೆ ಇದು ಅಗ್ಗವಾಗಿದೆ. ನಾವು 800 ಪರಿಸರ ಸ್ನೇಹಿ ಆಮಂತ್ರಣ ಬಟ್ಟೆ ವಿವಾಹ ಆಮಂತ್ರಣವನ್ನ ಮುದ್ರಿಸಿದ್ದೇವೆ ಎಂದರು.

ಎರಡು ಬಾರಿ ತೊಳೆದ ನಂತರ ಖರ್ಚೀಫ್ ಆಗಿ ಬಳಕೆ ಮಾಡಬಹುದು: ಈ ಮದುವೆ ಆಮಂತ್ರಣ ಬಟ್ಟೆಯು 1.5 ಅಡಿ ಅಗಲವಿದೆ. ಇದರಲ್ಲಿ ತಾತ್ಕಾಲಿಕ ಇಂಕ್ ಬಳಕೆ ಮಾಡಲಾಗಿದೆ. ಇದನ್ನು ಆಮಂತ್ರಣದ ಉದ್ದೇಶ ಈಡೇರಿದ ಬಳಿಕ ಎರಡು ಬಾರಿ ತೊಳೆದು ಕರವಸ್ತ್ರವಾಗಿ ಬಳಕೆ ಮಾಡಬಹುದು. ಬಟ್ಟೆಯ ಗುಣಮಟ್ಟ ಕೂಡ ಉತ್ತಮವಾಗಿದ್ದು, ಇದು ಹಾನಿಕಾರಕವಲ್ಲ ಅಂತಿದ್ದಾರೆ ವೈದ್ಯ ದಂಪತಿ.

ಧಾರ್ಮಿಕ ಸಂಕೇತಗಳಿಗೆ ಅವಮಾನ ಮಾಡಬೇಡಿ: ವೈದ್ಯಕೀಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಾ ಗಿರೀಶ್? ಶರ್ಮಾ ಇದೀಗ ನಿವೃತ್ತಿಯಾಗಿದ್ದು, ಅವರ ಪತ್ನಿ ರಶ್ಮಿ ತಿವಾರಿ ಕೂಡ ಪಶುವೈದ್ಯರಾಗಿ ನಿವೃತ್ತಿ ಹೊಂದಿದ್ದಾರೆ. ಮದುವೆ ಆಮಂತ್ರಣ ಪತ್ರಿಕೆಯಲ್ಲಿ ನಾವು ಆರಾಧಿಸುವ ದೇವರ ಚಿತ್ರಗಳನ್ನು ಪ್ರಕಟಿಸುತ್ತಿದ್ದೇವೆ.

ಕಾರ್ಯಕ್ರಮದ ಬಳಿಕ ಈ ಪತ್ರಿಕೆಗಳು ಉಪಯೋಗ ಇಲ್ಲ ಎಂದು ಕಸದ ಬುಟ್ಟಿಗೆ ಹಾಕಿದಾಗ ದೇವರ ಚಿತ್ರಗಳು ಕಸ ಸೇರುತ್ತದೆ. ಇದು ಧಾರ್ಮಿಕ ಸಂಕೇತಕ್ಕೆ ಮತ್ತು ಫೋಟೋಗೆ ಮಾಡುವ ಅವಮಾನವಾಗಿದೆ. ಈ ಹಿನ್ನೆಲೆಯಲ್ಲಿ ನಾವು ಬಟ್ಟೆ ಆಮಂತ್ರಣವನ್ನು ಮಾಡಿಸಿದೆವು ಎಂದು ಈ ವೈದ್ಯ ದಂಪತಿಗಳು ಹೇಳಿದ್ದಾರೆ.

# ದೇಶದ್ರೋಹದ ಆರೋಪ; ನಟಿ ಮೆಹರ್ ಶಾನ್ ಬಂಧನ



ಬಾಂಗ್ಲಾದೇಶದಲ್ಲಿ ಗಲಭೆ ಮತ್ತೆ ಭುಗಿಲೆದ್ದಿದೆ. ಮಾಜಿ ಅಧ್ಯಕ್ಷ ಶೇಕ್ ಮುಜಿಬುರ್ ರೆಹಮಾನ್ ಮನೆಗೆ ಬೆಂಕಿ ಹಚ್ಚಲಾಗಿದೆ. ಇದರಿಂದ ಇಡೀ ಬಾಂಗ್ಲಾದಲ್ಲಿ ಪ್ರಕ್ಷುಬ್ಧ ವಾತಾವರಣ ನಿರ್ಮಾಣ ಆಗಿದೆ. ಹೀಗಿರುವಾಗಲೇ ದೇಶದ್ರೋಹದ ಆರೋಪದ ಮೇಲೆ ಬಾಂಗ್ಲಾ ನಟಿ ಮೆಹರ್ ಅಫ್ರೋಜ್ ಶಾನ್ ಅವರನ್ನು ಬಂಧಿಸಲಾಗಿದೆ. ಅವರನ್ನು ಸದ್ಯ ವಿಚಾರಣೆ ನಡೆಸಲಾಗುತ್ತಿದೆ. ಇದು ಅವರ ಅಭಿಮಾನಿಗಳಲ್ಲಿ ಆತಂಕ ಮೂಡಿಸಿದೆ.


ರಾತ್ರಿ ಮೆಹರ್ ಅವರನ್ನು ಬಂಧಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ಆಯುಕ್ತ ರೆಜಾಲ್ ಕರೀಂ ಮಲ್ಲಿಕ್ ಹೇಳಿದ್ದಾರೆ. ದೇಶದ್ರೋಹದ ಆರೋಪದ ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, ಆ ಕುರಿತು ಪ್ರಶ್ನೆ ಮಾಡಲಾಗುತ್ತಿದೆ. ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶದ ಮಧ್ಯಂತರ ಸರ್ಕಾರವನ್ನು ಅವರು ಟೀಕಿಸಿದ್ದರು ಎಂದು ಹೇಳಲಾಗಿದೆ.

**ಮನೆಯ ಮೇಲೆ ದಾಳಿ:** ಮೆಹರ್ ಬಂಧನಕ್ಕೂ ಮೊದಲು ಬಾಂಗ್ಲಾದ ಜಮಲ್‌ಪುರದ ಮನೆಯ ಮೇಲೆ ದಾಳಿ ನಡೆದಿದೆ. ಸ್ಥಳೀಯರು ಹಾಗೂ ವಿದ್ಯಾರ್ಥಿಗಳು ಮನೆಯ ಬಳಿ ಬಂದು ವಸ್ತುಗಳನ್ನು ಹಾಳು ಮಾಡಿದ್ದಾರೆ. ಈ ಮನೆಯಲ್ಲಿ ಮೆಹರ್ ಅವರ ಕುಟುಂಬದವರು ವಾಸವಾಗಿದ್ದರು. ಆ ಬಳಿಕ ಮೆಹೆರ್ ಬಂಧನ ಆಗಿದೆ. ದಾಳಿಗೆ ಒಳಗಾಗಿರುವ ಮನೆ ಮೆಹರ್ ಅವರ ತಂದೆ ಇಂಜಿನಿಯರ್ ಮೊಹಮದ್ ಅಲಿಗೆ ಸೇರಿದೆ.

**ಮುಜಿಬುರ್ ರೆಹಮಾನ್ ಯಾರು?:** ಬಾಂಗ್ಲಾದೇಶದ ಸ್ವಾತಂತ್ರ್ಯ ಚಳುವಳಿಯ ನಾಯಕನಾಗಿ ಶೇಖ್ ಮುಜಿಬುರ್ ರೆಹಮಾನ್ ಗುರುತಿಸಿಕೊಂಡಿದ್ದರು. ಅವರು 1971ರಲ್ಲಿ ಪಾಕಿಸ್ತಾನದಿಂದ ದೇಶವನ್ನು ಬೇರ್ಪಡಿಸುವುದಾಗಿ ಘೋಷಿಸಿದರು. 1975ರಲ್ಲಿ ವಾಸವಿದ್ದ ಮನೆಯಲ್ಲಿ ಅವರನ್ನು ಕೊಲ್ಲಲಾಯಿತು. ನಂತರ ಹಸೀನಾ ಆ ಮನೆಯನ್ನು ವಸ್ತುಸಂಗ್ರಹಾಲಯವನ್ನಾಗಿ ಪರಿವರ್ತಿಸಿದರು. ಇದೇ ಮನೆಗೆ ಈಗ ಬೆಂಕಿ ಇಡುವ ಕೆಲಸ ಆಗಿದೆ.

**ನಟಿಯ ಹಿನ್ನೆಲೆ:** ಮೆಹರ್ ಅವುರ ಕಿರುತೆರೆಯಲ್ಲಿ ಹೆಚ್ಚು ಗುರುತಿಸಿಕೊಂಡಿದ್ದಾರೆ. ಈಗ ಅವರಿಗೆ 43 ವರ್ಷ ವಯಸ್ಸು. 1988ರಿಂದ ಕಿರುತೆರೆಯ ಜೊತೆ ನಂಟು ಜೊಂದಿದ್ದರು. 2004ರಲ್ಲಿ ಇವರು ವಿವಾಹ ಆದರು. 2012ರಲ್ಲಿ ಪತಿ ನಿಧನ ಹೊಂದಿದರು. ಮೆಹರ್‌ಗೆ ಇಬ್ಬರು ಮಕ್ಕಳಿದ್ದಾರೆ.

# ಹೊಸ ಚರಿತ್ರೆ ಸೃಷ್ಟಿಸಿದ ರಶೀದ್ ಖಾನ್!




ಅಫ್ಘಾನಿಸ್ತಾನದ ಸ್ಟಾರ್ ಬೌಲರ್ ರಶೀದ್ ಖಾನ್ ಟಿ20 ಕ್ರಿಕೆಟ್‌ನಲ್ಲಿ ಇತಿಹಾಸ ಸೃಷ್ಟಿಸಿದ್ದಾರೆ. ಅಂತರಾಷ್ಟ್ರೀಯ ಮತ್ತು ಡೊಮೆಸ್ಟಿಕ್ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ವಿಕೆಟ್ ಪಡೆದ ಬೌಲರ್ ಆಗಿ ವಿಶ್ವದಾಖಲೆ ಬರೆದಿದ್ದಾರೆ. ಇದರೊಂದಿಗೆ ವೆಸ್ಟ್ ಇಂಡೀಸ್‌ನ ಮಾಜಿ ಆಲ್‌ರೌಂಡರ್ ಡ್ವೇನ್ ಬ್ರಾವೋ ದಾಖಲೆಯನ್ನು ಮುರಿದು ಹಾಕಿದ್ದಾರೆ.

ದಕ್ಷಿಣ ಆಫ್ರಿಕಾದ ಖಂಖ20 ಲೀಗ್‌ನಲ್ಲಿ ಆಡುತ್ತಿರುವ ರಶೀದ್ ಖಾನ್ ಮಂಗಳವಾರ ನಡೆದ ಪಾರ್ಲ್ ರಾಯಲ್ಸ್ ವಿರುದ್ಧ ಕ್ವಾಲಿಫೈರ್ ಪಂದ್ಯದಲ್ಲಿ ವಿಶ್ವದಾಖಲೆ ಬರೆದಿದ್ದಾರೆ. ಈ ಪಂದ್ಯದಲ್ಲಿ ಎರಡು ವಿಕೆಟ್ ಪಡೆದ ಅವರು, ನಾಯಕನಾಗಿ ಮೊದಲ ಬಾರಿಗೆ ಎಂಐ ಕೇಪ್ ಟೌನ್ ತಂಡವನ್ನು ಫೈನಲ್‌ಗೆ ಕೊಂಡೊಯ್ಯುವಲ್ಲಿ ಯಶಸ್ವಿಯಾಗಿದ್ದಾರೆ.

ರಶೀದ್ ಖಾನ್ ವಿಶ್ವದಾಖಲೆ: 26 ವರ್ಷದ ರಶೀದ್ ಈ ವರೆಗೂ ಒಟ್ಟು 461 ಟಿ20 ಪಂದ್ಯಗಳನ್ನು ಆಡಿ 633 ವಿಕೆಟ್‌ಗಳನ್ನು ಪಡೆದಿದ್ದರೆ. ಇದರೊಂದಿಗೆ ಅತಿ ಹೆಚ್ಚು ಟಿ20 ವಿಕೆಟ್‌ಗಳನ್ನು ಪಡೆದ ಬೌಲರ್‌ಗಳ ಪಟ್ಟಿಯಲ್ಲಿ ಬ್ರಾವೋ ಅವರನ್ನು ಹಿಂದಿಕ್ಕಿ ಮೊದಲ ಸ್ಥಾನಕ್ಕೆ ತಲುಪಿದ್ದಾರೆ. ಬ್ರಾವೋ 582 ಪಂದ್ಯಗಳಲ್ಲಿ 631 ವಿಕೆಟ್‌ಗಳನ್ನು ಪಡೆದಿದ್ದಾರೆ. ರಶೀದ್ ಅಂತರಾಷ್ಟ್ರೀಯ ಟಿ20 ಕ್ರಿಕೆಟ್‌ನಲ್ಲಿ 161 ವಿಕೆಟ್‌ಗಳನ್ನು ಪಡೆದಿದ್ದರೇ, ದೇಶಿ ಲೀಗ್ ಕ್ರಿಕೆಟ್‌ನಲ್ಲಿ 472 ವಿಕೆಟ್‌ಗಳನ್ನು ಉರುಳಿಸಿದ್ದಾರೆ.

ರಶೀದ್ ತಮ್ಮ ಟಿ20 ವೃತ್ತಿಜೀವನದಲ್ಲಿ ಅಫ್ಘಾನಿಸ್ತಾನ, ಸನ್‌ರೈಸರ್ಸ್ ಹೈದರಾಬಾದ್, ಗುಜರಾತ್ ಟೈಟಾನ್ಸ್, ಎಂಐ ಕೇಪ್ ಟೌನ್, ಅಡಿಲೇಡ್ ಸ್ಟ್ರೈಕರ್ಸ್, ಗಯಾನಾ ಅಮೆಜಾನ್ ವಾರಿಯರ್ಸ್, ಎಂಐ ಎಮಿರೇಟ್ಸ್, ಲಾಹೋರ್ ಖಲಂದರ್ಸ್, ಸಸೆಕ್ಸ್ ಶಾರ್ಕ್ಸ್, ಟ್ರೆಂಟ್ ರಾಕೆಟ್ಸ್ ಮತ್ತು ಇತರ ತಂಡಗಳನ್ನು ಪ್ರತಿನಿಧಿಸಿದ್ದಾರೆ.



# ಬೆಂಗಾಲಿಯಾಗಿ ಬದಲಾದ ನಮ್ರತಾ

ಕನ್ನಡ ಕಿರುತೆರೆ ನಟಿ, ಬಿಗ್ ಬಾಸ್ ಸ್ಪರ್ಧಿ ನಮ್ರತಾ ಗೌಡ ಕೆಂಪು ಬಣ್ಣ ಸೀರೆಯಲ್ಲಿ ಸಖತ್ ಮಿಂಚಿದ್ದಾರೆ. ನಮ್ಮಿ ನೋಡಲು ಬೆಂಗಾಲಿ ಹುಡುಗಿಯಂತೆ ಕಾಣಿಸುತ್ತಿದ್ದಾರೆ.

ಕೆಂಪು ಬಣ್ಣದ ಫ್ಯಾನ್ಸಿ ಸೀರೆಗೆ ವೆಲ್ವೆಟ್ ಬಣ್ಣದ ಡಿಸೈನರ್ ಬ್ಲೌಸ್ ಧರಿಸಿದ್ದಾರೆ. ಎರಡೂ ಕೈಗೆ ಚಿನ್ನದ ಬಳೆ ಹಾಗೂ ಬೆಂಗಾಲಿ ಶೈಲಿಯ ಕೆಂಪು ಬಣ್ಣದ ಬಳೆ ಧರಿಸಿದ್ದಾರೆ.ಸವಿತಾ ರೆಡ್ಡಿ ಈ ರೀತಿ ಸ್ಟೈಲಿಂಗ್ ಮಾಡಿರುವುದು ಹಾಗೂ ರಕ್ಷಿತಾ ಮೇಕಪ್ ಮಾಡಿರುವುದು. ಟೀಂ ಏಎಮ್ ಸ್ಟುಡಿಯೋ ಫೋಟೋ ಕ್ಲಿಕ್ ಮಾಡಿರುವುದು. ನಮ್ರತಾ ನೋಡಲು ಸಖತ್ ಬ್ಯೂಟಿಫುಲ್ ಆಗಿ ಕಾಣಿಸುತ್ತಿರುವ ಕಾರಣ ಮದುವೆ ಪ್ರಪೋಸಲ್ ಸೆಂಡ್ ಮಾಡೋಕೆ ನಾನು ರೆಡಿ ಎಂದು ಹುಡುಗರು ಕಾಲೆಳೆಯುತ್ತಿದ್ದಾರೆ. ಬಿಗ್ ಬಾಸ್ ಸೀಸನ್ 10ರ ನಂತರ ನಮ್ರತಾ ಯಾವ ಸೀರಿಯಲ್ ಅಥವಾ ಸಿನಿಮಾ ಪ್ರಾಜೆಕ್ಟ್ ಒಪ್ಪಿಕೊಂಡಿಲ್ಲ. ಬದಲಿಗೆ ಯೂಟ್ಯೂಬ್ ವ್ಲಾಗ್, ಫೋಟೋಶೂಟ್ ಮತ್ತು ಟ್ರಾವಲ್ ಮಾಡುತ್ತಿದ್ದಾರೆ. ಪುಟ್ಟ ಗೌರಿ ಮದುವೆ ಮತ್ತು ನಾಗಿಣಿ ಸೀರಿಯಲ್‌ನಲ್ಲಿ ನಮ್ರತಾ ನಟಿಸಿದ್ದಾರೆ. ಬಿಗ್ ಬಾಸ್ ರಿಯಾಲಿಟಿ ಶೋನಲ್ಲಿ ಕಾಣಿಸಿಕೊಂಡ ಮೇಲೆ ನಮ್ರತಾ ಸಿಕ್ಕಾಪಟ್ಟೆ ಜನಪ್ರಿಯತೆ ಪಡೆದರು.

# ಪರಭಾಷೆಯ ಸಿನಿ ರಂಗದಲ್ಲಿ ರುಕ್ಮಿಣಿ ಮೋಡಿ



ಪ್ರಸ್ತುತ ಕನ್ನಡದ ಸ್ಟಾರ್ ನಟಿಯರಲ್ಲಿ ರುಕ್ಮಿಣಿ ವಸಂತ್ ಹೆಸರು ಮೊದಲಲ್ಲೇ ಇರುತ್ತದೆ. ಯಾಕೆಂದರೆ ಅವರ ನಟನೆಯ ಪ್ರತಿಯೊಂದು ಸಿನಿಮಾವೂ ಪ್ರೇಕ್ಷಕರಿಗೆ ಅಚ್ಚುಮೆಚ್ಚು. ಸದ್ಯ ಟಾಪ್ ಟ್ರೆಂಡ್‌ನಲ್ಲಿರುವ ಅವರು ಪ್ರತಿಭಾವಂತ ನಟಿಯರಲ್ಲಿ ಬರೀ ಕರ್ನಾಟಕದಲ್ಲಿ ಮಾತ್ರವಲ್ಲದೇ ಭಾರತದಲ್ಲೇ ಸ್ಥಾನವನ್ನು ಗಳಿಸಿದ್ದಾರೆ.

ಇವರ ಇನ್ನೊಂದು ಸ್ಪೆಷಾಲಿಟಿ ಏನಪ್ಪಾ ಅಂದ್ರೆ ನಟಿಸಿದ ಸಿನಿಮಾಗಳಲ್ಲೆಲ್ಲಾ ದುರಂತ ನಾಯಕಿಯಾಗಿ ಕಾಣಿಸಿಕೊಂಡಿರುವುದು. ಕೆಲವು ಅಭಿಮಾನಿಗಳಂತೂ ಇವರನ್ನು ಮುಂಗಾರು ಮಳೆ ಗಣೇಶ್ ಅವರಿಗೆ ಹೋಲಿಸುತ್ತಾರೆ. ಹಾಗೇ ನಟನೆಯ ಜೊತೆಗೆ ಇವರ ಫ್ಯಾಮಿಲಿ ಬ್ಯಾಗ್ರೌಂಡ್ ಕೂಡ ಅಷ್ಟೇ ಕುತೂಹಕಾರಿಯಾಗಿದೆ. ಅದೇನು ಅಂತ ನೋಡುವುದಾದರೇ. ದಕ್ಷಿಣ ಭಾರತದ ಹೆಸರಾಂತ ನಟಿಯರಲ್ಲಿ ಒಬ್ಬರಾಗಿರುವ ರುಕ್ಮಿಣಿ ವಸಂತ್ ಅವರ ಸಿನಿ ಪಯಣ ಆರಂಭವಾದದ್ದು ಕನ್ನಡದ ವಿಶೇಷ ಚಿತ್ರ 'ಬೀರಬಲ್' ಮೂಲಕ. ಹೌದು, 2019ರಲ್ಲಿ 'ಬೀರಬಲ್ ಟ್ರೈಲಾಜಿ ಕೇಸ್ 1: ಫೈಂಡಿಂಗ್ ವಜ್ರಮುನಿ'ಯಲ್ಲಿ ಎಂ.ಜಿ. ಶ್ರೀನಿವಾಸ್ ಅವರೊಂದಿಗೆ ನಟಿಸಿದ್ದರು. ಈ ಮುಖಾಂತರ ಕನ್ನಡ ಸಿನಿ ಪ್ರೇಕ್ಷಕರಿಗೆ ಪರಿಚಯವಾದ ನಟಿ ಫೇಮಸ್ ಆಗಿದ್ದು 2023ರಲ್ಲಿ ತೆರೆಕಂಡ 'ಸಪ್ತಸಾಗರದ ಆಚೆ ಎಲ್ಲೋ' ಸಿನಿಮಾ ಬಳಿಕ.

'ಸಪ್ತ ಸಾಗರದಾಚೆ ಎಲ್ಲೋ' ಚಿತ್ರದ ನಂತರ ಅವರಿಗೆ ವ್ಯಾಪಕವಾದ ಜನಮನ್ನಣೆ ದೊರೆಯುವುದರೊಂದಿಗೆ ಇದರಲ್ಲಿನ ನಟನೆಗಾಗಿ ಅತ್ಯುತ್ತಮ ನಟಿ ಪ್ರಶಸ್ತಿಯೂ ದೊರೆಯಿತು. ನಿಷ್ಕಲ್ಮಶ ಪ್ರೀತಿಯ ಪಾತ್ರಗಳಿಗೆ ಹೇಳಿ ಮಾಡಿಸಿದಂತಿರುವ ರುಕ್ಮಿಣಿ ವಸಂತ್ ಬೆಂಗಳೂರಿನ ಕನ್ನಡಿಗರ ಕುಟುಂಬವೊಂದರಲ್ಲಿ ಹುಟ್ಟಿದವರು.

ಇವರು ನಟಿಯಾಗಿ ಗುರುತಿಸಿಕೊಳ್ಳುವ ಮೊದಲೇ ಇವರ ಕುಟುಂಬ ಎಲ್ಲೆಡೆ ಗೌರವವನ್ನು ಪಡೆದದ್ದೇ ಆಗಿತ್ತು. ಅದಕ್ಕೆ ಕಾರಣ ರುಕ್ಮಿಣಿ ವಸಂತ್ ಅವರ ತಂದೆ. ಅವರ ಹೆಸರು ಕರ್ನಲ್ ವಸಂತ್ ವೇಣುಗೋಪಾಲ್. ಭಾರತದ ಅತ್ಯುನ್ನತ ಸೇನಾ ಪದಕವಾದ ಅಶೋಕ ಚಕ್ರವನ್ನು ಕರ್ನಾಟಕದಿಂದ ಪಡೆದ ಮೊದಲ ವ್ಯಕ್ತಿ ವಸಂತ್ ವೇಣುಗೋಪಾಲ್. ರುಕ್ಮಿಣಿಯವರ ತಂದೆ 2007 ರಲ್ಲಿ ಸೇನಾ ಕಾರ್ಯಾಚರಣೆಯಲ್ಲಿದ್ದಾಗ ಮೃತಪಟ್ಟರು. ಜಮ್ಮು ಮತ್ತು ಕಾಶ್ಮೀರದ ಉರಿಯಲ್ಲಿ ಶಸ್ತ್ರಸಜ್ಜಿತ ನುಸುಳುಕೋರರನ್ನು ಗಡಿ ದಾಟದಂತೆ ತಡೆಯುತ್ತಿದ್ದಾಗ ಅವರು ವೀರ ಮರಣವನ್ನಪ್ಪಿದರು. ಈ ಘಟನೆಯ ಬಳಿಕ ರುಕ್ಮಿಣಿಯವರ ತಾಯಿ ಸುಭಾಷಿಣಿ ವಸಂತ್ ಕರ್ನಾಟಕದಲ್ಲಿರುವ ಯುದ್ಧದಲ್ಲಿ ಮಡಿದ ಯೋಧರ ಮಡದಿಯರಿಗಾಗಿ ಯುದ್ಧ ವಿಧವೆಯರ ಪ್ರತಿಷ್ಠಾನವನ್ನು ಸ್ಥಾಪಿಸಿದರು. ಇದಲ್ಲದೆ ನಟಿಯ ತಾಯಿ ಹೆಸರಾಂತ ಭರತನಾಟ್ಯ ನೃತ್ಯಗಾರ್ತಿಯೂ ಹೌದು. ತಂದೆ ಆರ್ಮಿಯಲ್ಲಿದ್ದುದರಿಂದ ರುಕ್ಮಿಣಿಯವರು ತಮ್ಮ ಹೆಚ್ಚಿನ ಶಿಕ್ಷಣವನ್ನು ಆರ್ಮಿ ಸ್ಕೂಲ್‌ಗಳಲ್ಲೇ ಪೂರ್ಣಗೊಳಿಸಿದರು. ನಂತರ ಲಂಡನ್‌ನ ಬ್ಲೂಮ್ಸ್‌ಬರಿಯಲ್ಲಿರುವ ಪ್ರತಿಷ್ಠಿತ ರಾಯಲ್ ಅಕಾಡೆಮಿ ಆಫ್ ಡ್ರಾಮಾಟಿಕ್ ಆರ್ಟ್ಸ್‌ನಿಂದ ನಟನೆಯಲ್ಲಿ ಪದವಿ ಪಡೆದರು. ಇಲ್ಲಿ ದೊರೆತ ತರಬೇತಿಯು ಉತ್ತಮ ನಟಿಯಾಗಿ ಹೊರಹೊಮ್ಮಲು ಅವರಿಗೆ ಸಹಾಯಕವಾಯಿತು.

'ಸಪ್ತ ಸಾಗರದಾಚೆ ಎಲ್ಲೋ – ಸೈಡ್ ಎ' ಮತ್ತು ಸೈಡ್ ಬಿನಲ್ಲಿ ರಕ್ಷಿತ್ ಶೆಟ್ಟಿಗೆ ನಾಯಕಿಯಾಗಿದ್ದ ನಟಿ ಕನ್ನಡ ಪ್ರೇಕ್ಷಕರ ನೆಚ್ಚಿನ ಪುಟ್ಟಿಯಾಗಿ ಬದಲಾದರು. ಅವರ ಪ್ರಿಯಾ ಪಾತ್ರವು ಸಹಜತೆಯೊಂದಿಗೆ ಮೂಡಿಬಂದಿತ್ತಲ್ಲದೇ ಸಿನಿಮಾ ಯಶಸ್ವಿಯಾಗಲೂ ಕಾರಣವಾಯಿತು. ಈ ಸಿನಿಮಾದ ಬಳಿಕ ನಟ ಗಣೇಶ್ ಅವರಿಗೆ ನಾಯಕಿಯಾಗಿ 'ಬಾನದಾರಿಯಲ್ಲಿ' ಸಿನಿಮಾದಲ್ಲಿ ನಟಿಸಿದರು. ಶಿವರಾಜ್ ಕುಮಾರ್ ಅವರ 'ಭೈರತಿ ರಣಗಲ್', ಶ್ರೀಮುರಳಿಯವರ 'ಬಘೀರ' ಹೀಗೆ ಹೆಸರಾಂತ ಚಿತ್ರಗಳಿಗೆ ನಾಯಕಿಯಾಗುವ ಮುಖಾಂತರ ಕನ್ನಡದ ಬಹುಬೇಡಿಕೆಯ ನಟಿಯರಲ್ಲಿ ಒಬ್ಬರಾಗಿ ಗುರುತಿಸಿಕೊಂಡಿದ್ದಾರೆ. ಇನ್ನು ಕನ್ನಡ ಮಾತ್ರವಲ್ಲದೆ ಹಿಂದಿ ಚಿತ್ರದಲ್ಲಿಯೂ ರುಕ್ಮಿಣಿ ಕಾಣಿಸಿಕೊಂಡಿದ್ದಾರೆ. 2019ರಲ್ಲಿ ತೆರೆ ಕಂಡ ಹಿಂದಿ ಚಲನಚಿತ್ರ 'ಅಪ್‌ಸ್ಟಾರ್ಟ್ಸ್'ನಲ್ಲಿ ನಟಿ ಅಭಿನಯಿಸಿದ್ದರು. ಹಾಗೆಯೇ 2024ರಲ್ಲಿ ತೆರೆಕಂಡ 'ಅಪ್ಪು ಡೋ ಇಪ್ಪುಡೋ' ತೆಲುಗು ಸಿನಿಮಾದಲ್ಲಿ ನಟ ನಿಖಿಲ್ ಸಿದ್ದಾರ್ಥ್ ಅವರಿಗೆ ಜೋಡಿಯಾಗಿ ಕಾಣಿಸಿಕೊಂಡಿದ್ದಾರೆ.

# ವಂಚನೆ ಆರೋಪ ನಟ ಸೋನುಸೂದ್ ವಿರುದ್ಧ ಅರೆಸ್ಟ್ ವಾರಂಟ್

**ನಕಲಿ ರಿಜಿಕಾ ಕಾಯ್ನ್‌ನಲ್ಲಿ ಹೂಡಿಕೆ ಮಾಡುವಂತೆ ಆಮಿಷ ಒಡ್ಡಲಾಗಿದೆ, ಇಲ್ಲಿ ವಂಚನೆ ನಡೆದಿದೆ**

ವಂಚನೆ ಆರೋಪ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ಬಾಲಿವುಡ್ ನಟ ಹಾಗೂ ಸಮಾಜ ಸೇವಕ ಸೋನು ಸೂದ್ ವಿರುದ್ಧ ಪಂಜಾಬ್ ನ್ಯಾಯಾಲಯ ಅರೆಸ್ಟ್ ವಾರಂಟ್ ಹೊರಡಿಸಿದೆ. ಲುಧಿಯಾನ ಜುಡಿಷಿಯಲ್ ಮ್ಯಾಜಿಸ್ಟ್ರೇಟ್ ರಮಣ್‌ಪ್ರೀತ್ ಕೌರ್ ಅವರು ಈ ವಾರಂಟ್ ಹೊರಡಿಸಿದ್ದಾರೆ.

ಲುಧಿಯಾನ ಮೂಲದ ವಕೀಲ ರಾಜೇಶ್ ಖನ್ನಾ ಅವರು ಮೋಹಿತ್ ಶುಕ್ಲಾ ಎಂಬುವವರ ವಿರುದ್ಧ 10 ಲಕ್ಷ ರೂಪಾಯಿ ವಂಚನೆ ಆರೋಪದ ಮೇಲೆ ಪ್ರಕರಣ ದಾಖಲಿಸಿದ್ದಾರೆ. ನಕಲಿ ರಿಜಿಕಾ ಕಾಯ್ನ್‌ನಲ್ಲಿ ಹೂಡಿಕೆ ಮಾಡುವಂತೆ ಆಮಿಷ ಒಡ್ಡಲಾಗಿದೆ, ಇಲ್ಲಿ ವಂಚನೆ ನಡೆದಿದೆ ಎಂದು ಆರೋಪಿಸಿದ್ದಾರೆ.

ಸಾಕ್ಷ್ಯ ಹೇಳಲು ನಟ ಸೋನು ಸೂದ್ ಅವರನ್ನು ನ್ಯಾಯಾಲಯಕ್ಕೆ ಕರೆಯಲಾಗಿತ್ತು. ಆದರೆ ಅವರು ಹಾಜರಾಗಲು ವಿಫಲರಾದ ಕಾರಣ ಅರೆಸ್ಟ್ ವಾರಂಟ್ ಹೊರಡಿಸಲಾಯಿತು. ಲುಧಿಯಾನ ನ್ಯಾಯಾಲಯವು ತನ್ನ ಆದೇಶದಲ್ಲಿ, ಮುಂಬೈನ ಅಂಧೇರಿ ಪಶ್ಚಿಮದಲ್ಲಿರುವ ಓಶಿವಾರಾ ಪೊಲೀಸ್ ಠಾಣೆಯ ಅಧಿಕಾರಿಗೆ ಸೋನು ಸೂದ್ ಅವರನ್ನು ಬಂಧಿಸುವಂತೆ ನಿರ್ದೇಶಿಸಿದೆ.

ಆದೇಶದಲ್ಲಿ, "R/O H.NO 605/606 ಕ್ಯಾಸಾಬ್ಲಾಂಕ್ ಅಪಾರ್ಟ್‌ಮೆಂಟ್‌ನ ನಿವಾಸಿ ಸೋನು ಸೂದ್ (ಖ/ಠ, ಫ/ಠ, ಆ/ಠ) ಅವರಿಗೆ ಸಮನ್ಸ್ ಅಥವಾ ವಾರಂಟ್ ಅನ್ನು ಸರಿಯಾಗಿ ನೀಡಲಾಗಿದೆ. ಆದರೆ, ಅವರು ಹಾಜರಾಗಲು ವಿಫಲರಾಗಿದ್ದಾರೆ. ಸೋನು ಸೂದ್ ಅವರನ್ನು ಬಂಧಿಸಿ ನ್ಯಾಯಾಲಯದ ಎದುರು ಕರೆತರಲು ಆದೇಶಿಸಲಾಗಿದೆ" ಎಂದಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಫೆಬ್ರವರಿ 10 ರಂದು ನಿಗದಿಪಡಿಸಲಾಗಿದೆ.

ಸೋನು ಸೂದ್ ಬ್ರ್ಯಾಂಡ್ ಅಂಬಾಸಿಡರ್ ಆಗಿರುವ ಕಂಪನಿಗೆ ಸಂಬಂಧಿಸಿದ ವಂಚನೆ ಪ್ರಕರಣ ಇದಾಗಿದೆ. ಈ ಹಿನ್ನೆಲೆ ನಟನಿಗೆ ನಿನ್ನೆ, ಲುಧಿಯಾನ ಜಿಲ್ಲಾ ನ್ಯಾಯಾಲಯವು ನೋಟಿಸ್ ನೀಡಿ, ಸಮನ್ಸ್ ಜಾರಿ ಮಾಡಿದೆ. ವಕೀಲ ರಾಜೇಶ್ ಖನ್ನಾ ವಿಷಯವನ್ನು ದೃಢಪಡಿಸಿದ್ದಾರೆ. ಅವರು ಈ ಪ್ರಕರಣದ ವಿಚಾರಣೆ ನಡೆಸುತ್ತಿದ್ದಾರೆ. ಪ್ರಕರಣದ ಮುಂದಿನ ವಿಚಾರಣೆ ಫೆಬ್ರವರಿ 10ರಂದು ನಡೆಯಲಿದೆ.



ಬಹುಭಾಷಾ ನಟ ಸೋನು ಸೂದ್ ಅವರು ತಮ್ಮ ಸಮಾಜ ಸೇವೆಗಳಿಂದಾಗಿ ವ್ಯಾಪಕವಾಗಿ ಗುರುತಿಸಲ್ಪಟ್ಟಿದ್ದಾರೆ. ಇತ್ತೀಚೆಗಷ್ಟೇ ತಮ್ಮ ಸೂದ್ ಚಾರಿಟಿ ಫೌಂಡೇಶನ್ ಮೂಲಕ ಆಂಧ್ರಪ್ರದೇಶ ಸರ್ಕಾರಕ್ಕೆ ನಾಲ್ಕು ಆಂಬ್ಯುಲೆನ್ಸ್‌ಗಳನ್ನು ಡೊನೇಟ್ ಮಾಡಿ ಗಮನ ಸೆಳೆದಿದ್ದರು. ಆಂಧ್ರ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ನಟನಿಗೆ ಧನ್ಯವಾದ ಅರ್ಪಿಸಿದ್ದರು. ಅಂದು ಮಾತನಾಡಿದ್ದ ನಟ, ಜನರಿಗೆ ಸಹಾಯ ಮಾಡುವ ಮನೋಭಾವ ಕೋವಿಡ್ ಸಂದರ್ಭ ಶುರುವಾಯಿತು. ಇದನ್ನು ಮುಂದುವರಿಸಲು ಬಯಸುತ್ತೇನೆ ಎಂದು ತಿಳಿಸಿದ್ದರು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **9448074878**